ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: **ರಮೇಶರೆಡ್ಡಿ** | **9448 604450**

Mallammanudi Regional News Paper | Editor: **Ramesh Reddy** | RNI NO:KARKAN/2011/48371

VOLUME - 13 ಸಂಪುಟ-13 | ISSUE - 107 ಸಂಚಿಕೆ- 107 | PAGE-8 ಪುಟ-8 | ಬುಧುವಾರ 04.06.2025 | RS.2/- ಬೆಲೆ 2/-

# ಸಂಸತ್ ವಿಶೇಷ ಅಧಿವೇಶನಕ್ಕೆ ಆಗ್ರಹಿಸಿ ಪ್ರತಿಪಕ್ಷಗಳಿಂದ ಪ್ರಧಾನಿಗೆ ಪತ್ರ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.3:ರಾಷ್ಟ್ರರಾಜಧಾನಿಯಲ್ಲಿ ಆಪರೇಷನ್ ಸಿಂಧೂರ್ ಕುರಿತು ಸಭೆ ನಡೆಸಿದ್ದ ಇಂಡಿಯಾ ಬ್ಲಾಕ್ ಪಕ್ಷಗಳು, 16 ವಿರೋಧ ಪಕ್ಷಗಳ ನಾಯಕರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು, ಆಪರೇಷನ್ ಸಿಂಧೂರ್ ಕುರಿತು ಸಂಸತ್ ವಿಶೇಷ ಅಧಿವೇಶನ ಕರೆಯುವಂತೆ ಒತ್ತಾಯಿಸಿದ್ದಾರೆ.

ಕಾಂಗ್ರೆಸ್,ತೃಣಮೂಲ ಕಾಂಗ್ರೆಸ್, ರಾಷ್ಟ್ರೀಯ ಜನತಾದಳ,ಸಮಾಜವಾದಿ ಪಕ್ಷ ಮತ್ತು ಶಿವಸೇನೆ(ಯುಬಿಟಿ) ಸೇರಿದಂತೆ ಹಲವಾರು ಪಕ್ಷಗಳ ನಾಯಕರು ಈ ಸಭೆಯಲ್ಲಿ ಭಾಗವಹಿಸಿದ್ದರು.ಸಂಸತ್ ವಿಶೇಷ ಅಧಿವೇಶನ ನಡೆಸಬೇಕು ಎಂದು ಆಗ್ರಹಿಸಿ ಪ್ರಧಾನಿ ಮೋದಿಗೆ ಬರೆದ ಪತ್ರಕ್ಕೆ ಇಂಡಿಯಾ ಬ್ಲಾಕ್ ಸಂಸದರು ಸಹಿ ಹಾಕಿದ್ದಾರೆ ಎಂದು ವಿರೋಧ ಪಕ್ಷಗಳ ನಾಯಕರು ತಿಳಿಸಿದ್ದಾರೆ.


ಕಾಂಗ್ರೆಸ್‌ನ ಜೈರಾಮ್ ರಮೇಶ್ ಮತ್ತು ದೀಪೇಂದ್ರ ಹೂಡಾ, ಟಿಎಂಸಿ ನಾಯಕ ಡೆರೆಕ್ ಒ'ಬ್ರೇನ್, ಎಸ್‌ಪಿಯ ರಾಮಗೋಪಾಲ್ ಯಾದವ್, ಆರ್‌ಜೆಡಿಯ ಮನೋಜ್ ಝಾ ಮತ್ತು ಶಿವಸೇನೆ(ಯುಬಿಟಿ)ಯ ಸಂಜಯ್ ರಾವತ್ ಸಭೆಯಲ್ಲಿ ಭಾಗವಹಿಸಿದ್ದರು.

ಡಿಎಂಕೆ ಕೂಡ ಪ್ರಧಾನಿ ಮೋದಿಗೆ ಬರೆದ ಪತ್ರಕ್ಕೆ ಸಹಿ ಮಾಡಿದೆ. ಆದರೆ ಕರುಣಾನಿಧಿ ಅವರ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಪಕ್ಷ ಸಭೆಯಲ್ಲಿ ಭಾಗವಹಿಸಲು ಸಾಧ್ಯವಾಗಲಿಲ್ಲ.

ನ್ಯಾಷನಲ್ ಕಾನ್ಫರೆನ್ಸ್, ಸಿಪಿಐ(ಎಂ), ಐಯುಎಂಎಲ್, ಸಿಪಿಐ, ರೆವಲ್ಯೂಷನರಿ ಸೋಷಿಯಲಿಸ್ಟ್ ಪಾರ್ಟಿ(ಆರ್‌ಎಸ್‌ಪಿ), ಕೇರಳ ಕಾಂಗ್ರೆಸ್, ಎಂಡಿಎಂಕೆ, ಸಿಪಿಐ(ಎಂಎಲ್) ಲಿಬರೇಶನ್ ಕೂಡ ಪತ್ರಕ್ಕೆ ಸಹಿ ಹಾಕಿವೆ ಎಂದು ವಿರೋಧ ಪಕ್ಷದ ನಾಯಕರು ತಿಳಿಸಿದ್ದಾರೆ. ಆಮ್ ಆದ್ಮಿ ಪಕ್ಷ(ಎಎಪಿ) ಸಭೆಗೆ ಗೈರಾಗಿದ್ದರೂ ಈ ಬೇಡಿಕೆಯೊಂದಿಗೆ ಪ್ರಧಾನಿಗೆ ಪ್ರತ್ಯೇಕ ಪತ್ರ ಬರೆಯಲಿದೆ.

ಆದಾಗ್ಯೂ, ವಿಶೇಷ ಅಧಿವೇಶನಕ್ಕೆ ಒತ್ತಾಯಿಸುತ್ತಿರುವ ಪಕ್ಷಗಳಲ್ಲಿ ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ(ಎಸ್‌ಪಿ) ಇಲ್ಲ.ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಹಲವಾರು ವಿರೋಧ ಪಕ್ಷಗಳು ಸಂಸತ್ ವಿಶೇಷ ಅಧಿವೇಶನಕ್ಕೆ ಒತ್ತಾಯಿಸುತ್ತಿವೆ. ಆಪರೇಷನ್ ಸಿಂಧೂರ್ ಬಗ್ಗೆ ಸಂಸದರಿಗೆ ಮಾಹಿತಿ ನೀಡಲು ಕರೆದಿದ್ದ ಸರ್ವಪಕ್ಷ ಸಭೆಯಲ್ಲಿಯೂ ಈ ಬೇಡಿಕೆ ಇಡಲಾಗಿತ್ತು.

## ಐಪಿಎಲ್ ಸಮಾರೋಪದಲ್ಲಿ ಆಪರೇಷನ್ ಸಿಂಧೂರ' ವಿಜಯೋತ್ಸವ : ಯೋಧರಿಗೆ ಗೀತನಮನ



ಮಲ್ಲಮ್ಮ ನುಡಿ ವಾರ್ತೆ ಮುಂಬೈ:ಜೂ.3:18ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಯಶಸ್ವಿಯಾಗಿ ನೆರವೇರಿದೆ. ಇಂದು ಪಂಜಾಬ್ ಕಿಂಗ್ಸ್ ಮತ್ತು ಆರ್‌ಸಿಬಿ ನಡುವಿನ ಫೈನಲ್ ಪಂದ್ಯ ಮುಕ್ತಾಯದೊಂದಿಗೆ ಈ ಆವೃತ್ತಿಗೆ ತೆರೆ ಬೀಳಲಿದೆ. ಇಂದು ಫೈನಲ್ ಪಂದ್ಯಕ್ಕೂ ಮುನ್ನ ನಡೆಯುತ್ತಿರುವ ಸಮಾರೋಪ ಸಮಾರಂಭದಲ್ಲಿ ?ಆಪರೇಷನ್ ಸಿಂಧೂರ' ವಿಜಯೋತ್ಸವ ಆಚರಿಸಲಾಯಿತು.

ಇಂದಿನ ಫೈನಲ್ ಪಂದ್ಯವನ್ನು ಭಾರತೀಯ ಸೇನೆಗೆ ಅರ್ಪಿಸಲು ಬಿಸಿಸಿಐ ನಿರ್ಧಾರ ಕೈಗೊಂಡಿತ್ತು. ಅದಕ್ಕಾಗಿ ಪಂದ್ಯ ಆರಂಭಕ್ಕೂ ಮುನ್ನ ಮೂರು ಸೇನೆಗಳಿಗೆ ಗೌರವ ಸಲ್ಲಿಸಲಾಯಿತು. ದೇಶಭಕ್ತಿ ನೃತ್ಯಗಳು, ಶಂಕರ್ ಮಹಾದೇವನ್, ಶ್ರೇಯಾ ಘೋಷಾಲ್ ತಂಡದಿಂದ ದೇಶಭಕ್ತಿ ಗೀತೆಗಳ ನಮನ ಸಲ್ಲಿಸಲಾಯಿತು.

45 ನಿಮಿಷಗಳ ಈ ಸಮಾರಂಭದಲ್ಲಿ ಖ್ಯಾತ ಹಿನ್ನೆಲೆ ಗಾಯಕರ ದೇಶಭಕ್ತಿ ಗೀತೆಗಳು ಕ್ರೀಡಾಂಗಣದಲ್ಲಿ ನೆರೆದಿದ್ದ ಅಭಿಮಾನಿಗಳ ಮೈನವಿರೇಳುವಂತೆ ಮಾಡಿದವು. ಜೈ ಹೋ, ವಂದೇ ಮಾತರಂ, ಹೇ ವತನ್ ಮೇರೆವತನ್ ಮೊದಲಾದ ಗೀತೆಗಳಿಗೆ ಅಭಿಮಾನಿಗಳು ತಲೆದೂಗಿದರು.

(2ನೇ ಪುಟ ನೋಡಿ)

## ಪಾಕಿಸ್ತಾನದ 48 ಗಂಟೆಗಳ ಪ್ಲಾನ್ 8 ಗಂಟೆಯಲ್ಲೇ ಉಡೀಸ್ : ಸಿಡಿಎಸ್ ಜನರಲ್ ಅನಿಲ್ ಚೌಹಾಣ್



ಮಲ್ಲಮ್ಮ ನುಡಿ ವಾರ್ತೆ ಪುಣೆ. ಜೂ.3: ಭಾರತದ ಮೇಲೆ ದಾಳಿ ಮಾಡುವ ಪಾಕಿಸ್ತಾನದ 48 ಗಂಟೆಗಳ ಪ್ಲಾನ್ ಕೇವಲ 8 ಗಂಟೆಯಲ್ಲೇ ಉಡೀಸ್ ಆಗಿ ಕದನ ವಿರಾಮ ಒಪ್ಪಂದಕ್ಕೆ ಕೇಳುವ ಮೂಲಕ ಮಂಡಿಯೂರಿತು ಎಂದು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಮಂಗಳವಾರ ಹೇಳಿದ್ದಾರೆ.

ಪುಣೆಯ ಸಾವಿತ್ರಿ ಬಾಯಿ ಪುಲೆ ವಿಶ್ವವಿದ್ಯಾಲಯದಲ್ಲಿ ಮಾತನಾಡಿದ ಜನರಲ್ ಚೌಹಾಣ್ ಅವರು ಮೇ 10 ರ ಘಟನೆಗಳನ್ನು ವಿವರಿಸಿದರು. ಎರಡು ದಿನಗಳಲ್ಲಿ ಭಾರತ ಮಂಡಿಯೂರುವಂತೆ ಮಾಡುವ ಉದ್ದೇಶದಿಂದ ಪಾಕಿಸ್ತಾನವು ಅನೇಕ ಸಂಘಟಿತ ದಾಳಿಗಳನ್ನು ಪ್ರಾರಂಭಿಸಿತ್ತು. 48 ಗಂಟೆಗಳಲ್ಲಿ ಭಾರತವನ್ನು ಮಂಡಿಯೂರುವಂತೆ ಮಾಡುವ ಉದ್ದೇಶದಿಂದ ಅನೇಕ ಕಡೆಗಳಲ್ಲಿ ದಾಳಿ ಮಾಡಿತ್ತು. ಇದರೊಂದಿಗೆ ಉದ್ವಿಗ್ನತೆ ಉಂಟಾಗಿತ್ತು. ನಾವು ನಿಜವಾಗಿಯೂ ಭಯೋತ್ಪಾದಕರನ್ನು ಮಾತ್ರ ಗುರಿಯಾಗಿಸಿ ಹೊಡೆದಿದ್ದೇವೆ ಎಂದರು. ಉದ್ವಿಗ್ನತೆ ವೇಳೆ ಸೇನಾ ಕಾರ್ಯಾಚರಣೆ 48 ಗಂಟೆಗಳ ಕಾಲ ಮುಂದುವರೆಯುತ್ತದೆ ಎಂದು ಅವರು ಭಾವಿಸಿದ್ದರು. ಆದರೆ ಅದು ಕೇವಲ 8 ಗಂಟೆಗಳಲ್ಲಿಯೇ ಉಡೀಸ್ ಆಗಿ ದೂರವಾಣಿ ಮೂಲಕ ಮಾತುಕತೆಗೆ ಮುಂದಾದರು. ಮೇ 7 ರಂದು ಉಗ್ರರ ಶಿಬಿರಗಳ ಮೇಲೆ ದಾಳಿ ನಡೆಸಿದ ನಂತರ ಭಾರತವು ಪಾಕಿಸ್ತಾನಕ್ಕೆ ಮಾಹಿತಿ ನೀಡಿತ್ತು. ಅಲ್ಲದೇ ಯಾವುದೇ ರೀತಿಯ ಉದ್ವಿಗ್ನತೆಗೆ ಮುಂದಾದರೆ ಕಠಿಣ ಕ್ರಮದ ಎಚ್ಚರಿಕೆ ನೀಡಲಾಗಿತ್ತು

(2ನೇ ಪುಟ ನೋಡಿ)

## ಕ್ಷಮೆ ಕೇಳದೆ ಕಮಲ್ ಉದ್ಧಟತನ:ವಿಚಾರಣೆ ಜೂ. 10ಕ್ಕೆ ಮುಂದೂಡಿದ ಹೈಕೋರ್ಟ್!



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.3:ತಮಿಳಿನಿಂದ ಕನ್ನಡ ಹುಟ್ಟಿತು ಎಂಬ ಹೇಳಿಕೆ ನಟ ಕಮಲ್ ಹಾಸನ್ ಗೆ ದೊಡ್ಡ ಸಂಕಷ್ಟ ತಂದಿಟ್ಟಿದೆ. ಕಮಲ್ ಹಾಸನ್ ವಿರುದ್ಧ ಕನ್ನಡಿಗರ ಆಕ್ರೋಶ ಕಟ್ಟೆ ಹೊಡೆದಿತ್ತು. ಅಲ್ಲದೆ ಕ್ಷಮೆ ಕೇಳುವಂತೆ ಪಟ್ಟು ಹಿಡಿದಿದ್ದರು. ಆದರೆ ನಾನು ಯಾವುದೇ ಕಾರಣಕ್ಕೂ ಕ್ಷಮೆ ಕೇಳಲ್ಲ ಎಂದು ಕಮಲ್ ಹಾಸನ್ ಉದ್ಧಟತನ ಮೆರೆದಿದ್ದು ಇದಕ್ಕೆ ಇದೀಗ ಕರ್ನಾಟಕ ಹೈಕೋರ್ಟ್ ಬಿಗ್ ಶಾಕ್ ನೀಡಿದೆ. ಹೌದು... ಥಗ್ ಲೈಫ್ ಚಿತ್ರ ಜೂನ್ 5ಕ್ಕೆ ಬಿಡುಗಡೆ ಆಗಬೇಕಿತ್ತು. ಆದರೆ ಕರ್ನಾಟಕ ಹೈಕೋರ್ಟ್ ಮುಂದಿನ ವಿಚಾರಣೆಯನ್ನು ಜೂನ್ 10ಕ್ಕೆ ಮುಂದೂಡಿದ್ದರಿಂದ ರಾಜ್ಯದಲ್ಲಿ ಚಿತ್ರ ಬಿಡುಗಡೆಗೆ ಹಿನ್ನಡೆಯಾಗಿದೆ. ಥಗ್ ಲೈಫ್ ಸಿನಿಮಾ ಬಿಡುಗಡೆಗೆ ಕರ್ನಾಟಕದಲ್ಲಿ ತಡೆಯೊಡ್ಡಿದ ಹಿನ್ನೆಲೆಯಲ್ಲಿ ಚಿತ್ರತಂಡ ಹೈಕೋರ್ಟ್ ಮೊರೆ ಹೋಗಿದ್ದತ್ತು. ಏನೇ ಆದರೂ ಕ್ಷಮೆ ಕೇಳುವುದಿಲ್ಲ ಎಂದು ಕಮಲ್ ಮೊಂಡಾಟ ಮೆರೆದಿದ್ದರು. ನಾನು ಯಾವುದೇ ತಪ್ಪು ಮಾಡಿಲ್ಲ, ಕ್ಷಮೆಯಾಚಿಸುವುದಿಲ್ಲ, ನನ್ನ ವಿರುದ್ಧ

(2ನೇ ಪುಟ ನೋಡಿ)

## ರಾಯಚೂರಿನಲ್ಲಿ "ಪ್ರಜಾಸೌಧ", ಯಾದಗಿರಿಯಲ್ಲಿ "ಆರೋಗ್ಯ ಆವಿಷ್ಕಾರ " ಯೋಜನೆಗೆ ಸಿ.ಎಂ. ಸಿದ್ದರಾಮಯ್ಯರಿಂದ ಶಂಕುಸ್ಥಾಪನೆ ಆರೋಗ್ಯ ಆವಿಷ್ಕಾರದ 400 ಕೋಟಿ ರೂ. ಮೊತ್ತದ 88 ಕಾಮಗಾರಿಗಳಿಗೆ ಚಾಲನೆ:ಡಾ.ಅಜಯ್ ಸಿಂಗ್



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.3:ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಡಿಯಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ಮಾಣ ಮತ್ತು ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸುವುದು ಸೇರಿದಂತೆ 400 ಕೋಟಿ ರೂ. ವೆಚ್ಚದ 'ಆರೋಗ್ಯ ಆವಿಷ್ಕಾರ' ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಜೂನ್ 14 ರಂದು ಯಾದಗಿರಿಯಲ್ಲಿ ಚಾಲನೆ ನೀಡಲಿದ್ದಾರೆ ಎಂದು ಕೆ-ಕೆಆರ್‌ಡಿಬಿ ಅಧ್ಯಕ್ಷ ಡಾ. ಅಜಯಸಿಂಗ್ ತಿಳಿಸಿದರು.

ಮಂಗಳವಾರ ಇಲ್ಲಿನ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದ 41 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 88 ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ದೊರೆಯಲಿದ್ದು, ಆ ಮೂಲಕ ಕಲ್ಯಾಣ ಭಾಗದ ಆರೋಗ್ಯಕ್ಕೆ ಹೊಸ ಬೂಸ್ಟ್ ಸಿಗಲಿದೆ. ಇದು ಕಲ್ಯಾಣ ಕರ್ನಾಟಕ ಹೆಲ್ತ್ ಹಬ್ ಆಗಲು ಪೂರಕವಾಗಿದೆ ಎಂದರು.

ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸೇರಿದಂತೆ ಪ್ರದೇಶದ ಸಚಿವರು, ಶಾಸಕರು ಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು ಪಾಲ್ಗೊಳ್ಳುವರು.

ಕಲ್ಯಾಣ ಕರ್ನಾಟಕ ಭಾಗಕ್ಕೆ ನಮ್ಮ ಸರಕಾರ 5,000 ಕೋಟಿ ರೂ.ಗಳನ್ನು ನೀಡುವ ಮೂಲಕ ನುಡಿದಂತೆ ನಡೆದಿದೆ. ಗ್ಯಾರಂಟಿ ಯೋಜನೆಗಳ ನಡುವೆಯೂ ಕಲ್ಯಾಣ ಭಾಗಕ್ಕೆ ಭರಪೂರ ಅನುದಾನ ನೀಡುವ ಮೂಲಕ ಅಭಿವೃದ್ಧಿಗೆ ತನ್ನ ಬದ್ಧತೆಯನ್ನು ತೋರಿಸಿದೆ ಎಂದ ಡಾ. ಅಜಯ ಸಿಂಗ್ ಅವರು, ಡಾ. ಡಿ.ಎಂ.ನಂಜುಂಡಪ್ಪ ವರದಿಯಲ್ಲಿ ಆರೋಗ್ಯ, ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುವಂತೆ ಶಿಫಾರಸು ಮಾಡಿದ್ದು, ಅದರನ್ವಯ ಸರಕಾರ ಗ್ಯಾರಂಟಿ ಯೋಜನೆ ಜೊತೆ ಜೊತೆಗೆ ಅಭಿವೃದ್ಧಿಗೂ ಒತ್ತು ನೀಡುತ್ತಿದೆ ಎಂದರು.

24 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 7 ನಗರ ಆರೋಗ್ಯ ಕೇಂದ್ರಗಳು, 10 ಸಮುದಾಯ ಆರೋಗ್ಯ ಕೇಂದ್ರಗಳು, 4 ನಗರ ಸಮುದಾಯ ಆರೋಗ್ಯ ಕೇಂದ್ರಗಳು, 30 ಹಾಸಿಗೆಗಳಿಂದ 50 ಹಾಸಿಗೆಗೆ ಮೇಲ್ದರ್ಜೆಗೆ ಏರಿಸುವ 25 ಸಮುದಾಯ ಆರೋಗ್ಯ ಕೇಂದ್ರಗಳು, 1 ಪ್ರಾಥಮಿಕ

(2ನೇ ಪುಟ ನೋಡಿ)

## ಪುರಾತನದಿಂದ ಪ್ರಸ್ತುತವರೆಗೂ ಹೆಣ್ಣುಮಕ್ಕಳ ಸಾಧನೆ ಅಪಾರವಾಗಿದೆ ಶಾಸಕ ತುನ್ನೂರ್




ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : ಜೂ.3 : ಹೆಣ್ಣುಮಕ್ಕಳು ಪ್ರತಿಯೊಂದು ಸಾಮಾಜಿಕ ಕ್ಷೇತ್ರದಲ್ಲಿ ಮುಂದುವರಿಯುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಪೂರ್ವಿಕತೆಯ ಒನಕೆ ಓಬವ್ವ, ಝಾನ್ಸಿ ರಾಣಿ ಲಕ್ಷ್ಮೀ ಬಾಯಿ ಇಂದ ಸುನೀತಾ ವಿಲಿಯಮ್ಸ್ ವರೆಗೂ ಹೆಣ್ಣುಮಕ್ಕಳು ಸಾಧನೆ ಮುಖ್ಯವಾಗಿದೆ ಹೆಣ್ಣು ತಾಯಿಯಾಗಿ, ಮಡದಿಯಾಗಿ, ಸಹೋದರಿಯಾಗಿ, ಎಲ್ಲಾ ರೀತಿಯಲ್ಲೂ ಮುನ್ನಡೆ ಹೊಂದಿದ್ದಾಳೆ ಹೆಣ್ಣು ಅಬಲೆ ಅಲ್ಲ, ಸಬಲೇ ಯಾಗಿದ್ದಾಳೆ ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ಅಭಿವ್ಯಕ್ತಪಡಿಸಿದರು. ಮಂಗಳವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘ ಜಿಲ್ಲಾ ಘಟಕ ಯಾದಗಿರಿ ನೂತನ ಜಿಲ್ಲಾ ಘಟಕದ ಉದ್ಘಾಟನೆ,

(2ನೇ ಪುಟ ನೋಡಿ)

## 10 ಜನ ಆರೋಪಿಗಳ ಬಂಧನ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.3: ಕೊಲೆ ಮಾಡಿ ಸಾಕ್ಷಿ ನಾಶ ಮಾಡಿದ 10 ಜನ ಆರೋಪಿಗಳನ್ನು ಆಳಂದ ಪೊಲೀಸರು ಬಂಧಿಸಿದ್ದಾರೆ ಎಂದು ಎಸ್ಪಿ ಅಡ್ಡೂರು ಶ್ರೀನಿವಾಸಲು ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಆಳಂದ ತಾಲೂಕಿನ ಖಜೂರಿಯ ರವಿಚಂದ್ರ ಶ್ರೀಮಂತ ಖಜೂರೆ ಎಂಬುವವರು

ಅವರ ತಮ್ಮ ರಾಹುಲ ಶ್ರೀಮಂತ ಖಜೂರೆ (28) ಎಂಬಾತನು ಜನವರಿ 30 ರಂದು ಕಾಣೆಯಾಗಿದ್ದಾನೆ ಪತ್ತೆ ಮಾಡಿ ಕೊಡಿ ಎಂದು ದೂರು ಸಲ್ಲಿಸಿದ್ದರು.

ಈ ಪ್ರಕರಣದಲ್ಲಿ ಕಾಣೆಯಾದ ಮನುಷ್ಯನ ಪತ್ತೆ ಕುರಿತು ಹೆಚ್ಚುವರಿ ಎಸ್ಪಿ ಮಹೇಶ ಮೇಘಣ್ಣನವರ ಹಾಗೂ ಆಳಂದ ಉಪ ವಿಭಾಗದ ಡಿಎಸ್‌ಪಿ ಗೋಪಿ ಬಿ. ಆರ್ ಮಾರ್ಗದರ್ಶನದಲ್ಲಿ ಆಳಂದ ಪಿಐ ಶರಣಬಸಪ್ಪ ಕೋಡ್ಲಾ, ಪಿ.ಎಸ್.ಐ ಭೀಮರಾಯ ಭಂಕ್ಲಿ, ಪಿ.ಎಸ್.ಐ ಸಂಜೀವರೆಡ್ಡಿ ಹಾಗೂ ಸಿಬ್ಬಂದಿಯಾದ ಗಣಪತರಾವ, ಮೈಹಿಬೂಬ ಶೇಖ್, ಚಂದ್ರಶೇಖರ, ಮಹಾಂತೇಶ ,

(2ನೇ ಪುಟ ನೋಡಿ)

## ದೇಶದ ಗಮನ ಸೆಳೆದ ಗ್ಯಾರಂಟಿ ಯೋಜನೆ ಯಾವುದೇ ತೊಂದರೆ ಆಗದಂತೆ ಅನುಷ್ಠಾನಗೊಳಿಸಿ:ಮೆಹರೋಜ ಖಾನ್



ಮಲ್ಲಮ್ಮ ನುಡಿ ವಾರ್ತೆ ಬೀದರ: ಜೂನ್.3: ಇಡೀ ದೇಶದ ಹಾಗೂ ವಿಶ್ವದ ಗಮನ ಸೆಳೆದಿರುವ ಕರ್ನಾಟಕ ರಾಜ್ಯದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಡಿ ಯಾವುದೇ ರೀತಿಯ ತೊಂದರೆಯಾಗದಂತೆ ಅಧಿಕಾರಿಗಳು ಕಾರ್ಯನಿರ್ವಹಿಸುವಂತೆ ರಾಜ್ಯ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್ ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಬೀದರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡುತ್ತಿದ್ದರು.

ಪ್ರತಿ ವರ್ಷ 52 ಸಾವಿರ ಕೋಟಿ ರೂ. ಖರ್ಚು ಮಾಡಿ ಸ್ವಾವಲಂಬಿ ಬದುಕು ಕೊಟ್ಟ ಗ್ಯಾರಂಟಿ ಯೋಜನೆಗಳು ಇಡಿ ದೇಶದ ಹಾಗೂ ವಿಶ್ವದ ಗಮನ ಸೆಳೆದಿವೆ. ಬೀದರನಲ್ಲಿ ಶೇ. 98 ರಷ್ಟು ಪ್ರಗತಿ ಸಾಧಿಸಲಾಗಿದೆಯೆಂದರು. ಗ್ಯಾರಂಟಿ ಯೋಜನೆಗಳಿಂದ ಬಡ ಹಾಗೂ ಮಾಧ್ಯಮ ವರ್ಗದ ಜನರ ಆರ್ಥಿಕ ಸಂಕಷ್ಟಗಳಿಗೆ ಸಾಕಷ್ಟು ಪರಿಹಾರ ನೀಡುವ ಮೂಲಕ ಅವರಲ್ಲಿ ಶಕ್ತಿ ತುಂಬಿದೆ. ಕೋಟ್ಯಾಂತರ ಫಲಾನುಭವಿಗಳು ಸಣ್ಣಪುಟ್ಟ ಉದ್ಯೋಗ ಸ್ಥಾಪಿಸಿ ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆ. ಬೀದರ ಜಿಲ್ಲೆಯಲ್ಲಿ ಯುವನಿಧಿ ಯೋಜನೆ ಪ್ರಚಾರಕ್ಕಾಗಿ ಕಾಲೇಜುಗಳಲ್ಲಿ ಹಾಗೂ ಯುವಕರಲ್ಲಿ ವಿಶೇಷ ಪ್ರಚಾರ ಆಂದೋಲನ ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು.

(2ನೇ ಪುಟ ನೋಡಿ)

## ಮುಖ್ಯಮಂತ್ರಿಗಳು ಜೂ. 14ಕ್ಕೆ ಯಾದಗಿರಿಗೆ ಭೇಟಿ



ಯಾದಗಿರಿ : ಜೂ.3 : ಮಾನ್ಯ ಮುಖ್ಯಮಂತ್ರಿಗಳು ಇದೇ ಜೂನ್ 14 ಕ್ಕೆ ಯಾದಗಿರಿಗೆ ಭೇಟಿ ನೀಡುವ ಪ್ರಯುಕ್ತ ಇಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಶ್ರೀ ಶರಣಬಸಪ್ಪ ದರ್ಶನಾಪುರ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಶ್ರೀ ಅಜಯ್ ಧರ್ಮಸಿಂಗ್ ಅವರು ಕಾರ್ಯಕ್ರಮ ನಡೆಸಲು ಉದ್ದೇಶಿಸಲಾಗಿರುವ ಜಿಲ್ಲಾ. ಕ್ರೀಡಾಂಗಣದಲ್ಲಿ ಸ್ಥಳ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ್,

ಸುರಪುರ ಶಾಸಕ ರಾಜಾ ವೇಣುಗೋಪಾಲ ನಾಯಕ, ಕೆಕೆಆರ್‌ಡಿಬಿ ಕಾರ್ಯದರ್ಶಿ ಎಮ್.ಸುಂದರೇಶ್ ಬಾಬು, ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

# ಆರೋಪಿಗಳ ಬಂಧನ

ಸಚೀನ, ನೀಲಕಂಠ ಪಿಸಿ, ಜಾಕೀರ , ಮೈಹಿಬೂಬ ಶೇಖ್ , ಗೌರಮ್ಮ ಅವರವರನ್ನೊಳಗೊಂಡ ತಂಡವನ್ನು ರಚಿಸಲಾಗಿತ್ತು. ಫೆ.16 ರಂದು ಮಹಾರಾಷ್ಟ್ರದ ಬೆಡಗಾ ಸೀಮಾಂತರದ ಸಾಂಘ್ಲಿ ಬೆಣ್ಣೆ ತೊರಾ ಹಿನ್ನೀರಿನ ಡ್ಯಾಂಮನಲ್ಲಿ ಅಗ್ನಿ ಶಾಮಕ ಸಿಬ್ಬಂದಿಯ ಸಹಾಯದಿಂದ ಮೃತ ದೇಹವನ್ನು ಪತ್ತೆ ಮಾಡಲಾಯಿತು. ಪ್ರಕರಣದ ಫಿರ್ಯಾದಿದಾರರು ತನ್ನ ತಮ್ಮ ರಾಹುಲ ಈತನಿಗೆ ಅಣೂರು ಗ್ರಾಮದ ಪೃಥ್ವಿರಾಜ ಹರಿಪ್ರಸಾದ ಚಿಂಟಂಪಲ್ಲೆ (22 ), ಭಾಗ್ಯವಂತಿ ಹರಿಪ್ರಸಾದ ಚಿಂಟಂಪಲ್ಲೆ, ಸೀತಾಬಾಯಿ ಹರಿಪ್ರಸಾದ ಚಿಂಟಂಪಲ್ಲೆ , ಓಂಕಾರ ಪಂಚಾಳ, ಪವನ ರಜಪತ್ ಎಂಬುವವರು ಕೂಡಿಕೊಂಡು ಕೊಲೆ ಮಾಡುವ ಸಂಚು ರೂಪಿಸಿಕೊಂಡು ಫೋನ್ ಮಾಡಿ ಯಾವುದೋ ಸ್ಥಳದಲ್ಲಿ ಕರೆಯಿಸಿ ಆಯುಧದಿಂದ ಹೊಡೆದು ಕೊಲೆ ಮಾಡಿ, ಸಾಕ್ಷಿ ನಾಶಪಡಿಸುವ ಉದ್ದೇಶದಿಂದ ರಾಹುಲನ ಮೃತ ದೇಹವನ್ನು ಒಂದು ವಾಹನದಲ್ಲಿ ಹಾಕಿಕೊಂಡು ಉಮರ್ಗಾ ತಾಲ್ಲೂಕಿನ ಬೆಡಗಾ ಸೀಮಾಂತರದ ಸಾಂಗ್ಲಿ ಬೆಣ್ಣೆತೊರಾ ಡ್ಯಾಂಮಿನ ಬ್ರಿಜ್ ಹತ್ತಿರ ಒಯ್ದು ಹೊಟ್ಟೆಗೆ ಹಗ್ಗದಿಂದ ದೊಡ್ಡ ಕಲ್ಲನ್ನು ಕಟ್ಟಿ ನೀರಿನಲ್ಲಿ ಬಿಸಾಕಲಾಗಿದೆ ಎಂದು ಪ್ರತ್ಯೇಕವಾಗಿ ದೂರು ನೀಡಿದ್ದರು.

ಈ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ಜಾಲ ಬೀಸಿದ ತಂಡವು ಫೆ 17 ರಂದು ಪ್ರಕರಣದ ಕಾನೂನು ಸಂಘರ್ಷಕ್ಕೆ ಒಳಗಾದ ಓಂಕಾರ ಪಂಚಾಳ ಮತ್ತು ಪವನ ರಜಪುತ್ ಎಂಬುವವರನ್ನು ಅಣೂರು ಗ್ರಾಮದಲ್ಲಿ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿದರು. ಮಾ.30 ರಂದು ಪ್ರಕರಣದ ಶ್ರೀಧರ, ಸಂದೀಪ,ಸತ್ಯಭಾಮ, ಸರಸ್ವತಿ, ಮಹಾದೇವ ( ಎಸ್.ಟಿ ಕಾಲೋನಿ ಉಮರ್ಗಾ ನಿವಾಸಿಗಳು) ಎಂಬುವವರು ಪ್ರಕರಣದಲ್ಲಿ ತಪ್ಪಿಸಿಕೊಳ್ಳಲು ಹಣದ ಸಹಾಯ ಮತ್ತು ಆಶ್ರಯ ನೀಡಿ ನೇರವಾಗಿ ಆರೋಪಿತರಾದ್ದಾರೆ ಎಂಬ ಕಾರಣಕ್ಕಾಗಿ ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಳಡಿಸಲಾಯಿತು.

ಮೇ. 16 ರಂದು ಪ್ರಕರಣದಲ್ಲಿ ತಂಡವು ಭಾಗ್ಯವಂತಿ ಹರಿಪ್ರಸಾದ ಚಿಂಟಂಪಲ್ಲೆ, ಸೀತಾಬಾಯಿ ಹರಿಪ್ರಸಾದ ಚಿಂಟಂಪಲ್ಲೆ ಅವರನ್ನು ಕಲಬುರಗಿಯಲ್ಲಿ ಬಂಧಿಸಿದ್ದು, ನ್ಯಾಯಾಂಗ ಬಂಧನಕ್ಕೆ ಒಳಪಡಿಸಿದೆ.

ಮೇ, 22 ರಂದು ಪ್ರಕರಣದ ತಂಡವು ಪೃಥ್ವಿರಾಜ ಹರಿಪ್ರಸಾದ ಈತನನ್ನು ಕಲಬುರಗಿ ನಗರದಲ್ಲಿ ಬಂಧಿಸಿ, ಕೃತ್ಯಕ್ಕೆ ಬಳಸಿದ ಒಂದು ಮೊಟಾರ ಸೈಕಲ್ ಜಪ್ತಿಪಡಿಸಿಕೊಳ್ಳಲಾಯಿತು. ಸದರಿ ಪ್ರಕರಣದ ಮೂವರು ಪ್ರಮುಖ ಆರೋಪಿತರು ಕೃತ್ಯ ಎಸಗಿದಾಗಿನಿಂದ ದೇಶದ ವಿವಿಧ ಪುಣ್ಯ ಕ್ಷೇತ್ರಗಳಾದ ಪಂಡರಾಪುರ, ಕಾಶಿ, ಆಯೋಧ್ಯೆ ಪ್ರಯಾಗರಾಜ ಮಹಾಕುಂಭ ಈ ಸ್ಥಳಗಳೆಲ್ಲ ಓಡಾಡಿದ್ದರು. ಪ್ರಕರಣದಲ್ಲಿ ಭಾಗಿಯಾದ ಒಟ್ಟು 10 ಜನ ಆರೋಪಿತರನ್ನು ತಂಡ ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ಎಸ್ಪಿ ಅಡ್ಡೂರು ಶ್ರೀನಿವಾಸಲು ಅವರು ತಿಳಿಸಿದರು.

## ತೊಂದರೆ ಆಗದಂತೆ ಅನುಷ್ಠಾನಗೊಳಿಸಿ:ಮೆಹರೋಜ ಖಾನ್

ಶಾಲಾ ಕಾಲೇಜುಗಳು ಆರಂಭಗೊಳ್ಳುವ ಹಿನ್ನೆಲೆಯಲ್ಲಿ ಬಸ್‌ಗಳು ಸರಿಯಾದ ಸಮಯಕ್ಕೆ ಸಂಚರಿಸುವಂತೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ನಿಲುಗಡೆಗಳಲ್ಲಿ ನಿಲ್ಲಿಸುವಂತೆ ಸೂಚಿಸಲಾಯಿತು. ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯ ಅಕ್ಕಿಯು ಕಳ್ಳ ಸಾಗಾಣಿಕೆಯಲ್ಲಿ ಕಂಡುಬಂದು ಅನೇಕ ಪ್ರಕರಣಗಳು ದಾಖಲಾದ ಹಿನ್ನೆಲೆಯಲ್ಲಿ ನ್ಯಾಯ ಬೆಲೆ ಅಂಗಡಿಗಳಿಗೆ ಎಚ್ಚರಿಕೆ ನೀಡುವಂತೆ ಸೂಚಿಸಲಾಯಿತಲ್ಲದೆ ಕಳ್ಳ ಸಾಗಾಟದಲ್ಲಿ ಕಂಡುಬಂದ ನ್ಯಾಯಬೆಲೆ ಅಂಗಡಿಗಳ ಪರವಾನಿಗೆ ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುದೆಂದು ತಿಳಿಸಲಾಯಿತು.

ಗೃಹಲಕ್ಷ್ಮಿ ??೯ ಯೋಜನೆಯಡಿ ಕೆಲ ಮಹಿಳೆಯರಿಗೆ ಐಟಿ ಹಾಗೂ ಜಿಎಸ್‌ಟಿ ತೆರಿಗೆ ಸಮಸ್ಯೆಯಿಂದಾಗಿ ತೊಂದರೆಯಾಗಿರುವ ಹಿನ್ನೆಲೆಯಲ್ಲಿ ಅಂಥ ಗೃಹಿಣಿಯರನ್ನು ಸಂಪರ್ಕಿಸಿ ಸಮಸ್ಯೆ ಬಗೆಹರಿಸುವಂತೆ ಮೆಹರೋಜ್ ಖಾನ್ ತಿಳಿಸಿದರು.

ಗ್ರಾಮ ಒನ್ ಕೇಂದ್ರಗಳಲ್ಲಿ ಪಡಿತರ ಚೀಟಿ ತಿದ್ದುಪಡಿಗೆ ತೊಂದರೆ ನೀಡಿದಲ್ಲಿ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು. ಗ್ಯಾರಂಟಿ ಯೋಜನೆಗಳ ಯಶಸ್ವಿ ಹಿನ್ನೆಲೆಯಲ್ಲಿ ಮನೆ ಮನೆ ಗ್ಯಾರಂಟಿ ವಿಶೇಷ ಆಂದೋಲವನ್ನುರಾಜ್ಯಾದ್ಯಂತ ಹಮ್ಮಿಕೊಳ್ಳಲಾಗುವುದೆಂದು ಸಹ ಅವರು ತಿಳಿಸಿದರು.

ಜಿಲ್ಲೆಯ ಒಟ್ಟು ಕುಟುಂಬದ ಮಹಿಳಾ ಮುಖ್ಯಸ್ಥೆಯ ಹೆಸರಿನಲ್ಲಿರುವ ಪಡಿತರ ಚೀಟಿಗಳ ಸಂಖ್ಯೆ: 381970 ಇವರಲ್ಲಿ ಗೃಹಲಕ್ಷ್ಮೀ ಯೋಜನೆಯಡಿಯಲ್ಲಿ ಮೇ ಅಂತಕ್ಕೆ 374323 ಫಲನುಭವಿಗಳು ನೊಂದಾಣಿಯಾಗಿರುತ್ತಾರೆ. ಬೀದರ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಫಲಾನುಭವಿಗಳ ಖಾತೆಗೆ ಮಾಹೆಯಾನ 2000 ರೂ. ರಂತೆ ಇಲ್ಲಿಯವರೆಗೆ 1197.64 ಕೋಟಿ ಹಣವನ್ನು ಡಿಬಿಟಿ ಮೂಲಕ ವರ್ಗಾಯಿಸಲಾಗಿದೆ. ತಾಲೂಕುವಾರು ಫಲಾನುಭವಿಗಳ ಸಂಖ್ಯೆ ಬೀದರ (91371), ಬಸವಕಲ್ಯಾಣ (63170), ಭಾಲ್ಕಿ (62421), ಹುಮನಾಬಾದ (48224), ಚಿಟಗುಪ್ಪಾ (43904), ಔರಾದ (35565), ಕಮಲನಗರ (19579), ಹುಲಸೂರ (10089) ಆಗಿರುತ್ತಾರೆಂದು ತಿಳಿಸಿದರು.ಅನ್ನಭಾಗ್ಯ ಯೋಜನೆಯಡಿಯಲ್ಲಿ 13,13,305 ಫಲಾನುಭವಿಗಳು (3,57,286 ಪಡಿತರ ಚೀಟಿಗಳು) 333.28 ಕೋಟಿ ರೂಪಾಯಿ ಅನುದಾನ ಬಳಕೆಯಾಗಿದೆ. ಜುಲೈ 2023 ರಿಂದ ಜನವರಿ 2025 ರವರಿಗೆ 5 ಕೆಜಿ ಅಕ್ಕಿ ಮತ್ತು ಉಳಿದ 5 ಕೆಜಿ ಅಕ್ಕಿ ಯ ಮೊತ್ತವನ್ನು ಡಿಬಿಟಿ ಮೂಲಕ ಹಣ ವರ್ಗಾಯಿಸಲಾಗಿತ್ತು. ಜನವರಿ 2025ರ ಮಾಹೆಯ ಡಿಬಿಟಿ ಮೂಲಕ ವರ್ಗಾವಣೆ ಬಾಕಿ ಇರುತ್ತದೆ ಹಾಗೂ ಫೆಬ್ರವರಿ 2025ರಿಂದ 10ಕೆಜಿ ಅಕ್ಕಿ ನೀಡಲಾಗುತ್ತಿದೆ ಮತ್ತು ಪಡಿತರ ಅಕ್ಕಿಯು ಕಾಳಸಂತೆಯಲ್ಲಿ ಮಾರಾಟ ಆಗದಂತೆ ನೋಡಿಕೊಳ್ಳಬೇಕು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.ಯುವನಿಧಿ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 10489 ನೊಂದಣಿಯಾಗಿದ್ದು ಅದರಲ್ಲಿ 7961 ಪದವಿ ಅಭ್ಯರ್ಥಿಗಳು ಮತ್ತು 148 ಡಿಪ್ಲೋಮಾ ಅಭ್ಯರ್ಥಿಗಳು ಫಲಾನುಭವಿಗಳಿಗೆ 15.98 ಕೋಟಿ ರೂಪಾಯಿ ಅನುದಾನ ಬಳಕೆಯಾಗಿದೆ. ಜಿಲ್ಲೆಯಲ್ಲಿ ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಒಟ್ಟು 3,49,588 ಫಲಾನುಭವಿಗಳಿದ್ದು 327.69 ಕೋಟಿ ಹಣವನ್ನು ಬಳಕೆಯಾಗಿದೆ. ಶಕ್ತಿ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ 11–06–2023 ರಿಂದ 31–05–2025 ರವರಿಗೆ ಮಹಿಳಾ ಮತ್ತು ಬಾಲಕಿಯರು ಒಟ್ಟು ಸೇರಿ 8.15 ಕೋಟಿ ಫಲಾನುಭವಿಗಳು ಸೌಲಭ್ಯ ಪಡೆದಿದ್ದಾರೆ ಹಾಗೂ ವಿಭಾಗದ ವಾಹನದಲ್ಲಿ ಪ್ರತಿ ದಿನ ಸರಾಸರಿ 1.3 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದಾರೆ ಇದಕ್ಕೆ 233.27 ಕೋಟಿ ಸಂದಾಯವಾಗಿದೆ ಹಾಗೂ ಪ್ರತಿ ದಿನ ಪ್ರಯಾಣಿಕರಿಂದ ಸರಾಸರಿ 32.40 ಲಕ್ಷ ರೂಪಾಯಿ ಸಾರಿಗೆ ಆದಾಯ ಸಂದಾಯವಾಗಿದೆ. ವಿದ್ಯಾರ್ಥಿಗಳಿಗೆ ಬಸ್ಸುಗಳ ಸಮಸ್ಯೆಯಾಗದಂತೆ ಸಾರಿಗೆ ಸಂಸ್ಥೆ ನೋಡಿಕೊಳ್ಳಬೇಕು ಎಂದು ಹೇಳಿದರು.ಬೀದರ ಜಿಲ್ಲೆಯಲ್ಲಿ ಒಟ್ಟು 8,01,86,364 ಫಲಾನುಭವಿಗಳಿದ್ದು, ಈವರೆಗೆ 2,107.86 ಕೋಟಿ ಹಣ ಬಳಕೆಯಾಗಿದೆ. ಪ್ರಾಮಾಣಿಕವಾಗಿ ಜನರಿಗೆ ಪಂಚ ಗ್ಯಾರಂಟಿಗಳು ತಲುಪಿಸುವ ಕೆಲಸ ಹಾಗೂ ಇವುಗಳ ಬಗ್ಗೆ ಜನರಿಗೆ ಅರಿವು ಮೂಡಿಸುವ ಕಾರ್ಯ ಸಂಬಂಧಪಟ್ಟ ಅಧಿಕಾರಿಗಳು ಮಾಡಬೇಕು ಎಂದು ತಿಳಿಸಿದರು.ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿರೀಶ ಬದೊಲೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಕಿಶೋರಕುಮಾರ ದುಬೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಧರ ಎಮ್.ಎಚ್, ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ರಮೇಶ್ ಪಾಟೀಲ್, ಕೆ.ಕೆ.ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಫುಲೇಕರ, ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ವಿ. ಪ್ರಭಾಕರ ಸೇರಿದಂತೆ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು ಮತ್ತು ಸದಸ್ಯರು ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಶಂಕುಸ್ಥಾಪನೆ ಆರೋಗ್ಯ ಆವಿಷ್ಕಾರದ 400 ಕೋಟಿ ರೂ. ಮೊತ್ತದ 88 ಕಾಮಗಾರಿಗಳಿಗೆ ಚಾಲನೆ:ಡಾ.ಅಜಯ್ ಸಿಂಗ್

ಆರೋಗ್ಯ ಕೇಂದ್ರವನ್ನು 100 ಹಾಸಿಗೆ ಸಾಮರ್ಥ್ಯದ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸುವುದು, 6 ಸಮುದಾಯ ಆರೋಗ್ಯ ಕೇಂದ್ರವನ್ನು 30 ಹಾಸಿಗೆಗಳಿಂದ 100 ಹಾಸಿಗೆಗೆ ಮೇಲ್ದರ್ಜೆಗೆ ಏರಿಸುವುದು, 9 ತಾಲೂಕು ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳಿಂದ 150 ಹಾಸಿಗೆಗೆ ಮೇಲ್ದರ್ಜೆಗೆ, 2 ಉಪ ವಿಭಾಗೀಯ ಆಸ್ಪತ್ರೆಯನ್ನು ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸುವ ಯೋಜನೆಗಳು ಆರೋಗ್ಯ ಆವಿಷ್ಕಾರದಲ್ಲಿ ಸೇರಿವೆ. ಗ್ರಾಮೀಣ ಪ್ರದೇಶದಲ್ಲಿ ಪಿಎಚ್‌ಸಿ, ಸಮುದಾಯ ಆರೋಗ್ಯ ಕೇಂದ್ರಗಳ ಸೇವೆ ಬಲಗೊಂಡರೆ ಹಳ್ಳಿ ಜನರ ಆರೋಗ್ಯ ಸುಧಾರಣೆಯಾಗಲಿದೆ. ಈ ಹಿನ್ನೆಲೆಯಲ್ಲಿ ದೊಡ್ಡ ಮಟ್ಟದ ಆರೋಗ್ಯ ಯೋಜನೆ ರೂಪಿಸಲಾಗಿದೆ ಎಂದರು.

ರಾಯಚೂರಲ್ಲಿ 'ಪ್ರಜಾಸೌಧ'ಕ್ಕೆ ಚಾಲನೆ: ಇನ್ನು ಇದೇ ಜೂನ್ 9 ರಂದು ರಾಯಚೂರಿನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು "ಪ್ರಜಾ ಸೌಧ" ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸುವರು. ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೇರಿದಂತೆ ಸಚಿವರು, ಶಾಸಕರು ಪಾಲ್ಗೊಳ್ಳುವರು. ಕಲ್ಯಾಣ ಭಾಗದ ಹೊಸದಾಗಿ ರಚನೆಯಾಗಿರುವ 18 ಹೊಸ ತಾಲೂಕುಗಳ ಪೈಕಿ 16 ಕಡೆ 137 ಕೋಟಿ ರೂ. ಗಳ ವೆಚ್ಚದಲ್ಲಿ ಪ್ರಜಾಸೌಧಗಳು ನಿರ್ಮಾಣವಾಗಲಿವೆ. ಉಳಿದ ಎರಡು ಕಡೆ ಈಗಾಗಲೇ ನಿರ್ಮಾಣವಾಗಿವೆ. ಆ ಮೂಲಕ ತಾಲೂಕುಗಳ ಕಚೇರಿಗಳು ಒಂದೇ ಸೂರಿನಡಿ ಬರಲಿವೆ. ಜನರಿಗೆ ಉತ್ತಮ ಸೇವೆ ಸಿಗಲಿವೆ. ಕೆಕೆಆರ್‌ಡಿಬಿ ಮತ್ತು ಕಂದಾಯ ಇಲಾಖೆ ತಲಾ 4.30 ಕೋಟಿ ರೂ.ಗಳನ್ನು ನೀಡುತ್ತಿದೆ ಎಂದರು.

ಕಲಬುರಗಿಯಲ್ಲಿ ಕಲ್ಯಾಣ ಪಥ ಉದ್ಘಾಟಿಸಲಾಗಿದ್ದು, ಯಾದಗಿರಿಯಲ್ಲಿ "ಆರೋಗ್ಯ ಆವಿಷ್ಕಾರ" ಮತ್ತು ರಾಯಚೂರಲ್ಲಿ "ಪ್ರಜಾಸೌಧ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಲ್ಯಾಣದ ಪ್ರತಿ ಜಿಲ್ಲೆಯಲ್ಲೂ ಒಂದೊಂದು ಯೋಜನೆ ಉದ್ಘಾಟನೆಗೆ ಯೋಜಿಸಲಾಗಿದೆ ಎಂದು ವಿವರಿಸಿದರು.

ಜೂನ್ 30 ಡೆಡ್‌ಲೈನ್: ಕೆಕೆಆರ್‌ಡಿಬಿಗೆ ನೀಡಿದ ಅನುದಾನ ಪೂರ್ಣ ಪ್ರಮಾಣದಲ್ಲಿಮತ್ತು ಕಾಲಮಿತಿಯೊಳಗೆ ಖರ್ಚಾಗಬೇಕು. ಅದಕ್ಕಾಗಿ ಕಲ್ಯಾಣ ಭಾಗದ ಎಲ್ಲ ಶಾಸಕರು ಇದೇ ಜೂನ್ 30ರ ಒಳಗಾಗಿ ಪ್ರಸಕ್ತ 2025–26ನೇ ಸಾಲಿನ ಮೈಕ್ರೋ ಮತ್ತು ಮ್ಯಾಕ್ರೊ ಯೋಜನೆಯ ಕ್ರಿಯಾಯೋಜನೆ ಕೊಡಬೇಕು. ಈಚೆಗೆ ನಡೆದ ಮಂಡಳಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಶಾಸಕ ಅಲ್ಲಮಪ್ರಭು ಪಾಟೀಲ್, ಕೆಕೆಆರ್‌ಡಿಬಿ ಕಾರ್ಯದರ್ಶಿ ಎಂ.ಸುಂದರೇಶ ಬಾಬು ಇದ್ದರು.

# ಇಂದು ಜನಸ್ಪಂದನ ಕಾರ್ಯಕ್ರಮ

ಬೀದರ: ಜೂನ್.3: ಬೀದರ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು ಜಂಟಿಯಾಗಿ ಜೂನ್.4ರಂದುಬೆಳಿಗ್ಗೆ11ರಿಂದ ಮಧ್ಯಾಹ್ನ2ಗಂಟೆಯವರೆಗೆ ಹುಮನಾಬಾದ ತಾಲ್ಲೂಕಿನ ತಹಸೀಲ್ ಕಛೇರಿಯಲ್ಲಿ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಂಡಿರುತ್ತಾರೆ.ಕಾರಣ ಸಾರ್ವಜನಿಕರು ಜನಸ್ಪಂದನ ಕಾರ್ಯಕ್ರಮದಲ್ಲಿಉಪಸ್ಥಿತರಿದ್ದು ತಮ್ಮಅಹವಾಲುಸಲ್ಲಿಸಬೇಕೆಂದು ಹುಮನಾಬಾದತಹಸೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಂಧೂರ' ವಿಜಯೋತ್ಸವ : ಯೋಧರಿಗೆ ಗೀತನಮನ

ಅಲ್ಲದೇ ರಾಷ್ಟ್ರಧ್ವಜ ಹಾರಿಸುತ್ತಾ.. ಎದ್ದು ನಿಂತು ಗೌರವ ಸಲ್ಲಿಸಿದರು. ಇದೇ ವೇಳೆ ವಾಯುಪಡೆಯಿಂದ ಏರ್ ಶೋ ಕೂಡ ನಡೆಯಿತು. ದೇಶದ ಅತಿದೊಡ್ಡ ಕ್ರೀಡಾಂಗಣದ ಮೇಲೆ ವಾಯುಪಡೆಯ ವಿಮಾನಗಳ ಸಾಹಸ ದೃಶ್ಯಗಳು ಅಭಿಮಾನಿಗಳನ್ನು ರೋಮಾಂಚನಗೊಳಿಸಿತು.

ಕಳೆದ ಏಪ್ರಿಲ್ 22ರಂದು ಪಹಲ್ಗಾಮ್‌ನಲ್ಲಿ 26 ಪ್ರವಾಸಿಗರನ್ನ ಹತ್ಯೆಗೈಯಲಾಗಿತ್ತು. ಇದಕ್ಕೆ ?ಆಪರೇಷನ್ ಸಿಂಧೂರ' ಕಾರ್ಯಾಚರಣೆ ಮೂಲಕ ಭಾರತ ಪ್ರತೀಕಾರ ತೀರಿಸಿಕೊಂಡಿತ್ತು. ಅಲ್ಲದೇ ಪಾಕಿಸ್ತಾನದ ದಾಳಿಗಳನ್ನ ವಿಫಲಗೊಳಿಸಿತ್ತು. ಭಾರತ ಮತ್ತು ಪಾಕಿಸ್ತಾನ ನಡುವಿನ ಪ್ರತೀಕಾರ ಸಮರ ಜೋರಾಗುತ್ತಿದ್ದಂತೆ ಐಪಿಎಲ್ ಪಂದ್ಯಗಳನ್ನು ಒಂದು ವಾರಗಳ ಕಾಲ ಸ್ಥಗಿತಗೊಳಿಸಲಾಗಿತ್ತು. ಭಾರತ ಮತ್ತು ಪಾಕ್ ನಡುವೆ ಕದನ ವಿರಾಮ ಘೋಷಣೆಯಾಗುತ್ತಿದ್ದಂತೆ ಮೇ 17ರಿಂದ ಟೂರ್ನಿ ಪುನರಾರಂಭಗೊಳಿಸಲಾಯಿತು. ಹೀಗಾಗಿ ಭಾರತೀಯ ಸೇನೆಯ ಈ ಶೌರ್ಯ, ಸಾಹಸಕ್ಕೆ ಗೌರವ ಸಲ್ಲಿಸುವ ಸಲುವಾಗಿ ಐಪಿಎಲ್ ಸಮಾರೋಪ ಸಮಾರಂಭದಲ್ಲಿ ?ಆಪರೇಷನ್ ಸಿಂಧೂರ' ವಿಜಯೋತ್ಸವ ಆಚರಿಸಲು ಬಿಸಿಸಿಐ ನಿರ್ಧರಿಸಿತು.

ಕಾರ್ಯಕ್ರಮ ಆರಂಭವಾಗುತ್ತಿದ್ದಂತೆ ಮೂರು ಸೇನಾಪಡೆಗಳ ಮುಖ್ಯಸ್ಥರಾದ ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೇವಿ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ, ಏರ್‌ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಅವರನ್ನ ವೇದಿಕೆಗೆ ಸೇನಾ ಗೌರವದೊಂದಿಗೆ ಆಹ್ವಾನಿಸಲಾಯಿತು. ಬಳಿಕ ಸೇನೆಗೆ ಗೌರವಾರ್ಥವಾಗಿ ಮಿಲಿಟರಿ ಬ್ಯಾಂಡ್ ಪ್ರದರ್ಶನ ನಡೆಯಿತು.

## ಜೂ. 10ಕ್ಕೆ ಮುಂದೂಡಿದ ಹೈಕೋರ್ಟ್!

ಪ್ರತಿಭಟನೆ ಮಾಡುತ್ತಿರುವವರು ರಾಜಕೀಯ ಅಜೆಂಡಾ ಇಟ್ಟುಕೊಂಡು ಮಾಡುತ್ತಿದ್ದಾರೆ ಎಂದಿದ್ದರು. ಕಮಲ್? ಹಾಸನ್? ಕ್ಷಮೆಯಾಚಿಸದಿದ್ದರೆ ಅವರ ಚಿತ್ರ ಬಿಡುಗಡೆ ಮಾಡಲು ಅವಕಾಶ ನೀಡುವ ಪ್ರಶ್ನೆಯೇ ಇಲ್ಲ ಎಂದು ಕನ್ನಡ ಚಲನಚಿತ್ರ ವಾಣಿಜ್ಯ ಮಂಡಳಿ ಕೂಡ ಹೇಳಿತ್ತು.

ಇಂದು ಹೈಕೋರ್ಟ್ ನಲ್ಲಿ ಚಿತ್ರತಂಡ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಯಿತು. ಈ ವೇಳೆ ಹೈಕೋರ್ಟ್? ನ್ಯಾಯಮೂರ್ತಿ ನಾಗಪ್ರಸನ್ನ ಅವರು ಕ್ಷಮೆ ಕೇಳಿದ್ರೆ ಮಾತ್ರ ಅರ್ಜಿ ಪರಿಗಣಿಸುತ್ತೇವೆ. ಯಾವುದೋ ಭಾಷೆಯಿಂದ ಇನ್ನೊಂದು ಭಾಷೆ ಹುಟ್ಟಿದೆ ಅಂದ್ರೆ ಹೇಗೆ? ಕನ್ನಡ ಭಾಷೆ ತಮಿಳಿಂದ ಹುಟ್ಟಿದೆ ಅನ್ನೋಕೆ ಅವರೇನು ಇತಿಹಾಸಕಾರರಾ? ಈ ಹಿಂದೆ ಸಿ.ರಾಜಗೋಪಾಲಾಚಾರಿ ಕೂಡ ಕ್ಷಮೆಯನ್ನು ಕೇಳಿದ್ದರು. ಇವತ್ತಿನ ಪರಿಸ್ಥಿತಿ ನಿರ್ಮಾಣಕ್ಕೆ ನೀವೇ ಕಾರಣ, ಈ ರೀತಿ ಹೇಳಿಕೆ ನೀಡಬಾರದು. ಕಮಲ್ ಹಾಸನ್ ಸಾಮಾನ್ಯ ವ್ಯಕ್ತಿ ಅಲ್ಲ, ಪಬ್ಲಿಕ್ ಫಿಗರ್?. ಅವರು ಮೊದಲು ಕ್ಷಮೆ ಕೇಳಲಿ, ಆಮೇಲೆ ಅರ್ಜಿ ಪರಿಗಣಿಸ್ತೇವೆ ಎಂದು ಹೇಳಿದರು. ಇದಕ್ಕೆ ಕಮಲ್ ಹಾಸನ್ ಪರ ವಕೀಲರು ಪ್ರತಿಕ್ರಿಯೆ ನೀಡಲು ಮಧ್ಯಾಹ್ನ 2.30ರವರೆಗೆ ಸಮಯಾವಕಾಶ ಕೋರಿದರು.ಇದೀಗ ನ್ಯಾಯಾಲಯಕ್ಕೆ ಮಾಹಿತಿ ನೀಡಿರುವ ಕಮಲ್ ಪರ ವಕೀಲರು, ಥಗ್ ಲೈಫ್ ಸಿನಿಮಾದ ನಿರ್ಮಾಪಕರು, ಸಿನಿಮಾ ಅನ್ನು ರಾಜ್ಯದಲ್ಲಿ ಬಿಡುಗಡೆ ಮಾಡದೇ ಇರಲು ನಿರ್ಧರಿಸಿದ್ದಾರೆ. ಅಲ್ಲದೆ, ಫಿಲಂ ಚೇಂಬರ್ ಜೊತೆಗೆ ನಿರ್ಮಾಪಕರು ಚರ್ಚೆ ನಡೆಸಲು ಸಿದ್ಧವಿದ್ದಾರೆ ಎಂದು ನ್ಯಾಯಾಲಯಕ್ಕೆ ಹೇಳಿದ್ದರು. ಹೀಗಾಗಿ ಅರ್ಜಿಯನ್ನು ಜೂನ್ 10ಕ್ಕೆ ಮುಂದೂಡಿ ನ್ಯಾಯಾಲಯ ಆದೇಶಿಸಿದೆ.

## ಗಂಟೆಯಲ್ಲೇ ಉಡೀಸ್ : ಸಿಡಿಎಸ್ ಜನರಲ್ ಅನಿಲ್ ಚೌಹಾಣ್

ಎಂದು ಅನಿಲ್ ಚೌಹಾಣ್ ತಿಳಿಸಿದರು.

ಮೇ 7 ರಂದು ಭಾರತ ಸರ್ಜಿಕಲ್ ಸ್ಟ್ರೈಕ್ ನಡೆಸಿದ ದಿನವೇ ನಾವು ಪಾಕಿಸ್ತಾನಕ್ಕೆ ತಿಳಿಸಲಾಗಿತ್ತು. ಪಾಕಿಸ್ತಾನದ ಕಡೆಯಿಂದ ನಮ್ಮ ಮಿಲಿಟರಿ ನೆಲೆಗಳು, ಕಟ್ಟಡಗಳನ್ನು ಗುರಿಯಾಗಿಸಿ ದಾಳಿ ನಡೆಸಿದರೆ ನಾವು ಕೂಡಾ ಪ್ರತಿದಾಳಿ ನಡೆಸಿ, ತಿರುಗೇಟು ನೀಡುವುದಾಗಿ ಎಚ್ಚರಿಕೆ ನೀಡಲಾಗಿತ್ತು ಎಂದು ಅವರು ತಿಳಿಸಿದರು.

ತಾತ್ಕಾಲಿಕ ನಷ್ಟದಿಂದ ಮಿಲಿಟರಿ ಪಡೆ ಬಾಧಿತವಾಗಿಲ್ಲ: ತಾತ್ಕಾಲಿಕ ನಷ್ಟಗಳಿಂದ ವೃತ್ತಿಪರ ಮಿಲಿಟರಿ ಪಡೆ ಬಾಧಿತವಾಗಿಲ್ಲ. ಏಕೆಂದರೆ ಆದ ನಷ್ಟಕ್ಕಿಂತಲೂ ಫಲಿತಾಂಶವೇ ಹೆಚ್ಚಾಗಿದೆ. ಅಪಾರ ನಷ್ಟವನ್ನುಂಟುಮಾಡುವುದು ಪಾಕಿಸ್ತಾನದ ಉದ್ದೇಶವಾಗಿತ್ತು. ಆದರೆ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಮೂಲಕ ಗಡಿಯಾಚೆಗಿನ ಭಯೋತ್ಪಾದನೆ ವಿರುದ್ಧ ಸಂಪೂರ್ಣ ಹೊಸದಾದ ಕ್ರಮ ಕೈಗೊಳ್ಳಲಾಯಿತು ಎಂದು ತಿಳಿಸಿದರು.

ನಷ್ಟಕ್ಕಿಂತ ಫಲಿತಾಂಶ ಮುಖ್ಯ: ಆಪರೇಷನ್ ಸಿಂಧೂರ್ ಆರಂಭದಲ್ಲಿ ಭಾರತದ ಯುದ್ಧ ವಿಮಾನಗಳ ನಷ್ಟವನ್ನು ಒಪ್ಪಿಕೊಂಡಿದ್ದಕ್ಕೆ ಕೇಳಿಬಂದ ಟೀಕೆಗಳನ್ನು ನಿರಾಕರಿಸಿದರು. ಆಪರೇಷನ್ ಸಿಂಧೂರ ಕಾರ್ಯಾಚರಣೆ ಸಮಯದಲ್ಲಿ ಉಂಟಾದ ನಷ್ಟ ಫಲಿತಾಂಶಕ್ಕೆ ಹೋಲಿಸಿದರೆ ಗೌಣವಾಗಿವೆ ಎಂದರು.

ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಆಪರೇಷನ್ ಸಿಂಧೂರ್ ವೇಳೆಯಲ್ಲಿ ಆದ ನಷ್ಟ ಹಾಗೂ ಅಂಕಿಅಂಶಗಳ ಬಗ್ಗೆ ಅತ್ಯಂತ ನಿಖರವಾಗಿ ಹೇಳಲು ಸಾಧ್ಯವಿಲ್ಲ. ಯುದ್ಧದ ವೇಳೆ ಹಿನ್ನಡೆಯೂ ಆಗುತ್ತದೆ. ನೈತಿಕತೆ ಕಾಪಾಡಿಕೊಳ್ಳಬೇಕಾದ ಅಗತ್ಯವಿರುತ್ತದೆ. ನಷ್ಟ ಪ್ರಮುಖವಾಗಲ್ಲ. ಆದರೆ ಪ್ರತಿಫಲ ಏನಾಯಿತು ಎಂಬುದು ಪ್ರಮುಖವಾಗಿರುತ್ತದೆ ಎಂದರು.

ಪಹಲ್ಗಾಮ್ ಘಟನೆ ಗಂಭೀರ ಮಾನವೀಯ ಕ್ರೌರ್ಯ: ಭಾರತ ಮತ್ತು ಹಿಂದೂಗಳ ವಿರುದ್ಧ ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸೀಮ್ ಮುನಿರ್ ದ್ವೇಷಕಾರಿ ಭಾಷಣ ಮಾಡಿದ ಕೆಲವೇ ವಾರಗಳಲ್ಲಿ ನಡೆದ ಪಹಲ್ಗಾಮ್ ಘಟನೆಯನ್ನು "ಗಂಭೀರ ಮಾನವೀಯ ಕ್ರೌರ್ಯ' ಎಂದು ಕರೆದರು.

ಪಾಕ್ ಪ್ರಯೋಜಿತ ಭಯೋತ್ಪಾದನೆ ನಿಲ್ಲಿಸುವ ಉದ್ದೇಶದಿಂದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆಸಲಾಯಿತು. ಪಾಕಿಸ್ತಾನ ಭಾರತವನ್ನು ಭಯೋತ್ಪಾದನೆಗೆ ಒತ್ತೆಯಾಳಾಗಿ ಇಡಲು ಸಾಧ್ಯವಾಗಬಾರದು. ಭಾರತವು ಭಯೋತ್ಪಾದನೆ ಮತ್ತು ಪರಮಾಣು ಬ್ಲ್ಯಾಕ್‌ಮೇಲ್‌ನ ನೆರಳಿನಲ್ಲಿ ಬದುಕಲ್ಲ ಎಂದರು.

## ಸಾಧನೆ ಅಪಾರವಾಗಿದೆ ಶಾಸಕ ತುನ್ನೂರ್

ಪದಗ್ರಹಣ ಹಾಗೂ ಪರಿಸರ ಜಾಗೃತಿ ಕಾರ್ಯಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹೆಣ್ಣುಮಕ್ಕಳು ಪ್ರತಿಯೊಂದು ಕ್ಷೇತ್ರದಲ್ಲಿ ತನ್ನದೇ ಆದ ಸ್ಥಾನ ಪಡೆಯುತ್ತಿರುವುದು ಹೆಮ್ಮೆಯ ವಿಷಯವಾಗಿದೆ, ಹೆಣ್ಣು ಸಾಕ್ಷಾತ್ ದೇವರ ರೂಪವಾಗಿದ್ದಾಳೆ.ಹಳ್ಳಿಮನೆಯಲ್ಲಿ ಸೌದೆ ಉರಿಯುವಿಕೆಯಿಂದ ಹಿಡಿದು ಕಚೇರಿಯಲ್ಲಿ ಪೆನ್ನು ಹಿಡಿಯುವಿಕೆ ವರೆಗೂ ಒಂದು ಹೆಜ್ಜೆ ಮುಂದೆ ಇದ್ದಾಳೆ ಎಂದರು.

ನಮ್ಮ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಆಡಳಿತದಿಂದ ಹೆಣ್ಣುಮಕ್ಕಳಿಗೆ ಪ್ರತಿಯೊಂದು ಕ್ಷೇತ್ರದಲ್ಲಿ ಶೇ.50% ರಷ್ಟು ಸ್ಥಾನಮಾನ ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದರು.

ಹೆಣ್ಣುಮಕ್ಕಳು ಮುಂದೆಯೂ ಸಹ ಪುರುಷರಿಗಿಂತ ಉನ್ನತ ಮಟ್ಟವನ್ನು ಹೊಂದಲಿ ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಮಾತನಾಡಿ, ನಾಡು ಉಳಿಯುವಿಕೆಗಾಗಿ ಪ್ರತಿಯೊಬ್ಬರೂ ಗಿಡ ಮರಗಳನ್ನು ಪಾಲನೆ ಪೋಷಣೆ ಮಾಡಬೇಕು. ಪ್ರತಿ ಮನೆ ಮನೆಗೆ, ಸಸಿಗಳನ್ನು ನೆಟ್ಟು ಪರಿಸರ ಬೆಳೆಸುವುದರ ಜೊತೆ ಜೊತೆಗೆ ಮಹಿಳೆಗಳಾದ ನಾವು ನಮ್ಮ ನಮ್ಮ ರಕ್ಷಣೆ ಮಾಡಿಕೊಳ್ಳಬೇಕು ಎಂದರು.

ಹೆಣ್ಣುಮಕ್ಕಳು ಪ್ರತಿಯೊಂದು ಕಷ್ಟ ನಿವಾರಣೆಗಾಗಿ ಇಂತಹ ಮುಖ್ಯ ಸಂಘಟನೆಯು ಪ್ರಾರಂಭವಾಗಿರುವುದು ಹೆಮ್ಮೆಯ ವಿಷಯ. ಹೆಣ್ಣುಮಕ್ಕಳು ಪ್ರತಿಯೊಂದು ಕ್ಷೇತ್ರದಲ್ಲಿ ಕಾರ್ಯ ನಿರ್ವಹಣೆಯಲ್ಲಿ ಬೆನ್ನೆಲುಬು ಆಗಿ ಇಂತಹ ಸಂಘಟನೆ ನಿಲ್ಲಬೇಕು. ಅಂದಾಗ ಮಾತ್ರ ಸಂಘನೆಗೆ ಬೆಲೆ ಸಿಕ್ಕಂತಾಗುತ್ತದೆ. ಹೆಣ್ಣಿನ ವಿಷಯದಲ್ಲಿ ಸಂಘಟನೆಗಳು ಪ್ರತಿಯೊಬ್ಬರಿಗೂ ಮಾದರಿ ಯಾಗಬೇಕು ಎಂದರು.

ಈ ಸಂಧರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ಶೈಲಜಾ ಸಿ.ವಿ. ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರಾಯಪ್ಪಗೌಡ ಹುಡೇದ್, ಉಪ ಪ್ರಾಂಶುಪಾಲೆ ಆರತಿ ಕಡಗಂಚಿ, ಜಿಲ್ಲಾಧ್ಯಕ್ಷೆ ಚಂದ್ರಕಲಾ ಗೂಗಲ್, ಸಂಘದ ಕಾರ್ಯದರ್ಶಿಗಳು, ಸದಸ್ಯರು ಸೇರಿದಂತೆ ಅನೇಕ ಮಹಿಳೆಯರು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಜ್ಯೋತಿಲತಾ ನಿರೂಪಿಸಿದರು, ಡಾ. ಭಾಗ್ಯವತಿ ಅಮರೇಶ್ವರ ವಂಧಿಸಿದರು.

# ಕ್ರೈಸ್ ಮಾದರಿ ವಸತಿ ಶಾಲೆಯಲ್ಲಿ ಒಟ್ಟು 84 ಅತಿಥಿ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂನ್.03:ಕಲಬುರಗಿ ಜಿಲ್ಲೆಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಯುತ್ತಿರುವ ಕ್ರೈಸ್ ಮಾದರಿ ವಸತಿ ಶಾಲೆಗಳಲ್ಲಿ 2025–26ನೇ ಸಾಲಿಗೆ ಬೋಧಿಸಲು ಖಾಲಿಯಿರುವ ವಿಷಯವಾರು (ಕನ್ನಡ ಶಿಕ್ಷಕ–12, ಆಂಗ್ಲ ಭಾಷಾ ಶಿಕ್ಷಕ–31, ಗಣಿತ ಶಿಕ್ಷಕ–19, ವಿಜ್ಞಾನ ಶಿಕ್ಷಕ–17, ಸಮಾಜ ವಿಜ್ಞಾನ–02, ದೈಹಿಕ ಶಿಕ್ಷಕರು–02ಹಾಗೂಕಂಪ್ಯೂಟರ್ ಶಿಕ್ಷಕ–01 ಹುದ್ದೆ ಸೇರಿದಂತೆ ಒಟ್ಟು 84) ಅತಿಥಿ ಶಿಕ್ಷಕರನ್ನು ಹುದ್ದೆಗಳನ್ನು ತಾತ್ಕಾಲಿಕವಾಗಿ ನೇಮಿಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಿಕ್ಷಣ ಕಲಬುರಗಿ ವಿಭಾಗದ ಜಿಲ್ಲಾ ಸಮನ್ವಯ ಅಧಿಕಾರಿಗಳು ಹಾಗೂ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ವಸತಿ ಶಾಲೆಗಳ ವಿವರ ಇಂತಿದೆ: ಮೊರಾರ್ಜಿ ದೇಸಾಯಿ ವಸತಿ ಶಾಲೆ: ವಾಡಿ, ಚಿತ್ತಾಪುರ ಟೌನ್, ಮಳಖೇಡ, ಜೇವರ್ಗಿ ಟೌನ್, ಅರ್ಜುಣಗಿ, ಕೊಗನೂರು, ತಡಕಲ್, ಗುಂಡಗುರ್ತಿ, ನಿಡಗುಂದಾ, ಹೆಬ್ಬಾಳ, ರೇವಗ್ಗಿ, ಕಲಮುಡ ಗ್ರಾಮ, ಕರಜಗಿ, ನೆಲೋಗಿ, ಚಿತ್ತಾಪುರ ಟೌನ್, ಬೆಳಮಗಿ, ಅಡಕಿ, ಸಾವಳೇಶ್ವರ. ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ: ವಾಡಿ, ಕೊಡ್ಲಾ, ಚೌಡಾಪುರ, ಕೊಡ್ಲಿ, ನರಿಬೋಳ, ಐನಾಪುರ. ಡಾ.ಬಿ.ಆರ್. ಅಂಬೇಡ್ಕರ ವಸತಿ ಶಾಲೆ: ವಾಡಿ, ಕುಂಚಾವರಂ, ಕಸಬಾ ಹೋಬಳಿ, ಅರಳಗುಂಡಗಿ ಹಾಗೂ ಬಿಳವಾರ (ಇಜೇರಿ). ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆ: ಮಹಾಗಾಂವ, ವಾಡಿ, ನಾಲವಾರ, ಮುಧೋಳ, ಖಜೂರಿ, ಕೋಳಕೂರ, ಯಡ್ರಾಮಿ ಹಾಗೂ ಎಸ್.ಸಿ/.ಎಸ್.ಟಿ. ಜಗತ್ ಶಾಲೆ ಕಲಬುರಗಿ.

"ಕನ್ನಡ ಶಿಕ್ಷಕರು, ಆಂಗ್ಲ ಭಾಷಾ ಶಿಕ್ಷಕರು, ಹಿಂದಿ ಭಾಷಾ ಶಿಕ್ಷಕರು, ಸಮಾಜ–ವಿಜ್ಞಾನ ಶಿಕ್ಷಕರ"ಹುದ್ದೆಗಳಿಗೆ ಅಭ್ಯರ್ಥಿಗಳು ಬಿ.ಎ,ಬಿ.ಎಡ್., "ಗಣಿತ ಶಿಕ್ಷಕರು ಮತ್ತು ವಿಜ್ಞಾನ ಶಿಕ್ಷಕರು" ಹುದ್ದೆಗೆ ಬಿ.ಎಸ್ಸಿ, ಬಿ.ಎಡ್ ವಿದ್ಯಾರ್ಹತೆ ಹೊಂದಿರಬೇಕು. ಕಡ್ಡಾಯವಾಗಿ ಟಿ.ಇ.ಟಿ ಪರೀಕ್ಷೆ ಉತ್ತೀರ್ಣರಾಗಿರಬೇಕು. ದೈಹಿಕ ಶಿಕ್ಷಕರು"–ದೈಹಿಕ ಶಿಕ್ಷಕರಿಗೆ ಯಾವುದಾದರೂ ವಿಷಯದಲ್ಲಿ ಪದವಿ ಮತ್ತು ಬಿ.ಪಿ.ಎಡ್. ಉತ್ತೀರ್ಣರಾಗಿರಬೇಕು ಹಾಗೂ ಸೇವಾನುಭವ ಹೊಂದಿರಬೇಕು. ಕಂಪ್ಯೂಟರ ಶಿಕ್ಷಕರ ಹುದ್ದೆಗೆ ಕಂಪ್ಯೂಟರ್ ಶಿಕ್ಷಕರಿಗೆ ಬಿಸಿಎ/ಬಿಎಸ್ಸಿ ಇನ್ ಕಂಪ್ಯೂಟರ್ ಸೈನ್ಸ ಅಥವಾ ಬಿಇ ಪದವಿಯಲ್ಲಿ ಗಣಕ ವಿಜ್ಞಾನ/ ಮಾಹಿತಿ ವಿಜ್ಞಾನ ವಿಷಯವನ್ನು ಐಚ್ಛಿಕ ವಿಷಯವನ್ನಾಗಿ ವ್ಯಾಸಂಗ ಮಾಡಿರಬೇಕು ಹಾಗೂ ಕನಿಷ್ಠ ಸೇವಾನುಭವ ಹೊಂದಿರಬೇಕು. ಕಡ್ಡಾಯವಾಗಿ ಆಂಗ್ಲ–ಮಾಧ್ಯಮದಲ್ಲಿ ಪದವಿ/ಬಿ.ಎಡ್ ಮಾಡಿರುವ ಬಗ್ಗೆ ದಾಖಲೆಗಳು ಸಲ್ಲಿಸಬೇಕು ಹಾಗೂ ಆಂಗ್ಲ ಮಾಧ್ಯಮದಲ್ಲಿ ಭೋದಿಸುವ ಸಾಮರ್ಥ್ಯ ಹೊಂದಿರಬೇಕು.

ಅತಿಥಿ–ಶಿಕ್ಷಕರ ಹುದ್ದೆಗೆ 16,650 ರೂ. ಗೌರವಧನ ನೀಡಲಾಗುತ್ತದೆ. ಅತಿಥಿ–ಶಿಕ್ಷಕರ ನೇಮಕಾತಿಯ ಅವಧಿಯು, ಖಾಯಂ ಶಿಕ್ಷಕರು ಶಾಲೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವವರೆಗೆ ಮಾತ್ರ ಇರುತ್ತದೆ.

# ಖಾಸಗಿ ಪೋಲೀಸ್ ಚೌಕಿ ತೆರವುಗೊಳಿಸಲು ಜೈ ಕನ್ನಡಿಗರ ಸೇನೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.3–ನಗರದ ಎಲ್ಲಾ ಮುಖ್ಯ ರಸ್ತೆ ಚೌಕಗಳಲ್ಲಿರುವ ಖಾಸಗಿ ಪೊಲೀಸ್ ಚೌಕಿಗಳನ್ನು ತೆರವುಗೊಳಿಸಿ ಸುರಕ್ಷಿತವಾದ ಪೊಲೀಸ್ ಚೌಕಿಗಳನ್ನು ನಿರ್ಮಾಣ ಮಾಡಬೇಕು ಎಂದು ಜೈ ಕನ್ನಡಿಗರ ಸೇನೆ ಒತ್ತಾಯಿಸಿದೆ.

ಈ ಸಂಬಂಧ ಮಹಾನಗರ ಪಾಲಿಕೆ ಆಯುಕ್ತರಿಗೆ ಸೇನೆ ಸಂಸ್ಥಾಪಕ ಅಧ್ಯಕ್ಷ ದತ್ತು ಹೆಚ್.ಭಾಸಗಿ ಅವರು ಮನವಿ ಪತ್ರ ಸಲ್ಲಿಸಿದ್ದು, ನಗರದ ಜಗತ್ ವೃತ್ತ, ಸರ್ದಾರ ವಲ್ಲಭಬಾಯಿ ಪಟೇಲ್ ವೃತ್ತ, ಜೇವರ್ಗಿ ರಸ್ತೆ, ಕೇಂದ್ರ ಬಸ್ ನಿಲ್ದಾಣ, ಗಂಜ್ ರಸ್ತೆ, ಹುಮಾನಾಬಾದ ಸರ್ಕಲ್ ರಿಂಗ್ ರಸ್ತೆ ಖರ್ಗೆ ರಸ್ತೆ ಸೇರಿದಂತೆ ಇನ್ನು ಹಲವಾರು ಸ್ಥಳಗಳಲ್ಲಿ ಖಾಸಗಿಯವರು ತಮ್ಮ ಜಾಹಿರಾತಿನ ಸಲುವಾಗಿ ಪೊಲೀಸ್ ಚೌಕಿಗಳನ್ನು ನಿರ್ಮಿಸಿ ತಮ್ಮ ಕಂಪನಿಯ ಜಾಹೀರಾತುಗಳನ್ನು ಅಂಟಿಸಿದ್ದಾರೆ. ಈ ಎಲ್ಲಾ ಚೌಕಿಗಳು ಕಳಪೆಯಿಂದ ಕೂಡಿದ್ದು ಅವು ಯಾವ ಸಮಯದಲ್ಲಿಯೂ ಸಹ ಬಿದ್ದು ಹೋಗುವ ಸ್ಥಿತಿಯಲ್ಲಿವೆ. ಇದರಿಂದ ಆ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುವ ಪೊಲೀಸ್ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಅನಾಹುತವಾಗುವ ಸಂಭವವಿದೆ. ಅಲ್ಲದೆ ಖಾಸಗಿ ಕಂಪನಿಯವರು ಈ ಚೌಕಿಗಳನ್ನು ನಿರ್ಮಿಸಲು ಯಾವುದೇ ಇಲಾಖೆಯಿಂದ ಅನುಮತಿ ಕೂಡ ತೆಗೆದುಕೊಂಡಿರುವುದಿಲ್ಲ. ಇವರು ಯಾವ ಆಧಾರದ ಮೇಲೆ ಚೌಕಿಗಳನ್ನು ನಿರ್ಮಿಸಿದ್ದಾರೋ ಗೊತ್ತಿಲ್ಲ. ಇದಕ್ಕೆ ಸಹಕರಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು. ಅಲ್ಲದೆ ಈಗ ನಿರ್ಮಿಸಿರುವ ಎಲ್ಲಾ ಚೌಕಿಗಳನ್ನು ತೆರವುಗೊಳಿಸಿ ಸಂಚಾರಿ ಪೊಲೀಸ್ ಇಲಾಖೆ ಹೊಸ ಮತ್ತು ಒಳ್ಳೆಯ ಗುಣಮಟ್ಟದ ಅಂದರೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ಮತ್ತು ಸಾರ್ವಜನಿಕರಿಗೆ ಯಾವುದೇ ರೀತಿಯ ಅನಾಹುತವಾಗದಂತಹ ಚೌಕಿಗಳನ್ನು ಸೂಕ್ತವಾದ ಸ್ಥಳದಲ್ಲಿ ನಿರ್ಮಿಸಬೇಕೆಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಸೇನೆಯ ಮಲ್ಲು ಆಲಗೂಡ, ಹುಸೇನ, ಸಂಜು ಮಾಳಗೆ, ಹಣಮಂತ ಬಸವರಾಜ ನಾಗನಹಳ್ಳಿ, ಅಭಿಷೇಕ, ಮಲ್ಲಯ್ಯ ಹಾಗೂ ಇನ್ನೂ ಹಲವಾರು ಕಾರ್ಯಕರ್ತಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಬಸ್ ಪಾಸ್‌ಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬೀದರ : ಜೂನ್.3: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ ವಿಭಾಗದಿಂದ 2025–26ನೇ ಸಾಲಿನ ವಿದ್ಯಾರ್ಥಿಗಳ ಬಸ್ ಪಾಸ್ ಪಡೆಯಲು ಸೇವಾ ಸಿಂಧು ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಸಕ್ತರು ಸೇವಾ ಸಿಂಧು ಪೋರ್ಟಲ್ ಮುಖಾಂತರ ಅಥವಾ ಕರ್ನಾಟಕ ಒನ್, ಗ್ರಾಮ ಒನ್ ಕೇಂದ್ರಗಳಲ್ಲಿ 30 ರೂ. ಸೇವಾ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ನಂತರ ವಿದ್ಯಾರ್ಥಿಗಳು ಆಯ್ಕೆ ಮಾಡಿದ ಕೌಂಟರ್‌ಗೆ ನಿಗದಿತ ಪಾಸಿನ ಶುಲ್ಕ ನಗದು ಅಥವಾ ಕ್ರೆಡಿಟ್ ಕಾರ್ಡ, ಡಿಬಿಟ್ ಕಾರ್ಡ ಅಥವಾ ಯುಪಿಐ ಮೂಲಕ ಪಾವತಿಸಿ ಪಾಸ್ ಪಡೆಯಬಹುದು. ಬಸವಕಲ್ಯಾಣ, ಔರಾದ, ಚಿಟಗುಪ್ಪಾ, ಭಾಲ್ಕಿ, ಬೀದರ ಕೇಂದ್ರ ಬಸ್ ನಿಲ್ದಾಣ, ಕರ್ನಾಟಕ ಒನ್ ನೌಬಾದ, ಹುಮನಾಬಾದದ ಕೌಂಟರ್‌ನಲ್ಲಿ ಪಾಸ್ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7760992202ಗೆ ಸಂಪರ್ಕಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೇಡಂ ಪೊಲೀಸ್ ಠಾಣೆಯಲ್ಲಿ ಬಕ್ರೀದ ಹಬ್ಬದ ನಿಮಿತ್ಯ ಶಾಂತಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು, 03. ತಾಲೂಕಿನ ಪೊಲೀಸ್ ಠಾಣೆಯಲ್ಲಿ ಬಕ್ರೀದ ಹಬ್ಬದ ಪ್ರಯುಕ್ತ ಶಾಂತಿ ಸಭೆಯನ್ನು ಹಮ್ಮಿಕೊಂಡಿದ್ದು ಸೇಡಂ ನಗರದ ಪ್ರಮುಖ ಹಿಂದೂ ಮತ್ತು ಮುಸ್ಲಿಂ ಭಾಂದವರು ಈ ಸಭೆಯಲ್ಲಿ ಹಾಜರಿದ್ದರು ಸಿಪಿಐ ಮಹಾದೇವಪ್ಪ. ಡಿ. ಸೇಡಂ ವೃತ್ತ, ಪಿಎಸ್ಐ ಉಪೇಂದ್ರ ಕುಮಾರ ಸೇಡಂ ಠಾಣೆ ಈ ಶಾಂತಿ ಸಭೆಯ ನೇತೃತ್ವ ವಹಿಸಿದ್ದು .ಸಿಪಿಐ ಮಹದೇವಪ್ಪ. ಡಿ. ರವರು ಮಾತನಾಡಿ ಮೊದಲಿಗೆ ಬಕ್ರೀದ್ ಹಬ್ಬದ ಶುಭಾಶಯಗಳನ್ನು ತಿಳಿಸುತ್ತ. ನಮ್ಮ ಭಾರತ ದೇಶ ವಿವಿಧತೆಯಲ್ಲಿ ಏಕತೆಯನ್ನು ಹೊಂದಿದ್ದು. ಭಾರತ ದೇಶ ಇಡಿ ಪ್ರಪಂಚಕ್ಕೆ ಸಂಸ್ಕೃತಿಯನ್ನು ಕಲಿಸಿಕೊಟ್ಟ ದೇಶವಾಗಿದೆ ಎನ್ನುವುದು ನಮಗೆ ಹೆಮ್ಮೆಯ ವಿಷಯವಾಗಿದೆ.

ಇತ್ತೀಚಿನ ದಿನಗಳಲ್ಲಿ ಹಿಂದು ಮತ್ತು ಮುಸ್ಲಿಂ ರ ನಡುವೆ ಅಶಾಂತಿಯನ್ನು ಮೂಡಿಸುವ ವಾತಾವರಣ ಉಂಟಾಗಿದ್ದು. ಸೇಡಂ ತಾಲ್ಲೂಕಿನಲ್ಲಿ ಇಲ್ಲಿಯವರೆಗೂ ಕೋಮು ಗಲಾಟೆಗಳೂ ನಡೆದಿಲ್ಲ ಅನ್ನುವುದು ಸಂತೋಷದ ಸಂಗತಿ ಬಕ್ರೀದ್ ಹಬ್ಬದ ಪ್ರಯುಕ್ತ ತಾವು ಎಲ್ಲಿ ಪ್ರಾರ್ಥನೆ ಮಾಡುತ್ತೀರಿ ಅಂತ ಮುಂಚಿತವಾಗಿ ಮಾಹಿತಿ ನಿಡಿ ಅದಕ್ಕೆ ನಾವು ನಮ್ಮ ಪೊಲೀಸ್ ಇಲಾಖೆ ಇಂದ ಸೂಕ್ತ ಬಂದೋಬಸ್ತನ್ನು ಒದಗಿಸುತ್ತೇವೆ.

ತಾವು ಕೂಡ ಯಾವುದೇ ಸಮಸ್ಸೆ ಆಗದಂತೆ ನೋಡಿಕೊಳ್ಳಬೇಕು ಯಾರಾದರೂ ಅಕ್ರಮವಾಗಿ ಗೋವುಗಳ ಸಾಗಾಟ ಮಾಡುವುದು ಕಂಡುಬಂದರೆ ನಮಗೆ ಮಾಹಿತಿ ನೀಡಿ ನಾವು ಸೂಕ್ತವಾದ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ. ತಾವೆಲ್ಲರೂ ಕಾನೂನು ಸುವ್ಯವಸ್ಥೆಗೆ ದಕ್ಕೆ ಆಗದಂತೆ ಹಬ್ಬದ ಆಚರಣೆ ಮಾಡಬೇಕು ಹಾಗೂ ಹಬ್ಬವನ್ನು ಶಾಂತಿಯುತವಾಗಿ ಆಚರಣೆ ಮಾಡಿ ಎಂದು ತಿಳಿಸಿದರು.

ಪಿಎಸ್ಐ ಉಪೇಂದ್ರಕುಮಾರ ಅವರು ಮಾತನಾಡಿ ಪ್ರತಿವರ್ಷದಂತೆ ಈ ವರ್ಷವು ಕೂಡ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಆಚರಣೆ ಮಾಡುತ್ತಿದ್ದು. ಸೇಡಂ ಪಟ್ಟಣ ಶಾಂತಿಯತೆಯಿಂದ ಕೂಡಿದ್ದು. ಇಲ್ಲಿಯವರೆಗೆ ಕೋಮು ಗಲಭೆಗೆ ಸಂಬಂಧಿಸಿದಂತೆ ಅಹಿತಕರ ಘಟನೆಗಳು ಸಂಭವಿಸಿಲ್ಲ ಎನ್ನುವುದು ಶ್ಲಾಘನೀಯ ಸಂಗತಿ ಪಟ್ಟಣದಲ್ಲಿ ಇತ್ತೀಚಿಗೆ ನಡೆದ ಹಲವಾರು ಜಯಂತಿಗಳ ಸಮಯದಲ್ಲಿ ಡಿ.ಜೆ. ಹಚ್ಚಿರುವುದಿಲ್ಲ. ಇದು ಉತ್ತಮ ಬೆಳವಣಿಗೆ ಹಬ್ಬ ಆಚರಣೆ ಸಮಯದಲ್ಲಿ ದ್ವೇಷ ಬಾಷಣ ಮಾಡಬಾರದು. ಯಾರಾದರು ಧರ್ಮಗಳ ಬಗ್ಗೆ ವ್ಯಕ್ತಿಗಳ ಬಗ್ಗೆ ಮಾತನಾಡಿದಲ್ಲಿ ನಮ್ಮ ಗಮನಕ್ಕೆ ತನ್ನಿ ನಾವು ಕಾನೂನು ಸೂಕ್ತಕ್ರಮ ಕೈ ಗೊಳ್ಳುತ್ತೇವೆ. ಹಬ್ಬವನ್ನು ಶಾಂತಿಯುತವಾಗಿ ಆಚರಣೆ ಮಾಡಿ ಅಹಿತಕರ ಘಟನೆಗಳು ನಡೆಯದಂತೆ ಜಾಗರುಕತೆಯಿಂದ ನೋಡಿಕೊಳ್ಳಿ ಎಂದರು.

ಶೇಖ್ ಅಹ್ಮದ್ ಅವರು ಮಾತನಾಡಿ ಬಕ್ರೀದ್ ಹಬ್ಬದಂದು ಈದಗಾದಲ್ಲಿ ಪವಿತ್ರ ಪ್ರಾರ್ಥನೆಯನ್ನು ಹಮ್ಮಿಕೊಳ್ಳುತ್ತೇವೆ.

ಸದರಿ ಸಮಯದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು. ನಮ್ಮ ಭಾರತ ದೇಶದಲ್ಲಿ ಹಲವಾರು ಜಾತಿ ಧರ್ಮಗಳಿದ್ದು ಭೇದಬಾವವಿಲ್ಲದೆ ಜೀವನ ನಡೆಸುತ್ತಿದ್ದೂ ಸೇಡಂ ನಗರದಲ್ಲಿಯು ಕೂಡ ಯಾವುದೇ ಭೇದಬಾವ ವಿಲ್ಲದೆ ಜೀವನ ನಡೆಸುತ್ತಿದ್ದೇವೆ ಎಂದರು.

ಶಿವಕುಮಾರ ಬೋಳಶೆಟ್ಟಿ ಮಾತನಾಡಿ ಸೇಡಂ ಪಟ್ಟಣವೂ ಶಾಂತಿಗೆ ಹೆಸರುವಾಸಿಯಾಗಿದೆ ಇಲ್ಲಿ ಹಿಂದೂ – ಮುಸ್ಲಿಂ ಬಾಂಧವರು ಜಾತಿಭೇದ ವಿಲ್ಲದೆ ಜೀವನ ನಡೆಸುತ್ತಿದ್ದೆವೆ.

ಬಕ್ರೀದ್ ಹಬ್ಬದ ಪ್ರಯುಕ್ತ ಪ್ರಾರ್ಥನೆ ಸ್ಥಳಗಳಲ್ಲಿ ಪುರಸಭೆ ಇಲಾಖೆಯವರು ಸ್ವಚ್ಛತೆ ಮತ್ತು ವಿದ್ಯುತ್ ವ್ಯವಸ್ಥೆ ಮಾಡಬೇಕು.

ಕರ್ನಾಟಕ ಸರ್ಕಾರದ ಗೋ – ಹತ್ಯೆ ಕಾಯಿದೆಯನ್ನು ಸಮರ್ಪಕವಾಗಿ ಜಾರಿಯಾಗುವಂತೆ ನೋಡಿಕೊಳ್ಳಬೇಕು ಎಂದು ಮಾತನಾಡಿದರು ಈ ಸಂದರ್ಭದಲ್ಲಿ ಮೊಹಮ್ಮದ್ ಗೌಸ್ ಮತ್ತು ಹಿಂದೂ ಮತ್ತು ಮುಸ್ಲಿಂ ಸಮಾಜದ ಹಿರಿಯರು ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಮನ್ವಯತೆಯಿಂದ ಸಾಮರಸ್ಯ ಅರಳುತ್ತದೆ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 3 ನಡೆ ನುಡಿಯಲ್ಲಿ ಸಮನ್ವಯ ಭಾವ ಅಳವಡಿಸಿಕೊಂಡರೆ ಸಮಾಜದಲ್ಲಿ ಸಾಮರಸ್ಯದ ಕುಸುಮಗಳರಳಿ ಸಮಭಾವದ ಪರಿಮಳ ಹರಡುತ್ತದೆ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಗ್ರಾಮದ ದಲಿತ ಬಾಂಧವರು, ಸತ್ಯ ತಾಯಿ ಮಂದಿರದಲ್ಲಿ ಆಯೋಜಿಸಿದ ಗುರುವಂದನೆ ಹಾಗೂ 825ನೇ ತುಲಾಭಾರ ಸಮಾರಂಭದ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು ಜ್ಞಾನ ಮತ್ತು ಅರಿವು ಯಾರೊಬ್ಬರ ಸ್ವತ್ತಲ್ಲ, ಜ್ಞಾನದ ಹಸಿವಿರುವ ಪ್ರತಿಯೊಬ್ಬ ವ್ಯಕ್ತಿಯೂ ಕೂಡ ಸಾಧನೆಗೆ ಅರ್ಹನು.

ದಿವ್ಯ ಜ್ಞಾನ ಮತ್ತು ಸತತ ಪರಿಶ್ರಮದಿಂದ ವಿಶ್ವ ಜ್ಞಾನಿಯಾದ ಡಾ. ಬಾಬಾ ಸಾಹೇಬ ಅಂಬೇಡ್ಕರರವರು ನಮಗೆ ಬಹುದೊಡ್ಡ ಆದರ್ಶವೂ ಹೌದು, ಆಸ್ತಿಯೂ ಹೌದು.

ಬುದ್ಧ ಬಸವ ಅಂಬೇಡ್ಕರ್ ರವರ ಚಿಂತನೆಗಳು ಸಮಾಜದ ಒಳತಿಗೆ ಹಾಗೂ ಚಲನಶೀಲತೆಗೆ ವಿಶಿಷ್ಟವಾದ ಭೂಮಿಕೆಯನ್ನು ಒದಗಿಸುತ್ತವೆ.

ಬಾಬಾ ಸಾಹೇಬರ ಮೂಲ ಆಶಯವಾದ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಾಧಿಸಲು ಪ್ರತಿಯೊಬ್ಬರೂ ಸಮಚಿತ್ತದಿಂದ ಹೆಜ್ಜೆ ಇಡಬೇಕಿದೆ.

ಲಿಂ.ಚನ್ನಬಸವಶಿವಯೋಗಿಗಳವರು ನಡೆದು ತೋರಿದ ಮಾರ್ಗದಲ್ಲಿ ಹಾರಕೂಡ ಶ್ರೀಮಠದ ಮುನ್ನಡೆಗೆ ದಲಿತ ಬಾಂಧವರು ತೋರುತ್ತಿರುವ ಭಕ್ತಿ, ಶ್ರದ್ಧೆ, ಸಹಾಯ, ಸಹಕಾರ ಯಾವತ್ತೂ ಮರೆಯುವಂತಿಲ್ಲ.

ಹಾರಕೂಡ ಗ್ರಾಮದ ಜನತೆಯ ಸಹೋದರತೆ, ಸಹಬಾಳ್ವೆಯ ಬದುಕು ಸಮಾಜಕ್ಕೆ ಮಾದರಿಯಾಗಲಿ, ಎಲ್ಲರಿಗೂ ಹಾರಕೂಡಧೀಶ ಸನ್ಮಂಗಳವನ್ನುಂಟು ಮಾಡಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ವಿಧಾನ ಬಿ.ಕೆ ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಮೇಘರಾಜ ನಾಗರಾಳೆ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ರಾಜಕುಮಾರ ಪಾಟೀಲ, ಅಯ್ಯಪ್ಪ ಸಜ್ಜನ, ಚೆನ್ನಪ್ಪದಾಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಚೆನ್ನಪ್ಪ ಹೋಳಕರ್ ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಕಾರ್ಯಕ್ರಮಕ್ಕೂ ಮೊದಲು ಗ್ರಾಮದ ಡಾ. ಅಂಬೇಡ್ಕರ್ ವೃತ್ತದಿಂದ ಸತ್ಯ ತಾಯಿ ಮಂದಿರದವರಿಗೆ ಅಲಂಕೃತ ಸಾರೋಟಿನಲ್ಲಿ ಹಾರಕೂಡ ಶ್ರೀಗಳ ಅದ್ದೂರಿ ಮೆರವಣಿಗೆ ಜರುಗಿತು.

# ಎನ್.ರವಿಕುಮಾರ ವಿರುದ್ಧ ಪ್ರಕರಣ ದಾಖಲು ರದ್ದುಗೊಳಿಸಲು ದಯಾನಂದ ಮೇತ್ರಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ :– ಜೂ.3– ಕಲ್ಬುರ್ಗಿಯಲ್ಲಿ ಇತ್ತೀಚೆಗೆ ನಡೆದ ಪ್ರತಿಭಟನಾ ರ್‍ಯಾಲಿಯಲ್ಲಿ ವಿಧಾನ ಪರಿಷತ್ ಪ್ರತಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ ಸರ್ಕಾರವನ್ನು ಟೀಕಿಸಿದಕ್ಕೆ ಸರ್ಕಾರದ ಒತ್ತಡದಿಂದ ಸುಳ್ಳು ಜಾತಿ ನಿಂದನೆ ಪ್ರಕರಣ ದಾಖಲಿಸಿದೆ. ಕೊಡಲೇ ರದ್ದುಗೊಳಿಸಬೇಕೆಂದು ಬಿಜೆಪಿ ಜಿಲ್ಲಾ ಓಬಿಸಿ ಮೋರ್ಚಾ ಉಪಾಧ್ಯಕ್ಷ ದಯಾನಂದ ಮೇತ್ರಿ ಆಗ್ರಹಿಸಿದ್ದಾರೆ. ಸರ್ಕಾರದ ವೈಫಲ್ಯವನ್ನು ಖಂಡಿಸುವುದು–ಟೀಕಿಸುವುದು ಜವಾಬ್ದಾರಿಯುತ ಪ್ರತಿಪಕ್ಷದವರು ಕರ್ತವ್ಯ ಆಡಳಿತ ವೈಫಲ್ಯವನ್ನು ಪ್ರಶ್ನಿಸಿರುವ ಎನ್.ರವಿಕುಮಾರ ವಿರುದ್ಧ ಉದ್ದೇಶ ಪೂರ್ವಕವಾಗಿ ರಾಜಕೀಯ ಪ್ರಭಾವದಿಂದ ಸುಳ್ಳು ಕೇಸ್ ದಾಖಲಿಸಿದ್ದು, ತಪ್ಪಾಗಿದೆ. ಕೂಡಲೇ ಕೇಸ್ ವಜಾ ಮಾಡಬೇಕೆಂದು ದಯಾನಂದ ಮೇತ್ರಿಯವರು ಆಗ್ರಹಿಸಿದ್ದಾರೆ. ಕೋಲಿ ಸಮಾಜದ ನಾಯಕರು ಕಳೆದ ಲೋಕ ಸಭಾ ಚುನಾವಣೆಯಲ್ಲಿ ಎನ್.ರವಿಕುಮಾರ ರವರು ಕಳೆದ 2019ರಲ್ಲಿ ಎನ್ ರವಿಕುಮಾರ ರವರು ಕಲ್ಬುರ್ಗಿಯ ಉಸ್ತುವಾರಿಯಾಗಿ ಪಕ್ಷಕ್ಕೆ ಹಗಲಿರಳನ್ನದೇ ಸೇವೆ ಸಲ್ಲಿಸಿ ಉಮೇಶ ಜಾಧವ್ ರವರಿಗೆ ಮತ ಹಾಕಿಸಿ ಕಾಂಗ್ರೆಸ್ ಪಕ್ಷಕ್ಕೆ ಸೋಲಿಸಿ ಅತಿ ಹೆಚ್ಚು ಮತಗಳಿಂದ ಗೆಲ್ಲಿಸಿ ಆರಿಸಿ ತಂದಿದಕ್ಕೆ ಎನ್ ರವಿಕುಮಾರ ರವರ ಮೇಲೆ ಕುತಂತ್ರದಿಂದ ಇಲ್ಲಸಲ್ಲದ ಸುಳ್ಳು ಆರೋಪ ಹೊರಿಸುತ್ತಿದ್ದಾರೆ. ಕಲ್ಬುರ್ಗಿ ಲೋಕಸಭಾ ಕ್ಷೇತ್ರದಲ್ಲಿ ಕೋಲಿ ಸಮಾಜ ಸುಮಾರು 5 ಲಕ್ಷ ಮತದಾರರಿದ್ದು, ಎನ್.ರವಿಕುಮಾರ ರವರ ಕೇಸ್ ಮುಗಿದ ಕ್ಷಣ ಮುಂಬರುವಂತಹ ವಿಧಾನ ಸಭಾ ಹಾಗೂ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕಪಾಠ ಕಲಿಸುವುದು ಗ್ಯಾರೆಂಟಿ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :– ಬಕ್ರೀದ್ ಹಬ್ಬಕ್ಕೆ ಗೋ ಹತ್ಯೆ ಹಾಗೂ ಗೋ ಸಾಗಾಟ ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಉಪ ವಿಭಾಗಾಧಿಕಾರಿ ಮುಕುಲ್ ಜೈನ್ ಅವರಿಗೆ ಬಜರಂಗದಳ ಹಾಗೂ ವಿಶ್ವ ಹಿಂದೂ ಪರಿಷತ್ ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬಜರಂಗದಳ ತಾಲೂಕು ಸಂಚಾಲಕರಾದ ರವಿ ನಾವದೇಗೆಕರ್. ವಿಶ್ವ ಹಿಂದೂ ಪರಿಷತ್ ಸಂಚಾಲಕರಾದ ಶ್ರೀ ಶೈಲ್ ವಾತಡೆ. ಪ್ರಕಾಶ ನಿರಾಳೆ ಸೇರಿದಂತೆ ಅನೇಕರು ಹಾಜರಿದ್ದರು.

# ಬಕ್ರಿದ್ ಹಬ್ಬ ಶಾಂತಿಯುತವಾಗಿ ನಡೆಯಲಿ: ಜಿಲ್ಲಾಧಿಕಾರಿ ನಿತೀಶ್ ಕೆ.



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 03– ಜಿಲ್ಲೆಯಲ್ಲಿ ಜೂನ್ 7 ರಂದು ನಡೆಯಲಿರುವ ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಗೋವು ಮತ್ತು ಒಂಟೆಗಳ ವಧೆ ಮತ್ತು ಸಾಗಣೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜೂನ್ 03ರ ಮಂಗಳವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ನಡೆದ ಬಕ್ರೀದ್ ಹಬ್ಬದ ಹಿನ್ನೆಲೆಯ ಜಿಲ್ಲಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯದಲ್ಲಿ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣ ಅಧಿನಿಯಮ 2020 ಜಾರಿಯಲ್ಲಿದ್ದು ಎಲ್ಲಾ ವಯಸ್ಸಿನ ಹಸು, ಹಸು ಕರು, ಗೂಳಿ, ಎತ್ತು ಮತ್ತು 13 ವರ್ಷದೊಳಗಿನ ಎಮ್ಮೆ ಕೋಣ ವಧೆಯನ್ನು ನಿಷೇಧಿಸಲಾಗಿದ್ದು, ಈ ಬಗ್ಗೆ ಧ್ವನಿವರ್ಧಕ ಬಳಸಿ ಅಲ್ಪಸಂಖ್ಯಾತರ ಸಮುದಾಯದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ತಿಳಿವಳಿಕೆ ಮೂಡಿಸಬೇಕು. ರಾಯಚೂರ ಮಹಾನಗರ ಪಾಲಿಕೆ ಸೇರಿದಂತೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸಭೆ ನಡೆಸಿ ಕಾಯಿದೆ ಬಗ್ಗೆ ಅರಿವು ಮೂಡಿಸಿ ಗೋಹತ್ಯೆ ತಡೆಗಟ್ಟುವ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ರಾಯಚೂರ ಜಿಲ್ಲೆಯ ರಾಯಚೂರ, ಸಿಂಧನೂರ, ಲಿಂಗಸೂರ, ಮಾನವಿ, ಮಸ್ಕಿ, ಶಿರವಾರ, ದೇವದುರ್ಗದ ನಗರ ಪಟ್ಟಣ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು. ಹಬ್ಬದ ದಿನಗಳಲ್ಲಿ ಉತ್ಪತ್ತಿಯಾಗುವ ಪ್ರಾಣಿತ್ಯಾಜ್ಯ ವಾರ್ಡವಾರು ಸಂಗ್ರಹಿಸಿ ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ಜಿಲ್ಲೆಯ ಎಲ್ಲ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಗಳಲ್ಲಿ ಮಾಲಿನ್ಯ ನಿಯಂತ್ರಣ ಇಲಾಖೆಯ ಸಹಯೋಗದೊಂದಿಗೆ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು. ಗ್ರಾಮೀಣ ಪ್ರದೇಶಗಳಲ್ಲಿ ಅನಧಿಕೃತ ಅಕ್ರಮ ಒಂಟೆ ಗೋ ಹತ್ಯೆ ತಡೆಗಟ್ಟಲು ಜಿಲ್ಲೆಯಲ್ಲಿನ ಎಲ್ಲಾ ಗ್ರಾಮ ಪಂಚಾಯತಗಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಆಯಾ ಗ್ರಾಮಗಳ ಗ್ರಾಮ ಆಡಳಿತ ಅಧಿಕಾರಿಗಳು ಒಗ್ಗೂಡಿ ತಮ್ಮ ತಮ್ಮ ವ್ಯಾಪ್ತಿಯಲ್ಲಿ ಬರುವ ಪಶು ಚಿಕಿತ್ಸಾಲಯಗಳ ಅಧಿಕಾರಿ ಸಿಬ್ಬಂದಿಯೊಂದಿಗೆ ಸಭೆ ನಡೆಸಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸಾರಿಗೆ ಇಲಾಖೆಯಿಂದ ಜಿಲ್ಲೆಯ ಎಲ್ಲಾ ಚೆಕ್ ಪೋಸ್ಟಗಳಲ್ಲಿ ಹಾಗೂ ಸೂಕ್ಷ್ಮ ಅಥವಾ ಅನುಮಾನಸ್ಪದ ಪ್ರದೇಶಗಳಲ್ಲಿ ಕಟ್ಟುನಿಟ್ಟಾಗಿ ಕರ್ತವ್ಯ ನಿರ್ವಹಿಸಿ ಅನಧಿಕೃತ ಒಂಟೆ ಅಥವಾ ಜಾನುವಾರು ಸಾಗಣೆ ವಾಹನಗಳ ತಪಾಸಣೆ ನಡೆಸುವಂತೆ ಹಾಗೂ ಒಂದು ವೇಳೆ ಅಂತಹ ವಾಹನಗಳು ಕಂಡುಬಂದಲ್ಲಿ ಕಾನೂನು ರೀತ್ಯ ಕ್ರಮವಹಿಸಿ ವಾಹನದಲ್ಲಿರುವ ಒಂಟೆ ಅಥವಾ ಜಾನುವಾರುಗಳನ್ನು ರಕ್ಷಿಸಿ ಪೋಲಿಸ್ ಹಾಗೂ ಪಶುಸಂಗೋಪನೆ ಇಲಾಖೆಯ ಸಹಯೋಗದೊಂದಿಗೆ ಗೋಶಾಲೆಗಳಿಗೆ ಸೇರಿಸುವ ಕಾರ್ಯವನ್ನು ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬಕ್ರಿದ್ ಹಬ್ಬ ಮುಕ್ತಾಯವಾಗುವವರೆಗೆ ಎಲ್ಲ ತಾಲೂಕುಗಳಲ್ಲಿ ನಡೆಯುವ ಜಾನುವಾರು ಸಂತೆಗಳಲ್ಲಿ ಕಂದಾಯ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳ, ಪಿಡಿಓ, ಎಪಿಎಂಸಿ, ಪಶುಪಾಲನಾ ಇಲಾಖೆಯ ಅಧಿಕಾರಿಗಳು ಹಾಜರಿದ್ದು ಸಂತೆ ಮುಗಿಯುವವರೆಗೆ ಜಾನುವಾರುಗಳ ಸಾಗಣೆ, ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯ್ದೆ 2020 ರನ್ವಯ ಹಾಗೂ ಇತರೆ ಕಾಯ್ದೆಗಳಲ್ಲಿನ ಅಂಶಗಳು ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ರಾಜ್ಯದಲ್ಲಿ ಜಾರಿಯಲ್ಲಿರುವ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣ ಅಧಿನಿಯಮ 2020 ಕಾಯಿದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಲ್ಲಿ ಪೊಲೀಸ್ ಇಲಾಖೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಇದನ್ನು ಪೊಲೀಸ್ ಇಲಾಖೆಯ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಅರಿಯಬೇಕು. ಸಾರಿಗೆ ಮತ್ತು ಪಶುಪಾಲನಾ ಇಲಾಖೆಯ ಸಹಯೋಗದೊಂದಿಗೆ ಸರಿಯಾಗಿ ಕರ್ತವ್ಯ ನಿರ್ವಹಿಸಬೇಕು. ವಿಶೇಷವಾಗಿ ಗಡಿಭಾಗಗಳಲ್ಲಿ ಅನಧಿಕೃತ ಒಂಟೆ ಜಾನುವಾರುಗಳ ಸಾಗಣೆ ವಾಹನಗಳ ತಪಾಸಣೆ ಮತ್ತು ರಕ್ಷಣಾ ಕಾರ್ಯವನ್ನು ಕಾನೂನರಿತ್ಯ ನಡೆಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೋಹಪಾತ್ರ ಅವರು ಮಾತನಾಡಿ, ಬಕ್ರಿದ್ ಹಬ್ಬದ ಪ್ರಯುಕ್ತ ಉತ್ಪತ್ತಿಯಾಗುವ ತ್ಯಾಜ್ಯವನ್ನು ನಗರ ಸ್ಥಳೀಯ ಸಂಸ್ಥೆಗಳ ಸಿಬ್ಬಂದಿ ನಿಯಮಾನುಸಾರ ಕಸಾಯಿ ಖಾನೆಗಳಿಂದ ಮನೆಮನೆಗಳಿಂದ ಸಂಗ್ರಹಿಸಿ ಆಟೋ ಟಿಪ್ಪರ್ ಮತ್ತು ಟ್ರಾಕ್ಟರಗಳ ಮೂಲಕ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಸಾಗಿಸಬೇಕು. ಈ ತ್ಯಾಜ್ಯವು ಸಾರ್ವಜನಿಕರಿಗೆ ಕಾಣದಂತೆ ರಸ್ತೆ ಮೇಲೆ ಸೋರದಂತೆ ತಾಡಪಲ್ ಪ್ಲಾಸ್ಟಿಕ್ ಹೊದಿಕೆಯಿಂದ ಮುಚ್ಚಿ ಸಾಗಣೆ ಮಾಡಬೇಕು. ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಿಯಮಾನುಸಾರ ಈ ತ್ಯಾಜ್ಯ ವಿಲೇ ಮಾಡಲು ಬೇಕಾದ ಎಲ್ಲ ಸಲಕರಣೆಗಳನ್ನು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಪಶ್ಚಿಮ ವೃತ್ತದ ಸಿಪಿಐ ನಿಂಗಪ್ಪ ಎನ್.ಆರ್., ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಅಶೋಕ ಕೋಲ್ಕಾರ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಮೀಲಿನ್ ಕುಮಾರ್, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು, ಮುಖ್ಯಪಶು ವೈದ್ಯಾಧಿಕಾರಿಗಳು ಸೇರಿದಂತೆ ಇನ್ನಿತರರು ಇದ್ದರು.

## ಗ್ಯಾರಂಟಿ ಯೋಜನೆ ಫಲಾನುಭವಿಗಳ ಜೊತೆ ಸಂವಾದ ಕಾರ್ಯಕ್ರಮ

# ರಾಜ್ಯ ಸರ್ಕಾರ ನುಡಿದಂತೆ, ನಡೆದಿದೆ: ಸಂಸದ ಖಂಡ್ರೆ



ಯೋಜನೆಗಳ ಫಲಾನುಭವಿಗಳ ಜೊತೆ ಮಂಗಳವಾರ ನಡೆದ ಸಂವಾದ ಕಾರ್ಯಕ್ರಮವನ್ನು ಸಂಸದ ಸಾಗರ ಬಿ.ಖಂಡ್ರೆ ಅವರು ಉದ್ಘಾಟಿಸಿದರು. ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕಲಬುರವಿ ವಿಭಾಗೀಯ ಉಪಾಧ್ಯಕ್ಷರಾದ ಎಸ್.ಆರ್. ಮಹರೋಜ್, ನೀಲಕಂಠ ರಾಠೋಡ, ತಾ.ಪಂ.ಕಾ.ನಿ.ಅ.ರಮೇಶ ಸುಲ್ಪಿ, ಸಿಡಿಪಿಓ ಗೌತಮ ಸಿಂಧೆ ಮತ್ತಿತರರು ಇದ್ದರು.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಯಶಸ್ವಿಗೊಳಿಸುವುದರ ಜೊತೆಗೆ, ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕೈಗೊಳ್ಳ ಲಾಗುತ್ತಿದೆ ಎಂದು ಸಂಸದ ಸಾಗರ ಬಿ.ಖಂಡ್ರೆ ಹೇಳಿದರು.

ಜಿಲ್ಲಾ ಪಂಚಾಯತ್ ಬೀದರ್ ಹಾಗೂ ತಾಲ್ಲೂಕು ಪಂಚಾಯತ್ ಬಸವಕಲ್ಯಾಣ ಸಂಯುಕ್ತಾಶ್ರಯದಲ್ಲಿ ನಗರದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ರ್‍ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅವರ ಅಧ್ಯಕ್ಷತೆಯಲ್ಲಿ ನಡೆದ ಗ್ಯಾರಂಟಿ ಯೊಜನೆಗಳ ಫಲಾನುಭವಿಗಳ ಜೊತೆ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಚುನಾವಣೆ ಸಂದರ್ಭದಲ್ಲಿ ಬಿಜೆಪಿ ಪಕ್ಷದ ನಾಯಕರು ಸಾಕಷ್ಟು ಆರೋಪಗಳನ್ನು ಮಾಡಿದ್ದರು. ಗ್ಯಾರಂಟಿ ಯೋಜನೆಗಳಿಂದ ಸರ್ಕಾರ ಆರ್ಥಿಕವಾಗಿ ದೀವಾಳಿ ಆಗುತ್ತದೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಕೈಗೊಳ್ಳಲು ಸಾಧ್ಯವಾಗುವುದಿಲ್ಲ ಎಂದು ಆರೋಪ ಮಾಡಿದ್ದರು. ಆದರೆ ಇಂದು ಯಾವುದೇ ಜಾತಿ ಮತ್ತು ಪಕ್ಷ ನೋಡದೆ ಎಲ್ಲಾ ಜನರಿಗೆ ಗ್ಯಾರಂಟಿ ಯೋಜನೆಗಳು ಅವರ ಮನೆ ಬಾಗಿಲಿಗೆ ಮುಟ್ಟಿಸುವ ಮೂಲಕ ಚುನಾವಣೆಯಲ್ಲಿ ನುಡಿದಂತೆ ನಾವು ನಡೆದು ಕೊಂಡಿದ್ದೇವೆ ಎಂದರು. ಹಿಂದೆ ಇದ್ದ ಸಂಸದರು 5 ಸಾವಿರ ಮನೆ ತರಲು ಆಗಿಲ್ಲ. ಆದರೆ ಇಂದು ಸರ್ಕಾರ ದಿಂದ 50 ಸಾವಿರ ಮನೆ ಮಂಜೂರು ಮಾಡಿಕೊಂಡು ಬರಲಾಗಿದೆ. ಅವಶ್ಯಕತೆ ಬಿದ್ದರೆ ಮತ್ತೆ 50 ಸಾವಿರ ಮನೆಗಳು ಮಂಜೂರು ಮಾಡಿಕೊಂಡು ಬರುವ ಮೂಲಕ ಗುಡಿಸಲು ಮುಕ್ತ ಜಿಲ್ಲೆಯನ್ನಾಗಿ ಮಾಡಲಾಗುವುದು ಎಂದರು.

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕಲಬುರವಿ ವಿಭಾಗೀಯ ಉಪಾಧ್ಯಕ್ಷರಾದ ಎಸ್.ಆರ್. ಮಹರೋಜ್ ಅವರು ಮಾತನಾಡಿ, ರಾಜ್ಯ ಸರ್ಕಾರ ಜಾರಿಗೆ ಮಾಡಿರುವ 5 ಗ್ಯಾರಂಟಿಗಳು ರಾಜ್ಯದಲ್ಲಿ ಬಹಳ ಸಮರ್ಪಕವಾಗಿ ನಡೆಯುತ್ತಿವೆ. 98 ರಷ್ಟು ಫಲಾನುಭವಿಗಳು ಮನೆ ಬಾಗಿಲಿಗೆ ಮುಟ್ಟಿಸುವ ಮೂಲಕ ವಿರೋಧಿಗಳ ಬಾಯಿ ಮುಚ್ಚಿಸುವ ಕೆಲಸ ಮಾಡಿದ್ದೇವೆ ಎಂದರು.

ನಂತರ ಕರ್ನಾಟಕ ಮೀನುಗಾರಿಗೆ ಅಭಿವೃದ್ಧಿ ನಿಗಮ ಅಧ್ಯಕ್ಷೆ ಮಾಲಾ.ಬಿ.ನಾರಾಯಣರಾವ್ ಹಾಗೂ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಅಮೃತ ಚೀಮಕೋಡೆ ಮಾತನಾಡಿದರು. ನಂತರ ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅಧ್ಯಕ್ಷ ನೀಲಕಂಠ ರಾಠೋಡ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಪಿ, ಸಿಡಿಪಿಓ ಗೌತಮ ಸಿಂಧೆ ಸೇರಿದಂತೆ ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳು ಸೇರಿದಂತೆ ಮತ್ತಿತರರು ಇದ್ದರು.

# ಬಸವ ಕಲ್ಯಾಣ ಕ್ಕೆ ರೈಲ್ವೆ ಸಂಪರ್ಕ ಕಲ್ಪಿಸಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಬೀದರ ನಗರಕೆ ಆಗಮಿಸಿದ ಕೇಂದ್ರ ಸರ್ಕಾರದ ರೈಲ್ವೆ ಸಚಿವ ರಾದ ವಿ. ಸೋಮಣ್ಣನವರನ್ನು ಭೆಟ್ಟಿಯಾಗಿ ಬಸವನ್ನವರ ಕಾಯಕ ಭೂಮಿ ಬಸವ ಕಲ್ಯಾಣ ಕ್ಕೆ ನೂತನ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಒತ್ತಾಯಿಸಿ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಗೋರ್ಟಾದ ಪೂಜ್ಯ ಶ್ರೀ ಡಾ. ರಾಜಶೇಖರ ಸ್ವಾಮಿ. ನಾಗಮಾರ ಪಲ್ಲಿ ಸಹೋದರರು ಶಿವಯ್ಯಾ ಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ಕುಡಿಯುವ ನೀರನ್ನು ಕಾಯಿಸಿ ಸೋಸಿ ಕುಡಿಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 3– ಯಾದಗಿರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾರ್ಡ್ಗಳ ಸಾರ್ವಜನಿಕರಿಗಾಗಿ ಕುಡಿಯುವ ನೀರನ್ನು ಕಾಯಿಸಿ ಸೋಸಿ ಕುಡಿಯಬೇಕು ಎಂದು ಯಾದಗಿರಿ ನಗರಸಭೆ ಪೌರಾಯುಕ್ತರು ಉಮೇಶ ಚವ್ಹಾಣ ಅವರು ತಿಳಿಸಿದ್ದಾರೆ.

ಮಳೆಗಾಲ ಪ್ರಾರಂಭ ಹಿನ್ನೆಲೆ ಗುರುಸುಣಗಿ ಬ್ಯಾರೇಜ್ ನಿಂದ ಭೀಮಾ ನದಿಗೆ ಅಪಾರ ಪ್ರಮಾಣದ ನೀರು ಬಿಡುಗಡೆ ಮಾಡುತ್ತಿರುವುದರಿಂದ ಹೊಂಡು ಮಿಶ್ರಿತ ನೀರು ನದಿಗೆ ಬರುತ್ತಿದ್ದು, ಯಾದಗಿರಿ ನಗರಸಭೆಯ ನೀರು ಶುದ್ಧೀಕರಣ ಘಟಕದಿಂದ ಕುಡಿಯುವ ನೀರನ್ನು ಪ್ರತಿದಿನ ಮೂರು ಬಾರಿ ನೀರಿನ ತಪಾಸಣೆ ಮಾಡಿ ಶುದ್ಧೀಕರಿಸಿ,

## ಕೆಪಿಸಿಸಿ ಸಹಕಾರ ವಿಭಾಗಕ್ಕೆ ತಾಳಂಪಳ್ಳಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 03 : ಬಸವಕಲ್ಯಾಣ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಸಹಕಾರ ವಿಭಾಗದ ರಾಜ್ಯ ಘಟಕದ ಅಧ್ಯಕ್ಷರನ್ನಾಗಿ ನಗರದ ಕಾಂಗ್ರೆಸ್ ಮುಖಂಡ ಧನರಾಜ ತಾಳಂಪಳ್ಳಿ ಅವರನ್ನು ನೇಮಿಸಲಾಗಿದೆ.

ಕೆಪಿಸಿಸಿ ರಾಜ್ಯ ಘಟಕದ ಅಧ್ಯಕ್ಷ ಡಿ.ಕೆ. ಶಿವಕುಮಾರ ಪ್ರಕಟಣೆಯ ಮೂಲಕ ಈ ವಿಷಯ ತಿಳಿಸಿದ್ದಾರೆ. ಪಕ್ಷದ ಈ ಮಹತ್ವದ ಜವಾಬ್ದಾರಿ ವಹಿಸಿಕೊಂಡು ರಾಜ್ಯಮಟ್ಟದ ನಾಯಕರ ಮಾರ್ಗದರ್ಶನ ಮತ್ತು ಸಹಕಾರದೊಂದಿಗೆ ಸಹಕಾರ ವಿಭಾಗದ ಸಂಘಟನೆ ಬಲಗೊಳಿಸಬೇಕು. ಪಕ್ಷದ ಬಲವರ್ಧನೆನಿಟ್ಟಿನಲ್ಲಿ ಈಗಿನಿಂದಲೇ ಕಾರ್ಯೋನ್ಮುಖರಾಗಬೇಕು ಎಂದು ಸೂಚಿಸಲಾಗಿದೆ.

## ಬಸವಕಲ್ಯಾಣಕ್ಕೆ ರೈಲು ಸಂಪರ್ಕ ಕಲ್ಪಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 03 : ಬಸವಾದಿಶರಣರಕರ್ಮಭೂಮಿ ಬಸವಕಲ್ಯಾಣಕ್ಕೆರೈಲು ಸಂಪರ್ಕ ಕಲ್ಪಿಸಬೇಕು ಎಂದು ಬೇಮಳಖೇಡ ಹಿರೇಮಠ ಸಂಸ್ಥಾನದ ಡಾ. ರಾಜಶೇಖರ ಶಿವಾಚಾರ್ಯ ಒತ್ತಾಯಿಸಿದ್ದಾರೆ.

ಬೀದ???ನಲ್ಲಿ ಈಚೆಗೆ ಈ ಕುರಿತು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಬಸವಕಲ್ಯಾಣದ ಅನುಭವ ಮಂಟಪ ವಿಶ್ವದ ಮೊದಲ ಸಂಸತ್ತು ಎಂದೇ ಹೆಸರಾಗಿದೆ. ಬಸವಣ್ಣನವರ ಕಾಯಕ–ದಾಸೋಹ ತತ್ವ, ಸಾಮಾಜಿಕ ಕ್ರಾಂತಿಯಿಂದಾಗಿ ಈ ನೆಲ ವಿಶ್ವಮಾನ್ಯವಾಗಿದೆ. ರಾಜ್ಯ ಸರ್ಕಾರ ಬಸವಕಲ್ಯಾಣದಲ್ಲಿ ಭವ್ಯ ನೂತನ ಅನುಭವ ಮಂಟಪ ನಿರ್ಮಿಸುತ್ತಿದೆ. ಇಂದಲ್ಲ, ನಾಳೆ ಬಸವಕಲ್ಯಾಣ ಜಗತ್ತಿನ ಗಮನ ಸೆಳೆಯಲಿದೆ. ಎಲ್ಲೆಡೆಯ ಪ್ರವಾಸಿಗರನ್ನು ತನ್ನತ್ತ ಕೈಬೀಸಿ ಕರೆಯಲಿದೆ ಎಂದು ಗಮನ ಸೆಳೆದರು.

ಈಗಾಗಲೇ ರಾಜ್ಯ ಹಾಗೂ ನೆರೆ ರಾಜ್ಯಗಳ ಭಕ್ತರು ಬಸವಕಲ್ಯಾಣಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಾರೆ. ನೂತನ ಅನುಭವ ಮಂಟಪ ನಿರ್ಮಾಣ ಆರಂಭವಾದ ನಂತರ ಈ ಸಂಖ್ಯೆ ಇನ್ನೂ ಹೆಚ್ಚಾಗಿದೆ ಎಂದು ತಿಳಿಸಿದರು.

ರೈಲ್ವೆ ಸಂಪರ್ಕವಾದರೆ ದೇಶ, ವಿದೇಶದ ಪ್ರವಾಸಿಗರ ದಂಡು ಬಸವಕಲ್ಯಾಣಕ್ಕೆ ಹರಿದು ಬರುವ ವಿಶ್ವಾಸ ಇದೆ. ರೈಲ್ವೆ ಸಂಪರ್ಕದಿಂದ ಪ್ರವಾಸಿಗರಿಗೆ ಅನುಕೂಲವಾಗುವ ಜತೆಗೆ ವ್ಯಾಪಾರ, ಉದ್ಯೋಗ, ಕೈಗಾರಿಕೆಗಳ ವೃದ್ಧಿಯಾಗಲಿದೆ. ಇದರಿಂದ ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೆ ನೆರವಾಗಲಿದೆ ಎಂದು ಮನವರಿಕೆ ಮಾಡಿದರು.

ಹುಮನಾಬಾದ್ ಇಲ್ಲವೇ ಕಮಲಾಪುರದಿಂದ ಬಸವಕಲ್ಯಾಣಕ್ಕೆ ರೈಲು ಮಾರ್ಗ ನಿರ್ಮಿಸಬೇಕು. ಭಾರತೀಯ ರೈಲ್ವೆಯೊಂದಿಗೆ ಬಸವಕಲ್ಯಾಣವನ್ನು ಜೋಡಿಸಬೇಕು ಎಂದು ಬೇಡಿಕೆ ಮಂಡಿಸಿದರು.

ತಮ್ಮ ಮನವಿಗೆ ಸ್ಪಂದಿಸಿದ ಸಚಿವರು, ಬಸವಕಲ್ಯಾಣಕ್ಕೆ ರೈಲು ಸಂಪರ್ಕ ಕಲ್ಪಿಸುವ ದಿಸೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದು ಡಾ. ರಾಜಶೇಖರ ಶಿವಾಚಾರ್ಯ ತಿಳಿಸಿದ್ದಾರೆ.

ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಉಮಾಕಾಂತ ನಾಗಮಾರಪಳ್ಳಿ, ಗುರುಪಾದಪ್ಪ ನಾಗಮಾರಪಳ್ಳಿ ಮಲ್ಟಿ ಸೂಪರ್ ಸ್ಪೆಷಾಲಿಟಿ ಸಹಕಾರ ಆಸ್ಪತ್ರೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ, ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ, ಡಾ. ಚಂದ್ರಕಾಂತ ಗುದಗೆ, ಸಂಜುಕುಮಾರ ಸಿದ್ದಾಪುರ, ರಮೇಶ ಅರಳಿ ಇದ್ದರು.

## ವಿದ್ಯಾರ್ಥಿನಿ ಪೂರ್ವಿ ರೆಡ್ಡಿಗೆ ಭಾಲ್ಕಿ ಶ್ರೀಗಳ ಆಶೀರ್ವಾದ



ಚನ್ನಬಸವೇಶ್ವರ ಗುರುಕುಲದಲ್ಲಿ ಕಲಿತ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕೆಸೆಟ್, ಜೆಇಇ, ನೀಟ್, ಎನ್‌ಐಟಿ ಸೇರಿದಂತೆ ಮುಂತಾದ ರಾಜ್ಯ ಮತ್ತು ರಾಷ್ಟ್ರ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅತ್ಯುತ್ತಮ ರ‍್ಯಾಂಕ್ ಪಡೆದು ಗಮನಾರ್ಹ ದೇಶದ ಪ್ರತಿಷ್ಠಿತ ಕಾಲೇಜುಗಳಲ್ಲಿ ಸರಕಾರಿ ಕೋಟಾದಲ್ಲಿ ಪ್ರವೇಶ ಪಡೆಯುತ್ತಿರುವುದು ಹೆಮ್ಮೆ ತರಿಸಿದೆ.

– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.3:ವಿದ್ಯಾರ್ಥಿಗಳಲ್ಲಿ ಉನ್ನತ ಗುರಿ ಅದಕ್ಕೆ ಪೂರಕ ಪ್ರಯತ್ನ ಇದ್ದರೆ ಸಾಧನೆಗೆ ಸಹಕಾರಿ ಆಗುತ್ತದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು

ಪಟ್ಟಣದಲ್ಲಿ ಕೆಸೆಟ್‌ನಲ್ಲಿ ಪಶು ವೈದ್ಯಕೀಯ ವಿಭಾಗದಲ್ಲಿ ರಾಜ್ಯಕ್ಕೆ 25ನೆಯ ರ‍್ಯಾಂಕ್ ಪಡೆದ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ವಿದ್ಯಾರ್ಥಿನಿ ಪೂರ್ವಿರೆಡ್ಡಿ ಶಿವಶರಣರೆಡ್ಡಿ ಅವರನ್ನು ಮಂಗಳವಾರ ಆಶೀರ್ವದಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶೈಕ್ಷಣಿಕ ಸೇರಿ ಎಲ್ಲ ಕ್ಷೇತ್ರಗಳಲ್ಲಿ ಪೈಪೋಟಿ ಹೆಚ್ಚುತ್ತಿದೆ. ಸಾಧನೆಗೆ ಯಾವುದೆ ಅಡ್ಡ ಮಾರ್ಗವಿಲ್ಲ.

ಹಾಗಾಗಿ ವಿದ್ಯಾರ್ಥಿಗಳು ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಲು ನಿರ್ದಿಷ್ಟ ಯೋಚನೆ, ಯೋಜನೆ ರೂಪಿಸಿಕೊಂಡು ಉನ್ನತ ಸಾಧನೆಯತ್ತ ಗಮನ ಹರಿಸಬೇಕು ಎಂದರು.

ಗ್ರಾಮೀಣ ಭಾಗದ ವಿದ್ಯಾರ್ಥಿನಿ ಪೂರ್ವಿರೆಡ್ಡಿ ಅವರು ಪಶು ವೈದ್ಯಕೀಯ ವಿಭಾಗದಲ್ಲಿ ರಾಜ್ಯಕ್ಕೆ 25ನೆಯ ರ‍್ಯಾಂಕ್ ಪಡೆದಿರುವುದು ಹೆಮ್ಮೆ ತರಿಸಿದೆ.

ಪಶು ವೈದ್ಯಕೀಯ ಕ್ಷೇತ್ರದಲ್ಲಿ ವಿಪುಲ ಅವಕಾಶಗಳಿವೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್‌ನ ಉಪಾಧ್ಯಕ್ಷ ಸೋಮನಾಥಪ್ಪ ಅಷ್ಟೂರೆ, ವಿದ್ಯಾವತಿ ಅಷ್ಟೂರೆ, ಅಶೋಕ ಬಾವುಗೆ, ಶಿವಶರಣರೆಡ್ಡಿ, ಜಗದೇವಿ ಶಿವಶರಣರೆಡ್ಡಿ, ಉಪನ್ಯಾಸಕ ಸುನಿಲ ರೆಡ್ಡಿ, ಸಾಹಿತಿ ರಾಜು ಜುಬರೆ ಇದ್ದರು.

## ಹೊಲಗಳಿಗೆ ರಸ್ತೆ ನಿರ್ಮಾಣಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.3: ತಾಲೂಕಿನ ಕೋನಮೇಳಕುಂದಾ ಗ್ರಾಮದಲ್ಲಿ ರೈಲು ಹಳಿಗೆ ಹೊಂದಿಕೊಂಡಿರುವ ಜಮೀನುಗಳಿಗೆ ರಸ್ತೆ ನಿರ್ಮಿಸಿಕೊಡಬೇಕು ಎಂದು ರೈತರು ಮನವಿ ಮಾಡಿದ್ದಾರೆ.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಕೇಂದ್ರದ ರಾಜ್ಯ ರೈಲ್ವೆ ಸಚಿವ ವಿ.ಸೋಮಣ್ಣನವರಿಗೆ ಈಚೆಗೆ ರೈತರು ಭೇಟಿಯಾಗಿ ಲಿಖಿತ ಮನವಿ ಸಲ್ಲಿಸಿದರು.

ಈ ಮೊದಲು ಕಳೆದ ಹಲವು ದಶಕಗಳಿಂದ ಸಿದ್ದೇಶ್ವರ ರೈಲು ಹಳಿಗೆ ಹೊಂದಿಕೊಂಡು ರಸ್ತೆ ಇತ್ತು. ಅಲ್ಲಿ ಎತ್ತಿನಬಂಡಿ ಹಾಗೂ ಟ್ರ್ಯಾಕ್ಟರ್‌ಗಳು, ಮೋಟಾರ್‌ಸೈಕಲ್ ಸಂಚರಿಸಲು ಅವಕಾಶವಿತ್ತು.

ಆದರೆ ಕಳೆದ ಒಂದೆರಡು ದಶಕಗಳ ಹಿಂದೆ ಮಾನವ ರಹಿತ ಲೆವಲ್ ಕ್ರಾಸಿಂಗ್‌ಗೆ ಮುಕ್ತಿ ನೀಡುವ ಉದ್ದೇಶದಿಂದ ರೈಲು ಹಳಿಗೆ ಹೊಂದಿಕೊಂಡಿರುವ ರಸ್ತೆಯನ್ನು ಒತ್ತುವರಿ ಮಾಡಿ ರೈತರಿಗೆ ಪರ್ಯಾಯ ವ್ಯವಸ್ಥೆ ಕೂಡ ಮಾಡಿಕೊಟ್ಟಿಲ್ಲ. ಇದರಿಂದ ನೂರಾರು ರೈತರ ಜಮೀನುಗಳಿಗೆ ರಸ್ತೆ ಇಲ್ಲದಂತಾಗಿದೆ. ಜಮೀನು ಸಾಗುವಳಿ ಮಾಡಲು ಬೀಜ, ಗೊಬ್ಬರ ಮತ್ತು ಕೃಷಿ ಉತ್ಪನ್ನ ಸಾಗಿಸಲು ತೊಂದರೆಯಾಗುತ್ತಿದೆ.

ಕೂಡಲೇ ರೈಲು ಹಳಿಗೆ ರಸ್ತೆ ಮಾಡಿಕೊಟ್ಟು ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ. ಈ ಸಂದರ್ಭದಲ್ಲಿ ಸಂಸದ ಸಾಗರ ಖಂಡ್ರೆ, ಗ್ರಾಮ ಪಂಚಾಯತಿ ಅಧ್ಯಕ್ಷ ಸಂತೋಷ ಮಾನಕಾರ, ಮಾಜಿ ಅಧ್ಯಕ್ಷ ಶಶಿಧರ ಕೋಸಂಬೆ, ರೈತರಾದ ವೈಜಿನಾಥ ಹೊಸಾಳೆ, ಮಲ್ಲಿಕಾರ್ಜುನ ತುಗಶೆಟ್ಟೆ, ಸಿದ್ರಾಮ ಧನ್ನೆ, ಧನರಾಜ ಹೊಸಾಳೆ ಸೇರಿದಂತೆ ಹಲವರು ಇದ್ದರು.

## ಮರೆಯಲಾಗದ ಮಹಾನುಭಾವರು -ಗ್ರಂಥ ಲೋಕಾರ್ಪಣೆ



ಡೋಣಗಾಪೂರ ಗ್ರಾಮದ ಹಿರಿಯ ಜೀವಿ ದಿ.ಸಂಗಪ್ಪ ಬಿರಾದಾರ ಅವರ ಎಲ್ಲ ಅಪೇಕ್ಷೆಗಳನ್ನು ಈಡೇರಿಸಲಾಗುವುದು. ಗ್ರಾಮದ ಮುಖ್ಯರಸ್ತೆಯಿಂದ ಡೋಣೇಶ್ವರ ಮಂದಿರವರೆಗಿನ ರಸ್ತೆ ನಿರ್ಮಾಣಕ್ಕೆ 2 ಕೋ. ಅನುದಾನ ನೀಡಲಾಗುವುದು. ಗ್ರಾಮದ ಕೆರೆ ನಿರ್ಮಾಣಕ್ಕಾಗಿ ಸಹ ಟೆಂಡರ ಕರೆಯಲಾಗಿದ್ದು, ಒಂದು ವರ್ಷದೊಳಗೆ ಲೋಕಾರ್ಪಣೆ ಮಾಡಲಾಗುವುದು. ಸಾಹಿತಿ ವೀರಶೆಟ್ಟಿ ಬಾವುಗೆ ರಚಿತ ಮರೆಯಲಾಗದ ಮಹಾನುಭಾವರು ಗ್ರಂಥ ಇತರರಿಗೆ ಮಾದರಿಯಾಗಿದೆ.

'–ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ.

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.3:ತನು,ಮನ,ಧನದ ಸಹಕಾರ ಮನೋಭಾವನೆ ಹೊಂದಿ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ, ಸದಾ ಗ್ರಾಮದ ಸುಧಾರಣೆ–ಯ ಚಿಂತಕರಾದ ದಿ.ಸಂಗಪ್ಪ ಬಿರಾದಾರ ಅವರ ಸೇವೆ ಯಾರೂ ಮರೆಯುವಂತಿಲ್ಲ ಎಂದು ಅರಣ್ಯ, ಪರಿಸರ, ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಭಾಲ್ಕಿ ತಾಲೂಕಿನ ಡೋಣಗಾಪೂರ ಗ್ರಾಮದಲ್ಲಿ ಸಾಹಿತಿ ವೀರಶೆಟ್ಟಿ ಬಾವುಗೆ ಸಂಪಾದಿತ 'ಮರೆಯಲಾಗದ ಮಹಾನುಭಾವರು' ಎಂಬ ಗ್ರಂಥ ಲೋಕಾರ್ಪಣೆ ಮಾಡಿ, ಮಾತನಾಡಿದ ಅವರು, ಸಂಗಪ್ಪಾ ಬಿರಾದಾರ ಕುರಿತು ವೀರಶೆಟ್ಟಿ ಬಾವುಗೆ ಸಂಪಾದಿತ 'ಮರೆಯಲಾಗದ ಮಹಾನುಭಾವರು' ಅವರ ಜೀವನ ಪ್ರತಿಬಿಂಬಿಸುವ ಅತ್ಯುತ್ತಮ ದರ್ಪಣವಾಗಿದೆ. ಯಾವ ವ್ಯಕ್ತಿ ನಿಸ್ವಾರ್ಥ ಭಾವದಿಂದ ಸಮಾಜ ಸೇವೆ ಮಾಡುತ್ತಾನೆ, ಆತ ಕಣ್ಮರೆ–ಯಾದ ನಂತರವೂ ಗ್ರಾಮದ ಜನ ಮರೆಯುವುದಿಲ್ಲ. ಅದಕ್ಕೆ ತಾಜಾ ನಿದರ್ಶನ ದಿ.ಸಂಗಪ್ಪ ಬಿರಾದಾರ ಅವರ ಕುರಿತು ರಚಿಸಿದ ಗ್ರಂಥ ಬಿಡುಗಡೆ ಸಮಾರಂಭಕ್ಕೆ ಸೇರಿದ ಅಪಾರ ಜನರೇ ಸಾಕ್ಷಿ ಎಂದರು.

ಸಾನಿಧ್ಯವಹಿಸಿದ ನಾಂದೇಡ ಜಿಲ್ಲೆಯ ತಮಲೂರಿನ ಶಿವಾನಂದ ಶಿವಾಚಾರ್ಯರು ಮಾತನಾಡಿ, ಎಲ್ಲ ನಿನ್ನದೆಯೆನ್ನ ಭಾವವುಳ್ಳ ಸಂಗಪ್ಪ ಬಿರಾದಾರ ಅವರು, ಗುರುವಿನ, ಭಗವಂತನ ನಿಸ್ವಾರ್ಥ ಕರ್ಮ ಸೇವೆ ಮಾಡಿರುವುದರಿಂದ ಅವರು ಕಣ್ಮರೆಯಾದರು ಅವರ ಹೆಸರು ಜನರ ಮನಸ್ಸಿನಲ್ಲಿ ಮಾಸದಂತೆ ಉಳಿದಿದೆ ಎಂದರು.

ಬೀದರ ಜಿಲ್ಲಾ ಕಸಾಪ ಮಾಜಿ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಮಾಸಿಮಾಡೆ ಮಾತನಾಡಿ, ವೀರಶೆಟ್ಟಿ ಬಾವುಗೆ ಅವರು ಸುಧೀರ್ಘ ಅವಧಿಗೆ ಈ ಗ್ರಾಮದಲ್ಲಿ ಸೇವೆ ಸಲ್ಲಿಸಿ, ಅರ್ಥಪೂರ್ಣ, ಪರಿಣಾಮಕಾರಿ ಗ್ರಂಥ ರಚನೆ ಮಾಡಿದ್ದು ಶ್ಲಾಘನೀಯ. ಅವರ ಗ್ರಂಥ ಓದುಗರ ಮೇಲೆ ಪರಿಣಾಮ ಬೀರುತ್ತದೆ ಎಂದರು.

ಬೀದರ ವಿಶ್ವವಿದ್ಯಾಲಯ ಪ್ರಾಧ್ಯಪಕ ರಾಮಚಂದ್ರ ಗಣಾಪೂರ ಗ್ರಂಥ ಕುರಿತು ಮಾತನಾಡಿದರು.

ಸನ್ಮಾನ:ಇದೇ ಸಂದರ್ಭದಲ್ಲಿ ದಿ.ಸಂಗಪ್ಪ ಬಿರಾದಾರ ಅವರ ಧರ್ಮಪತ್ನಿ ಕಮಲಾಬಾಯಿ ಮತ್ತು ವೀರಶೆಟ್ಟಿ ಬಾವುಗೆ ದಂಪತಿ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಮಹನೀಯರಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಸಾಹಿತಿ ವೀರಶೆಟ್ಟಿ ಬಾವುಗೆ ಪ್ರಾಸ್ತಾವಿಕ ಮಾತನಾಡಿದರು.

ಕಾರ್ಯಕ್ರಮದಲ್ಲಿ ಎಮ್.ಜಿ.ಎಸ್.ಎಸ್.ಕೆ.ಅಧ್ಯಕ್ಷ ವೈಜಿನಾಥ ಪಾಟೀಲ್ ಜ್ಯಾಂತಿ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ತಾಪಂ ಮಾಜಿ ಉಪಾಧ್ಯಕ್ಷ ಶಿವರಾಜ ಮಾಲಿಪಾಟೀಲ, ಪಿಕೆಪಿಎಸ್ ಅಧ್ಯಕ್ಷ ಶಾಂತವೀರ ಪಾಟೀಲ, ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ, ಪ್ರಮುಖರಾದ ಶ್ರೀಕಾಂತ ಬಿರಾದಾರ, ಮಂಜುನಾಥ ಬಿರಾದಾರ, ಚಂದ್ರಕಾಂತ ಕಟಾಳೆ, ಬಾಬುರಾವ ವೀರಶೆಟಿ, ಚಂದ್ರಶೇಖರ ಬಿರಾದಾರ, ನಾಗಪ್ಪ ಬಿರಾದಾರ, ಮನ್ಮಥಪ್ಪ ಬಂಬುಳಗೆ, ಧನರಾಜ ಖನ್ನಾಳೆ, ತಿಪ್ಪಯ್ಯ ಸ್ವಾಮಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಾಚೋಟೇಶ್ವರ ಪ್ರಾಥಮಿಕ ಶಾಲೆಯ ಶಿಕ್ಷಕಿಯರು ಪ್ರಾರ್ಥನೆ ಗೀತೆ ನುಡಿದರು. ಶಿವರಾಜ ಬಿರಾದಾರ ಸ್ವಾಗತಿಸಿದರು. ರಾಜಶೇಖರ ಚಿದ್ರೆ ನಿರೂಪಿಸಿದರು. ಬಸವರಾಜ ಬಿರಾದಾರ ವಂದಿಸಿದರು.


## ಮಹಿಳಾ ರೈತ ಉತ್ಪಾದಕರ ಕಂಪನಿ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 03 : ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದಲ್ಲಿ ನೂತನ ಜನಶ್ರೀ ಮಹಿಳಾ ರೈತ ಉತ್ಪಾದಕರ ಕಂಪನಿಯನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ ಮಂಗಳವಾರ ಉದ್ಘಾಟಿಸಿದರು. ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ಮಹಿಳಾ ಸ್ವಸಹಾಯ ಗುಂಪುಗಳ ಮೂಲಕ ಗ್ರಾಮೀಣ ಪ್ರದೇಶದ ಬಡತನ ನಿವಾರಣೆ ಯೋಜನೆಯಡಿ ಕಂಪನಿಗೆ ಚಾಲನೆ ನೀಡಲಾಗಿದೆ ಎಂದು ಅವರು ತಿಳಿಸಿದರು. ಕಂಪನಿ ಸದ್ಯ ಬೀಜ ಹಾಗೂ ರಸಗೊಬ್ಬರ ಪರವಾನಗಿ ಪಡೆದಿದೆ. ಮುಂದಿನ ದಿನಗಳಲ್ಲಿ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಸಹಕರಿಸಲಾಗುವುದು ಎಂದು ಹೇಳಿದರು. ಗ್ರಾಮದ ರಾಚೋಟೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ಮಾತನಾಡಿ, ಸ್ವಸಹಾಯ ಗುಂಪುಗಳ ಮಹಿಳೆಯರನ್ನು ಒಗ್ಗೂಡಿಸಿ ಕಂಪನಿ ಸ್ಥಾಪಿಸಲಾಗಿದೆ. ರೈತ ಮಹಿಳೆಯರು ಬೆಳೆದ ಬೆಳೆಗಳನ್ನು ಸಂಸ್ಕರಿಸಿ, ಮಾರಾಟ ಮಾಡಿ ಆರ್ಥಿಕವಾಗಿ ಸಬಲರಾಗಬೇಕು ಎಂದು ತಿಳಿಸಿದರು. ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕ ಜಗನ್ನಾಥಮೂರ್ತಿ ಅವರು, ಕಂಪನಿ ಧ್ಯೇಯೋದ್ದೇಶಗಳ ಕುರಿತು ಮಾಹಿತಿ ನೀಡಿದರು. ಕಂಪನಿ ಷೇರುದಾರರಿಗೆ ಬೀಜ ಹಾಗೂ ಗೊಬ್ಬರ ವಿತರಿಸಲಾಯಿತು. ಜಿಲ್ಲಾ ಪಂಚಾಯಿತಿ ಲೆಕ್ಕ ಸಹಾಯಕ ಪ್ರವೀಣ ಸ್ವಾಮಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪದ್ಮಿನಿಬಾಯಿ ಶಿವಪಾಲ್‌ಸಿಂಗ್ ಠಾಕೂರ್, ಪಿಡಿಒ ಚಂದ್ರಕಾಂತ ಫುಲೆ, ನ್ಯಾಯವಾದಿ ಮಲ್ಲಿಕಾರ್ಜುನ ಜಳಕೋಟೆ, ಎನ್‌ಆರ್‌ಎಲ್‌ಎಂ ಜಿಲ್ಲಾ, ತಾಲ್ಲೂಕು ಸಿಬ್ಬಂದಿ ಹಾಗೂ ಕಂಪನಿಯ ಷೇರುದಾರರು ಹಾಜರಿದ್ದರು.

## ಕೆಸಿಇಟಿಯಲ್ಲಿ ಸಾಧನೆ: ಪೂರ್ವಿ ರೆಡ್ಡಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 03 : ಪ್ರಸಕ್ತ ಸಾಲಿನ ಕೆಸಿಇಟಿಯ ಪಶು ವೈದ್ಯಕೀಯ ವಿಭಾಗದಲ್ಲಿ 25ನೇ ರ‍್ಯಾಂಕ್ ಗಳಿಸಿ ಸಾಧನೆಗೈದ ಭಾಲ್ಕಿ ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪದವಿಪೂರ್ವ ಕಾಲೇಜು ವಿದ್ಯಾರ್ಥಿನಿ ಪೂರ್ವಿ ಶಿವಶರಣ ರೆಡ್ಡಿ ಅವರನ್ನು ನಗರದ ಶ್ರೀಗುರು ಪಬ್ಲಿಕ್ ಶಾಲೆಯಲ್ಲಿ ಮಂಗಳವಾರ ಸನ್ಮಾನಿಸಲಾಯಿತು.

ಶಾಲೆ ಹಾಗೂ ಜಿಲ್ಲಾ ರೆಡ್ಡಿ ಸಮಾಜದ ವತಿಯಿಂದ ಶಾಲು ಹೊದಿಸಿ ಸತ್ಕರಿಸಿ, ಪ್ರೋತ್ಸಾಹಿಸಲಾಯಿತು.

ಶಾಲೆಯ ಅಧ್ಯಕ್ಷ ನರಸಾರೆಡ್ಡಿ, ಕಾರ್ಯದರ್ಶಿ ಬಸವರಾಜೇಶ್ವರಿ, ಖಾಸಗಿ ಶಾಲಾ ಸಂಘದ ರಾಜ್ಯ ಉಪಾಧ್ಯಕ್ಷ ಗುರುನಾಥ ರೆಡ್ಡಿ, ಜಿಲ್ಲಾ ರೆಡ್ಡಿ ಸಮಾಜದ ಮುಖಂಡರಾದ ಅಶೋಕ ರೆಡ್ಡಿ, ಚಾಮರೆಡ್ಡಿ, ವೀರು ದಿಗ್ವಾಲ್, ವಿಜಯ ರೆಡ್ಡಿ, ಸಂತೋಷಕುಮಾರ ಮಂಗಳೂರೆ ಮತ್ತಿತರರು ಇದ್ದರು.

## ವಿವಿಧ ವಸತಿ ಶಾಲೆಗಳಲ್ಲಿ ಆರನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲು ಸಮಿತಿ ರಚನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಜೂನ್.3:ಕರ್ನಾಟಕ ಸರ್ಕಾರದ ಆದೇಶದನ್ವಯ ಕ್ರೈಸ್ ಅಡಿಯಲ್ಲಿ ಬೀದರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ/ ಅಟಲ್ ಬಿಹಾರಿ ವಾಜಪೇಯಿ /ಡಾ.ಬಿ.ಆರ್. ಅಂಬೇಡ್ಕರ್/ ಕಿತ್ತೂರು ರಾಣಿ ಚೆನ್ನಮ್ಮ / ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ 2025–26 ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳುವುದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಪರೀಕ್ಷೆ ನಡೆಸಿ ಅಂಕಗಳ (ಮೆರಿಟ್) ಆಧಾರದ ಮೇಲೆ ಸರ್ಕಾರದ ನಿಗದಿಪಡಿಸಿದ ಮೀಸಲಾತಿಯನ್ವಯ ಪ್ರವೇಶ ನೀಡಲಾಗುತ್ತಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೀಟು ಹಂಚಿಕೆ ಮಾಡಿದ ಮೇಲೆ ಉಳಿದ ಖಾಲಿಯಿರುವ ಸ್ಥಾನಗಳ ತುಂಬುವಲ್ಲಿ ಬಹಳಷ್ಟು ದೂರುಗಳು, ಆಕ್ಷೇಪಣೆಗಳು ಬರುತ್ತಿವೆ. ಹೀಗಾಗಿ 6ನೇ ತರಗತಿ ಮತ್ತು ಇತರ ತರಗತಿಗಳಲ್ಲಿ ಖಾಲಿಯಿರುವ ಸೀಟುಗಳನ್ನು ಮೀಸಲಾತಿ ಮತ್ತು ಮೇರಿಟ್ ಅನ್ವಯ ಆಯ್ಕೆ ಮಾಡಲು ಸರ್ಕಾರ ಆಯಾ ಜಿಲ್ಲೆಗಳ ಕಂದಾಯ ಉಪ ವಿಭಾಗಗಳ ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮೀತಿಯನ್ನು ರಚನೆ ಮಾಡಿದೆ. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಪ್ರಾಂಶುಪಾಲರು, ಹಿರಿಯ ಶಿಕ್ಷಕರು ಸಮಿತಿ ಸದಸ್ಯರಾಗಿದ್ದು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಾಖಲಾತಿಗಾಗಿ ಮಕ್ಕಳನ್ನು ಆಯ್ಕೆ ಮಾಡುವಾಗ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಅಂಕಗಳು (ಮೆರಿಟ್) ಆಧಾರದ ಮೇಲೆ ಮೀಸಲಾತಿ ನಿಯಮಗಳಿಗೆ ಅನುಗುಣವಾಗಿ ಯಾವುದೇ ಶಿಫಾರಸ್ಸುಗಳನ್ನು ಪರಿಗಣಿಸದೇ ಆಯ್ಕೆ ಮಾಡಲಾಗುತ್ತದೆ.

ಜೊತೆಗೆ ವಿಶೇಷ ವರ್ಗಗಳ ವಿದ್ಯಾರ್ಥಿಗಳಿಗೆ 6ನೇ ತರಗತಿಗೆ ಪರೀಕ್ಷೆ ಇಲ್ಲದೆ ನೇರ ದಾಖಲಾತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಈ ಬಗ್ಗೆ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸಿ ಸೌಕರ್ಯ ವಂಚಿತ ಮಕ್ಕಳಿಗೆ ಉಚಿತ ಶಿಕ್ಷಣ ನೀಡುವ ಸರ್ಕಾರದ ಘನ ಉದ್ದೇಶ ಈಡೇರಿಸುವ ನಿಟ್ಟಿನಲ್ಲಿ ಅವಶ್ಯಕತೆಯಿರುವ ಪ್ರತಿಯೊಬ್ಬ ಮಗು ಈ ಸೌಲಭ್ಯ ಪಡೆಯಲು ಕ್ರಮ ವಹಿಸಲಾಗಿದೆ. ಸರ್ಕಾರದ ಈ ಸೌಲಭ್ಯವನ್ನು ಕೆಲವು ಜನ ದುರುಪಯೋಗಪಡಿಸಿಕೊಂಡು ನಕಲು ಮತ್ತು ನೈಜತೆಯಿಲ್ಲದ ಪ್ರಮಾಣ ಪತ್ರಗಳನ್ನು ಪಡೆದು–ಕೊಂಡು ಪ್ರವೇಶ ಕೋರಿ ಶಾಲೆಗೆ ಬರುತ್ತಿರುವ ಬಗ್ಗೆ ದೂರುಗಳು ಸ್ವೀಕೃತವಾಗಿವೆ. ಇದರಿಂದ ಘನ ಸರ್ಕಾರದ ನೈಜ ಉದ್ದೇಶಕ್ಕೆ ಧಕ್ಕೆ ಬರುವುದಲ್ಲದೆ ನಿಜವಾದ ಅವಶ್ಯಕತೆ ಇರುವ ಮಕ್ಕಳಿಗೆ ಅವರ ಅವಕಾಶದಿಂದ ವಂಚಿಸಿದಂತಾಗುತ್ತದೆ. ಇದನ್ನು ಗಂಭೀರವಾಗಿ ಪರಗಣಿಸಿ ಸಂಬಂಧಿಸಿದ ಪ್ರಾಧೀಕಾರದಿಂದ ನೀಡಲಾದ ನೈಜ ಪ್ರಮಾಣ ಪತ್ರದ ದೃಢಪಡಿಸಿಕೊಂಡು ಪ್ರವೇಶ ನೀಡಲಾಗುವುದು. ಪರಿಶೀಲನೆ

ಮಾಡುವ ಸಂದರ್ಭದಲ್ಲಿ ಪ್ರಮಾಣ ಪತ್ರ ಸುಳ್ಳೆಂದು ಸಾಬೀತಾದಲ್ಲಿ ಪ್ರವೇಶ ರದ್ದು ಪಡಿಸಿ ಪ್ರಮಾಣ ಪತ್ರ ಸಲ್ಲಿಸಿದವರ ಮತ್ತು ನೀಡಿದವರ ಮೇಲೆ ಕಾನೂನು ರಿತ್ಯ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕಾರಣ ಸಾರ್ವಜನಿಕರು ಮಧ್ಯವರ್ತಿಗಳಿಂದ ಯಾವುದೇ ರೀತಿ ವಂಚನೆಗೊಳಗಾಗಬಾರದೆಂದು ಅವರು ತಿಳಿಸಿದ್ದಾರೆ.

# ನಾಡು ಬೆಳಗಿಸಿದ ಸುವರ್ಣ ಯುಗದ ಹರಿಕಾರ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ

ಬಾಗಲಕೋಟೆ,ಜೂ.3– ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ಸಂಸ್ಥಾನದ ಒಡೆ–ಯರ ರಾಜಸಂತತಿಯ 24ನೇ ರಾಜರು. ಇವರ ಆಳ್ವಿಕೆ 1902 ರಿಂದ 1940 ರವರೆಗೆ ನಡೆಯಿತು. ನಾಲ್ವಡಿ ಕೃಷ್ಣರಾಜ ಒಡೆಯರು 1895ರಲ್ಲಿ ಪಟ್ಟಾಭಿಷಿಕ್ತರಾದರೂ ಸಹ ಕೇವಲ 10 ವರ್ಷದ ಬಾಲಕರಾಗಿದ್ದುದರಿಂದ ಅವರ ತಾಯಿ ಮಹಾರಾಣಿ ವಾಣಿವಿಲಾಸ ಸನ್ನಿಧಾನದವರು ಆಡಳಿತ ನಿರ್ವಹಣೆ ಮಾಡಿದರು.

ರಾಜಕುಮಾರನಿಗೆ ಸೂಕ್ತ ವಿದ್ಯಾಭ್ಯಾಸ, ಆಡಳಿತ ತರಬೇತಿ ಇವುಗಳನ್ನು ಮಹಾರಾಣಿಯವರು ತೀವ್ರ ನಿಗಾ ವಹಿಸಿ ನಡೆಸಿದ ಪರಿಣಾಮವಾಗಿ ಮೈಸೂರು ರಾಜ್ಯಕ್ಕೆ ಒಬ್ಬ ಸಮರ್ಥ, ಸಶಕ್ತ, ದಕ್ಷ ಆಡಳಿತಗಾರರಾಗಿ ನಾಲ್ವಡಿ ಕೃಷ್ಣರಾಜ ಒಡೆಯರು ದೊರಕಿದರು.

ಮಹಾರಾಜ ಹತ್ತನೇ ಚಾಮರಾಜೇಂದ್ರ ಒಡೆಯರ್ ಮತ್ತು ಮಹಾರಾಣಿ ಕೆಂಪನಂಜಮ್ಮಣ್ಣಿ ವಾಣಿವಿಲಾಸ್ ಸನ್ನಿಧಾನ ಅವರ ಮೊದಲ ಮಗನಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್ 1884 ಜೂನ್ 4ರಂದು ಮೈಸೂರು ಅರಮನೆಯಲ್ಲಿ ಜನಿಸಿದರು. 1894ರಲ್ಲಿ ಕಲ್ಕತ್ತ ಪ್ರವಾಸದಲ್ಲಿರುವ ಸಂದರ್ಭದಲ್ಲಿ ಹತ್ತನೇ ಚಾಮರಾಜೇಂದ್ರ ಒಡೆ–ಯರ್ ಗಂಟಲು ನೋವಿನಿಂದಾಗಿ ಆಕಸ್ಮಿಕವಾಗಿ ಮರಣ ಹೊಂದಿದರು, ಇನ್ನೂ ಹತ್ತು ವರ್ಷ ವಯಸ್ಸಿನವರಾಗಿದ್ದ ಕೃಷ್ಣರಾಜ ಒಡೆಯರ್ ಅವರು ರಾಜ್ಯಭಾರವನ್ನು ವಹಿಸಿಕೊಳ್ಳಬೇಕಾಯಿತು. 1902 ಫೆಬ್ರವರಿ 2ರಂದು ಕೃಷ್ಣರಾಜ ಒಡೆಯರ್ ಅವರು ತಾಯಿಯಿಂದ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು. ಅದೇ ವರ್ಷ ಆಗಸ್ಟ್ ಎಂಟರಂದು ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ನಡೆದ ಸಮಾರಂಭದಲ್ಲಿ ಆಗಿನ ಬ್ರಿಟಿಷ್ ಭಾರತದ ವೈಸ್‌ರಾಯ್ ಲಾರ್ಡ್ ಕರ್ಜನ್ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ವಿಧ್ಯುಕ್ತವಾಗಿ ಮೈಸೂರಿನ ಮಹಾರಾಜರೆಂದು ಘೋಷಿಸಿದರು.

ಮಹಾರಾಜರು ಪಿ.ರಾಘವೇಂದ್ರರಾವ್ ಅವರ ನಿರ್ದೇಶನದಡಿಯಲ್ಲಿ ಲೋಕರಾಜನ್ ಅರಮನೆಯಲ್ಲಿ ತನ್ನ ಆರಂಭಿಕ ಶಿಕ್ಷಣ ಮತ್ತು ತರಬೇತಿಯನ್ನು ಹೊಂದಿದರು. ಪಾಶ್ಚಿಮಾತ್ಯ ಅಧ್ಯಯನಗಳು ಜೊತೆಗೆ ಕನ್ನಡ ಮತ್ತು ಸಂಸ್ಕೃತ ಭಾಷೆಗಳಲ್ಲಿ ಶಿಕ್ಷಣ ಪಡೆದರು. ಕುದುರೆ ಸವಾರಿ ಮತ್ತು ಭಾರತೀಯ ಮತ್ತು ಶಾಸ್ತ್ರೀಯ ಸಂಗೀತವನ್ನು ಕೂಡ ಕಲಿತರು. ಮುಂದೆ ಅಜ್ಮೀರ್‌ನ ಮೇಯೊ ಕಾಲೇಜಿನಲ್ಲಿ ಶಿಕ್ಷಣ ಮುಂದುವರೆಸಿದರು. ಆದ–ರೆ ಅನಾರೋಗ್ಯದ ಕಾರಣ ಮೈಸೂರಿಗೆ ಮರಳಬೇಕಾಯ್ತು. ಬಾಂಬೆ ಸಿವಿಲ್ ಸರ್ವೀಸ್‌ನ ಸರ್ ಸ್ಟುವರ್ಟ್ ಫ್ರೇಸರ್ ಅವರು ಆಡಳಿತ ನಿರ್ವಹಣೆ, ನ್ಯಾಯಶಾಸ್ತ್ರ, ತತ್ವಶಾಸ್ತ್ರ ಬಗ್ಗೆ ಶಿಕ್ಷಣವನ್ನು ನೀಡಿದರು. ಬಳಿಕ ರಾಜ್ಯದಲ್ಲಿ ಪ್ರವಾಸ ಮಾಡುವ ಮೂಲಕ ಜನರ ಅವಶ್ಯಕತೆ ಹಾಗೂ ಆಡಳಿತದ ಬಗ್ಗೆ ವ್ಯಾಪಕವಾದ ಅಪಾರ ಜ್ಞಾನವನ್ನು ಪಡೆದರು.

ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು ರಾಜ್ಯದಲ್ಲಿ ಹೆಸರಿಗೆ ಮಾತ್ರ ಇದ್ದ 'ಪ್ರಜಾ ಪ್ರತಿನಿಧಿ ಸಭೆ'ಯು ನೂತನ ರೂಪವನ್ನು ಪಡೆದು, ನಿಜವಾದ ಜನಪ್ರತಿನಿಧಿ ಸಭೆಯಾಗಿ ಪರಿವರ್ತನೆಯಾಯಿತು. ಮೊದಲ ಸಭೆಯಲ್ಲಿ ಅವರು ಮಾತನಾಡುತ್ತಾ, ಮೈಸೂರು ರಾಜ್ಯದ ಆಡಳಿತದಲ್ಲಿ ನಾವು ಒಂದು ಹೊಸ ಪ್ರಯೋಗವನ್ನು ಆರಂಭಿಸಿದ್ದೇವೆ. ನಮ್ಮ ಪ್ರಜೆಗಳಿಗೆ ಅಖಂಡ ಸುಖ ಸಂಪತ್ತನ್ನು ಒದಗಿಸಿಕೊಡಬೇಕೆಂಬುದು ನನ್ನ ಜೀವನದ ಪರಮೋದ್ದೇಶ ಎಂದರು. ಅದಕ್ಕಾಗಿ 1923ರಲ್ಲಿ ಹೊಸ, ಪ್ರಜಾ ಪ್ರತಿನಿಧಿ ಸಭೆಯನ್ನು ಶಾಸನಬದ್ದ ಸಂಸ್ಥೆಯನ್ನಾಗಿ ಮಾರ್ಪಡಿಸಿದರು.

ಇದು ಪ್ರಜಾತಂತ್ರದ ದೃಷ್ಟಿಯಿಂದ ಭಾರತದಲ್ಲಿಯೇ ಮಾದರಿಯಾದ ಸಂಸ್ಥೆಯಾಗಿ ಕಾರ್ಯನಿರ್ವಹಿಸಲು ಆರಂಭಿಸಿತು. ಪ್ರಜಾ ಪ್ರತಿನಿಧಿ ಸಭೆಯು ವರ್ಷಕ್ಕೆ ಎರಡು ಬಾರಿ ಸಮಾವೇಶಗೊಂಡು ಕಲಾಪಗಳನ್ನು ನಡೆಸುತ್ತಿತ್ತು. ಅಲ್ಲಿ ವಾರ್ಷಿಕ ಆಯ–ವ್ಯಯ ಪರಿಶೀಲನೆ, ಪ್ರಶ್ನೋತ್ತರಗಳು, ಠರಾವುಗಳನ್ನು ಮಂಡಿಸುವುದು ಮುಂತಾದ ಸಂಸದೀಯ ಮಾದರಿಯ ನಡವಳಿಕೆಗಳು ನಡೆಯುತ್ತಿದ್ದವು. ಪ್ರತಿನಿಧಿ ಸಭೆಯಲ್ಲಿದ್ದ 275 ಸದಸ್ಯರಲ್ಲಿ ಹೆಚ್ಚು ಪ್ರತಿನಿಧಿಗಳು ಜನರಿಂದ ಆಯ್ಕೆಯಾದವರಾಗಿದ್ದರು. ಕಾಲಕ್ಕೆ ತಕ್ಕ ಹಾಗೇ ಚುನಾವಣೆ ಕ್ಷೇತ್ರಗಳನ್ನು ಮರುವಿಂಗಡಣೆ ಮಾಡಿದರು.

ಪ್ರಜಾ ಪ್ರತಿನಿಧಿ ಸಭೆ ಜೊತೆಗೆ 1907 ರಲ್ಲಿ ನ್ಯಾಯ ವಿಧೇಯಕ ಸಭೆಯನ್ನೂ ಸಹ ಸ್ಥಾಪಿಸಲಾಯಿತು. ಇದರ ಸದಸ್ಯರ ಸಂಖ್ಯೆ 50. ಇದರಲ್ಲಿ ಜನರಿಂದ ಆಯ್ಕೆಯಾದವರು 22 ಸದಸ್ಯರು. ಮೇಲ್ಮನೆಯ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಈ ಸಂಸ್ಥೆ, ಜೂನ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ ಬೆಂಗಳೂರಿನಲ್ಲಿ ಸಮಾವೇಶಗೊಳ್ಳುತ್ತಿತ್ತು. ಪ್ರಜಾ ಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲ ವಿಷಯಗಳನ್ನೂ ಸಹ ವಿಮರ್ಶಿಸುವ ಅಧಿಕಾರ ಆ ಸಭೆಗೆ ಇತ್ತು. ಮುಖ್ಯವಾಗಿ ಯಾವುದೇ ಕಾನೂನನ್ನು ಜಾರಿಗೊಳಿಸಲು ಆ ಸಭೆಯ ಅನುಮತಿ ಅಗತ್ಯವಾಗಿತ್ತು. ಆ ಸಭೆಗೆ ಸರ್ಕಾರದ ಖರ್ಚುಗಳನ್ನು ಕಡಿಮೆ ಮಾಡುವ ಅಧಿಕಾರ ಸಹ ಇತ್ತು.

1918ರಲ್ಲಿ ಸರ್ಕಾರದ ಮುಖ್ಯ ನ್ಯಾಯಾಧೀಶರಾಗಿದ್ದ ಸರ್ ಲೆಸ್ಲಿ ಮಿಲ್ಲರ್ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ರಚಿಸಿ, ಎಲ್ಲಾ ಸಮುದಾಯದ ಜನರಿಗೆ ಸರ್ಕಾರಿ ಉದ್ಯೋಗದಲ್ಲಿ ಪ್ರಾತಿನಿಧ್ಯ ದೊರಕುವಂತೆ ಅಧ್ಯಯನ ಮಾಡಿ, ವರದಿ ನೀಡಲು ಆದೇಶ ಮಾಡಿದರು. ಎಲ್ಲಾ ಹಿಂದುಳಿದ ಸಮುದಾಯಗಳಿಗೆ ಶೇ.75 ರಷ್ಟು ಮೀಸಲಾತಿ ನೀಡಲು ಆದೇಶ ಹೊರಡಿಸಿದರು. ಹಾಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ಮೀಸಲಾತಿಯ ಜನಕ ಎನ್ನುತ್ತಾರೆ.

ಮಿಲ್ಲರ್ ಆಯೋಗ ರಚನೆ ಸಾಮಾಜಿಕ ಇತಿಹಾಸದಲ್ಲೇ ಒಂದು ಮೈಲಿಗಲ್ಲಾಯಿತು.



ಮಿಲ್ಲರ್ ಆಯೋಗ ಜಾರಿಗೆ ಬರಲಾಗಿ ಮೊಟ್ಟಮೊದಲ ಬಾರಿಗೆ ಮೈಸೂರು ಸಂಸ್ಥಾನಕ್ಕೆ ಕಾಂತರಾಜೇ ಅರಸ್ ದಿವಾನರಾದರು. ಈ ಕಾಲದಲ್ಲೇ ಒಕ್ಕಲಿಗರ ಸಂಘ, ರೆಡ್ಡಿ ಜನಸಂಘ, ವೀರಶೈವರ ಜಾತಿ ಆಧಾರಿತ ಶಾಲಾ–ಕಾಲೇಜುಗಳು ಆರಂಭವಾದುವು. ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯಕ್ಕೆ ನೀಡಿದ ಅಮೂಲ್ಯ ಕೊಡುಗೆ ಎಂದರೆ ಸ್ಥಳೀಯ ಸಂಸ್ಥೆಗಳನ್ನು ರಚಿಸಿ, ಆಡಳಿತ ವಿಕೇಂದ್ರೀಕರಣಕ್ಕೆ ಅನುವು ಮಾಡಿ ಕೊಟ್ಟುದು. ರಾಜ್ಯದ ಸಣ್ಣ ಸಣ್ಣ ಪಟ್ಟಣಗಳಲ್ಲಿಯೂ ಸಹ ಮುನಿಸಿಪಾಲಿಟಿಗಳು ರಚನೆಯಾದವು. ಹಳ್ಳಿಗಳಲ್ಲಿ ಪ್ರಥಮ ಬಾರಿಗೆ ಮಂಡಲ ಪಂಚಾಯಿತಿಗಳು ಕಾರ್ಯನಿರ್ವಹಿಸಲು ಆರಂಭ ಮಾಡಿದುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಆಡಳಿತದಲ್ಲಿ ಜನರ ಭಾಗವಹಿಸುವಿಕೆಗೆ ಅಪಾರ ಉತ್ತೇಜನ ನೀಡಲಾಯಿತು.

ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವಾಗಿ ರೂಪಿಸಿದ ನಾಲ್ವಡಿ ಕೃಷ್ಣರಾಜ ಒಡೆಯರನ್ನು ವಿದ್ವಾಂಸರು, ಶಿಕ್ಷಣ ತಜ್ಞರು, ಇತಿಹಾಸಕಾರರು ಸಾಮಾಜಿಕ ಕಾನೂನುಗಳ ಹರಿಕಾರ ಎಂದು ಕರೆದಿದ್ದಾರೆ. ಸಾಹಿತ್ಯ, ಸಂಗೀತ, ವಾಸ್ತು ಶಿಲ್ಪಗಳ ಅಭಿವೃದ್ಧಿಗೆ ಪ್ರಾಮುಖ್ಯತೆಯನ್ನು ಕೊಟ್ಟು 1915 ರಲ್ಲಿ ಬೆಂಗಳೂರಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಪ್ರಾರಂಭಿಸಿದರು.

ಗ್ರಾಮ ನೈರ್ಮಲೀಕರಣ, ವೈದ್ಯ ಸಹಾಯ, ವಿದ್ಯಾ ಪ್ರಚಾರ, ನೀರಿನ ಸೌಕರ್ಯ, ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಸಂಸ್ಥೆಗಳಾದವು. ಹೊಸ ರೈಲು ದಾರಿಗಳ ನಿರ್ಮಾಣಗೊಂಡವು ಮೈಸೂರು–ಅರಸೀಕೆರೆ, ಬೆಂಗಳೂರು–ಚಿಕ್ಕಬಳ್ಳಾಪುರ, ಚಿಕ್ಕಜಾಜೂರು–ಚಿತ್ರದುರ್ಗ, ನಂಜನಗೂಡು–ಚಾಮರಾಜನಗರ, ತರೀಕೆರೆ–ನರಸಿಂಹರಾಜಪುರ, ಶಿವಮೊಗ್ಗ ಆನಂದಪುರ ಈ ಎಲ್ಲ ರೈಲು ಮಾರ್ಗಗಳನ್ನು 1931 ರ ವೇಳೆಗೆ ಪೂರೈಸಲಾಯಿತು. ನೀರಾವರಿ 1907ರಲ್ಲಿ 'ವಾಣಿವಿಲಾಸ ಸಾಗರ ಕಟ್ಟಲ್ಪಟ್ಟಿತು. 1911 ರಲ್ಲಿ ಆರಂಭವಾದ 'ಕೃಷ್ಣರಾಜ ಸಾಗರ' ಭಾರತದ ಮೊಟ್ಟಮೊದಲ ಬೃಹತ್ ಜಲಾಶಯ. 1900ರಲ್ಲಿಯೇ ಶಿವನ ಸಮುದ್ರದ ಬಳಿ ಕಾವೇರಿ ನದಿಯಿಂದ ಜಲ ವಿದ್ಯುತ್ ಕೇಂದ್ರ ಆರಂಭವಾಯಿತು. ಇದು ಭಾರತದ ಮೊದಲ ಜಲ ವಿದ್ಯುತ್ ಕೇಂದ್ರ. ಏಷ್ಯಾ ಖಂಡದಲ್ಲೇ ಮೊದಲ ಜಲ ವಿದ್ಯುತ್ ಯೋಜನೆಯನ್ನು ಪ್ರಾರಂಭಿಸಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರದ್ದಾಗಿದೆ. ಇದರ ಫಲಿತಾಂಶವಾಗಿ 1905 ಆಗಸ್ಟ್ 3 ರಂದು ಪ್ರಥಮವಾಗಿ ಬೆಂಗಳೂರಿನಲ್ಲಿ ದೀಪಗಳು ಬೆಳಗಿದವು.

ಪ್ರಾಥಮಿಕ ಮತ್ತು ಮಾಧ್ಯಮಿಕ ವಿದ್ಯಾಭ್ಯಾಸವನ್ನು ಉಚಿತವಾಗಿ ಮತ್ತು ಕಡ್ಡಾಯವಾಗಿ ಆರಂಭಿಸಲಾಯಿತು. ನಾಲ್ವಡಿ ಕೃಷ್ಣರಾಜರ ಮಹತ್ತರ ಸಾಧನೆ ಮೈಸೂರು ವಿಶ್ವವಿದ್ಯಾನಿಲಯ ಸ್ಥಾಪನೆ. ದೇಶದಲ್ಲೇ ಮೊಟ್ಟಮೊದಲ ವಿಶ್ವವಿದ್ಯಾನಿಲಯವನ್ನು ಮೈಸೂರಿನಲ್ಲಿ ತೆರೆದು ದಾಖಲೆ ನಿರ್ಮಿಸಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರಿಗೆ ಸಲ್ಲುತ್ತದೆ. ಅವರ ಕಾಲದಲ್ಲಿ ರಾಜ್ಯದ ನಾನಾ ಭಾಗಗಳಲ್ಲಿ 270 ಉಚಿತ ಆಸ್ಪತ್ರೆಗಳು ಕಾರ್ಯಾರಂಭ ಮಾಡಿದವು.

ಬೆಂಗಳೂರಿನ ಮಿಂ–ಟೊ ಕಣ್ಣಾಸ್ಪತ್ರೆ ಜಾಗತಿಕ ಮಟ್ಟದಲ್ಲಿ ಹೆಸರು ಮಾಡಿತ್ತು. ಮೈಸೂರಿನ ಕ್ಷಯರೋಗ ಆಸ್ಪತ್ರೆ ಉತ್ತಮಗೊಂಡಿತು. ವಾಣಿಜ್ಯ ಕ್ಷೇತ್ರದಲ್ಲಿ ಮೈಸೂರು ಬ್ಯಾಂಕ್ ಖಾಸಗೀ ಸಹಭಾಗಿತ್ವದೊಡನೆ ಕಾರ್ಯಾರಂಭ ಮಾಡಿತು. 1906 ರಲ್ಲಿಯೇ ಸಹಕಾರ ಸಂಘಗಳನ್ನು ಸ್ಥಾಪಿಸಲಾಯಿತು. ರೈತರಿಗಾಗಿ ಜಮೀನು ಅಡಮಾನ ಬ್ಯಾಂಕುಗಳು ಆರಂಭವಾದವು. ಬುಡಕಟ್ಟು, ಗಿರಿಜನ, ಅರಣ್ಯವಾಸಿಗಳಿಗೆ ಮೊಟ್ಟಮೊದಲು ಶಾಲೆಗಳನ್ನು ತೆರೆಯಲಾಯಿತು. ಅಸ್ಪೃಶ್ಯರಿಗಾಗಿಯೇ ಟಿ.ನರಸೀಪುರದಲ್ಲಿ ಶಾಲೆಗಳನ್ನು ಪ್ರಾರಂಭಿಸಲಾಯಿತು. ನಂತರ ಇವರ ಆಡಳಿತಾವಧಿಯಲ್ಲಿ ಸುಮಾರು 800 ಶಾಲೆಗಳನ್ನು ತೆರೆಯಲಾಯಿತು. ಮೊಟ್ಟ ಮೊದಲ ಬಾರಿಗೆ ಸ್ತ್ರೀ ಶಿಕ್ಷಣವನ್ನು ಕಡ್ಡಾಯ ಮಾಡಲಾಯಿತು. 1902–ಬೆಂಗಳೂರಿನ ಪ್ರಥಮ ವಾಣಿಜ್ಯಶಾಲೆ ಪ್ರಾರಂಭಿಸಲಾಯಿತು. 1903–ಮೈಸೂರಿನಲ್ಲಿ ತಾಂತ್ರಿಕಶಾಲಾ ಸ್ಥಾಪನೆ. 1906–ಕುರುಡ ಹಾಗೂ ಮೂಕ ಮಕ್ಕಳಿಗೆ ಶಾಲೆಗಳನ್ನು ಪ್ರಾರಂಭಿಸಿದರು. 1911–ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಆರಂಭಿಸಲಾಯಿತು.

1912–ಮೊದಲ ಬಾರಿಗೆ ವಯಸ್ಕರ ಶಿಕ್ಷಣ ಆಂದೋಲನ ಪ್ರಾರಂಭಿಸಿ, 7000 ಸಾಕ್ಷರತಾ ಕೇಂದ್ರಗಳನ್ನು ತೆರೆದಿದ್ದರು. 1918–ಶಾಲಾಪ್ರವೇಶಕ್ಕೆ ಜಾತಿ ಪದ್ದತಿಯನ್ನು ನಿರ್ಮೂಲನೆ ಮಾಡಲಾಯಿತು. 1919–ಮಾಧ್ಯಮಿಕ ಶಾಲಾ ಮಟ್ಟದಲ್ಲಿ ಶಿಕ್ಷಣ ಶುಲ್ಕವನ್ನು ರದ್ದು ಮಾಡಿದರು. ಮೈಸೂರು ಒಡೆಯರ ಕಾಲದಲ್ಲಿ ದಿವಾನರಾಗಿದ್ದ ಸರ್.ಎಂ.ವಿಶ್ವೇಶ್ವರಯ್ಯನವರು, ಸರ್.ಮಿರ್ಜಾ ಇಸ್ಮಾಯಿಲ್, ಶೇಷಾದ್ರಿ ಅಯ್ಯರ್ ಅಂತಹ ಸಮರ್ಥ ಆಡಳಿತಗಾರರ ಪರಿಶ್ರಮದಿಂದ ನಾಲ್ವಡಿ ಕೃಷ್ಣರಾಜೇಂದ್ರ ಒಡೆ–ಯರ್ ಕನ್ನಡ ನಾಡಿಗಾಗಿ ಹತ್ತು ಹಲವಾರು ಕೊಡುಗೆ ನೀಡಿದ್ದಾರೆ.

ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರು ವಿಶ್ವವಿದ್ಯಾನಿಲಯದ ಮೊಟ್ಟ ಮೊದಲ ಘಟಿಕೋತ್ಸವದಲ್ಲಿ ಶಿಕ್ಷಣವು ಕೆಲವೇ ಅದೃಷ್ಟಶಾಲಿಗಳಿಗೆ ಮಾತ್ರವಲ್ಲ. ಎಲ್ಲರಿಗೂ ಉನ್ನತ ಶಿಕ್ಷಣ ದೊರೆಯಲಿ ಎಂಬ ಕಾರಣಕ್ಕಾಗಿಯೇ ಮೈಸೂರು ವಿಶ್ವ ವಿದ್ಯಾನಿಲಯವನ್ನು ಸ್ಥಾಪಿಸಲಾಗಿದೆ. ಇದು ದೇಶದ ಅಸ್ಪೃಶ್ಯ, ಹಿಂದುಳಿದ, ಅಲ್ಪಸಂಖ್ಯಾತರುಗಳಿಗೆ ಅಂದರೆ ಶೇ.85 ರಷ್ಟಿರುವ ಹಿಂದುಳಿದ ಎಲ್ಲಾ ಸಮುದಾಯದವರಿಗೆ ಇದೆ. ಇಲ್ಲಿನ ಬೋಧಕರು ಅವರ ತಿಳುವಳಿಕೆಯ ಮಟ್ಟಕ್ಕೆ ಇಳಿದು ತಮ್ಮ ಜ್ಞಾನವನ್ನು ಅವರೊಂದಿಗೆ ಹಂಚಿಕೊಳ್ಳಬೇಕು ಎಂದಿದ್ದರು.

1909 ರಲ್ಲಿ ದೇವದಾಸಿ ಪದ್ಧತಿ ನಿಷೇಧ, 1910 ರಲ್ಲಿ ಬಸವಿ ಪದ್ಧತಿ ರದ್ಧತಿ, 1910 ರಲ್ಲಿ ಗೆಜ್ಜೆಪೂಜೆ ಪದ್ಧತಿ ಸಂಪೂರ್ಣ ನಿರ್ಮೂಲನೆ, 1936 ಜುಲೈ 14 ರಂದು ವೇಶ್ಯಾವೃತ್ತಿ ತಡೆಗಟ್ಟುವ ಕಾಯ್ದೆ ಜಾರಿ, 1936 ಜುಲೈ 7 ರಂದು ವಿಧವೆಯರಿಗೆ ಮರು ವಿವಾಹ ಮಾಡಿಕೊಳ್ಳುವ ಕಾಯ್ದೆಯ ಜಾರಿ, 1936 ಜುಲೈ 7 ರಂದು ಸ್ತ್ರೀಯರಿಗೆ ಕಡ್ಡಾಯ ಶಿಕ್ಷಣ ಜಾರಿ, 1914 ರಲ್ಲಿ ಶಾಲಾ ಪ್ರವೇಶಕ್ಕೆ ಜಾತಿ ಪರಿಗಣನೆಯ ನಿಷೇಧ, 1919 ರಲ್ಲಿ ಮಾಧ್ಯಮಿಕ ಶಾಲಾ ಮಟ್ಟದಲ್ಲಿ ಶಿಕ್ಷಣ ಶುಲ್ಕ ರದ್ಧತಿ, 1927 ರಲ್ಲಿ ಸ್ತ್ರೀಯರಿಗೆ ಮತದಾನದ ಹಕ್ಕನ್ನು ಮೊಟ್ಟಮೊದಲ ಬಾರಿಗೆ ಕಲ್ಪಿಸಿಕೊಟ್ಟರು, 1905 ರಲ್ಲಿ ಸಹಕಾರಿ ಕಾರ್ಮಿಕ ಪರಿಹಾರ ಕಾಯ್ದೆಯನ್ನು ಜಾರಿಗೆ ತಂದರು, 1913 ರಲ್ಲಿ ಮೈಸೂರು ಗ್ರಾಮ ನ್ಯಾಯಾಲಯ ಕಾಯ್ದೆಯನ್ನು ಜಾರಿ ಮಾಡಿದರು, 1918 ರಲ್ಲಿ ಗ್ರಾಮ ಪಂಚಾಯ್ತಿಗಳ ಕಾಯ್ದೆಯನ್ನು ಜಾರಿಗೆ ತಂದರು.

ಭಾರತದ ಆರ್ಥಿಕತೆಯ ಬೆನ್ನೆಲುಬು ಕೃಷಿ ಎಂದು ಅರಿತಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ರೈತರಿಗೆ ಸುಲಭವಾಗಿ ಸಾಲ ದೊರೆಯುವಂತೆ ಅನುಕೂಲವಾಗಲು 1905ರಲ್ಲಿ ಸಹಕಾರಿ ಸೊಸೈಟಿಗಳನ್ನು ಜಾರಿಗೆ ತಂದರು. ಆ ಮೂಲಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕು ಮತ್ತು ಭೂ ಅಭಿವೃದ್ಧಿ ಬ್ಯಾಂಕ್‌ಗಳು ಪ್ರಾರಂಭಗೊಂಡವು. ಮಂಡ್ಯ ಮತ್ತು ಮೈಸೂರು ಪ್ರಾಂತ್ಯದ ರೈತರ ಒಣಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ನಾಲ್ವಡಿ ಕೃಷ್ಣರಾಜ ಒಡೆಯರ್ ಕಾವೇರಿ ನದಿಗೆ ಅಡ್ಡಲಾಗಿ ಕೃಷ್ಣರಾಜ ಸಾಗರ ಅಣೆಕಟ್ಟನ್ನು ಕಟ್ಟಿಸಿ 1,20,000 ಎಕರೆ ಜಮೀನಿಗೆ ನೀರಾವರಿ ಕಲ್ಪಿಸಿದರು.

ಗ್ರಾಮೀಣ ಜನರಿಗೆ ಶೀಘ್ರ ನ್ಯಾಯ ಒದಗಿಸಲು ಅವರಿಗೆ 1913ರಲ್ಲಿ 'ದಿ ಮೈಸೂರು ವಿಲೇಜ್ ಕೋರ್ಟ್ ಆಕ್ಟ್' ನ್ನು ಜಾರಿಗೆ ತಂದರು. ರೈತರು ಸಾಲದ ಅಡಿಯಲ್ಲಿ ಸಿಕ್ಕಿ ಭೂಮಿಯನ್ನು ಕಳೆದುಕೊಳ್ಳುವ ಸ್ಥಿತಿ ತಲುಪಿದಾಗ ನಾಲ್ವಡಿ ಕೃಷ್ಣರಾಜ ಒಡೆಯರ್ 1928ರಲ್ಲಿ 'ಅಗ್ರಿಕಲ್ಚರಿಸ್ಟ್ಸ್ ಡಿಬೆಟ್ ರಿಲೀಫ್ ಆಕ್ಟ್" ನ್ನು ಜಾರಿಗೊಳಿಸಿದರು. 1939ರ ಫೆಬ್ರವರಿ 5ರಂದು ಜೋಗ ಜಲಪಾತದ ಬಳಿ ಶರಾವತಿ ನೀರಿನಿಂದ ವಿದ್ಯುತ್ ಉತ್ಪಾದನೆ ಮಾಡಲು ಯೋಜನೆ ರೂಪಿಸಲಾಯಿತು.

1914ರಲ್ಲಿ ಮೆಕಾನಿಕಲ್ ಇಂಜಿನಿಯರಿಂಗ್ ಸ್ಕೂಲನ್ನು ಆರಂಭಿಸಿದರು. ಈ ಸಂದರ್ಭದಲ್ಲಿ ಭದ್ರಾವತಿಯ ಮೈಸೂರು ಕಬ್ಬಿಣದ ಕಾರ್ಖಾನೆ, ಬೆಂಗಳೂರಿನ ಸಾಬೂನು ಕಾರ್ಖಾನೆ, ಮೈಸೂರಿನ ಗಂಧದೆಣ್ಣೆ ಕಾರ್ಖಾನೆ, ಸಿಮೆಂಟ್ ಕಾರ್ಖಾನೆಗಳು ಪ್ರಾರಂಭವಾದವು. 1934ರಲ್ಲಿ ಮಂಡ್ಯದಲ್ಲಿ ಮೈಸೂರು ಸಕ್ಕರೆ ಕಂಪೆನಿ, 1936 ರಲ್ಲಿ ಮೈಸೂರು ಪೇಪರ್ ಮಿಲ್ ಆರಂಭ, ಮಂಗಳೂರು ಹೆಂಚು ಕಾರ್ಖಾನೆ, ಷಹಬಾದಿನ ಸಿಮೆಂಟ್ ಕಾರ್ಖಾನೆ, ಮೈಸೂರಿನ ಅರಗು ಮತ್ತು ಬಣ್ಣದ ಕಾರ್ಖಾನೆ, ಕೊಡಗಿನ ಕಾಫಿ ಸಂಶೋಧನಾ ಕೇಂದ್ರಗಳು ಪ್ರಾರಂಭಗೊಂಡವು.

ನಾಲ್ವಡಿ ಕೃಷ್ಣರಾಜ ಒಡೆ–ಯರ್ 38 ವರ್ಷಗಳ ಕಾಲ ದಕ್ಷ ಆಡಳಿತ ನಡೆಸಿ ಪ್ರಜೆಗಳಿಂದ ರಾಜರ್ಷಿ ಬಿರುದು ಪಡೆದರು. ಸಂಸ್ಥಾನದ ಏಳಿಗೆಗಾಗಿ, ಪ್ರಜೆಗಳ ನೆಮ್ಮದಿ ಬದುಕಿಗಾಗಿ ತಮ್ಮ ಇಡೀ ಜೀವನವನ್ನೇ ಮುಡಿಪಾಗಿಟ್ಟರು. ಸಾಮಾಜಿಕ ಪರಿವರ್ತನೆಯ ರೂವಾರಿಯಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಆಗಸ್ಟ್ 3, 1940ರಲ್ಲಿ ನಿಧನರಾದರು. ಅವರು ಮಾಡಿರುವ ಕಾರ್ಯಗಳು ಇಂದಿಗೂ ಕನ್ನಡಿಗರಿಗೆ ಪ್ರೇರಣೆಯಾಗಿವೆ.

**ಡಾ.ಚಂದ್ರಶೇಖರ ಕಾಳನ್ನವರ**
**ಕನ್ನಡ ಉಪನ್ಯಾಸಕರು, ತೆಗ್ಗಿ**

## ಬಾಕಿ ಉಳಿದಿರುವ ಸೀಟುಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 3 : ಜಿ.ಟಿ.ಟಿ.ಸಿ ಯಾದಗಿರಿ ಕೇಂದ್ರದಲ್ಲಿ 2025–26ನೇ ಶೈಕ್ಷಣಿಕ ಸಾಲಿನ ಡಿಪ್ಲೋಮ್ ಕೋರ್ಸ್ಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಬಾಕಿ ಉಳಿದಿರುವ ಸೀಟುಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಪ್ರಾಂಶುಪಾಲರಾದ ರವಿಚಂದ್ರ ಅವರು ತಿಳಿಸಿದ್ದಾರೆ.

ಯಾದಗಿರಿ ತಾಲ್ಲೂಕು ಕಡೇಚೂರು ಬಾಡಿಯಾಳ್ ಕೈಗಾರಿಕ ಪ್ರದೇಶದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ಯಾದಗಿರಿ ಜಿ.ಟಿ.ಟಿ.ಸಿ ಕೇಂದ್ರದಲ್ಲಿ 2025–26ನೇ ಶೈಕ್ಷಣಿಕ ಸಾಲಿನ ಡಿಪ್ಲೋಮಾ ಕೋರ್ಸ್ಗಳ ಪ್ರವೇಶಾತಿ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ಡಿಪ್ಲೋಮಾ ಕೋರ್ಸ್ಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಬಾಕಿ ಉಳಿದಿರುವ ಸೀಟುಗಳಿಗೆ ಅರ್ಜಿ ಆಹ್ವಾನಿಸಿದೆ. ನಮ್ಮ ಕೇಂದ್ರದಲ್ಲಿ 3 ವಿಭಾಗದ ಕೋರ್ಸ್ಗಳಿವೆ: ಡಿಪ್ಲೋಮಾ ಇನ್ ಟೂಲ್ ಮತ್ತು ಡೈ ಮೇಕಿಂಗ್ (ಡಿಟಿಡಿಎಮ್), ಡಿಪ್ಲೋಮಾ ಇನ್ ಮೆಕಟ್ರಾನಿಕ್ಸ್ (ಡಿಎಮ್‌ಸಿಹೆಚ್), ಡಿಪ್ಲೋಮಾ ಇನ್ ಪ್ರಿಸಿಷನ್ ಮ್ಯಾನುಫ್ಯಾಕ್ಚರಿಂಗ್ (ಡಿಪಿಎಮ್), 3 ಕೋರ್ಸ್ಗಳಿಗೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಾಸ್ ಆಗಿರಬೇಕು, ಹಾಗೂ ಪಿಯುಸಿ ಮತ್ತು ಐ.ಟಿ.ಐ ಪಾಸ್‌ದ ವಿದ್ಯಾರ್ಥಿಗಳಿಗೆ ಎರಡನೇ ವರ್ಷಕ್ಕೆ ನೇರ ಪ್ರವೇಶ ವಿರುತ್ತದೆ. ಈ ಡಿಪ್ಲೋಮಾ ಕೋರ್ಸ್ಗಳ ಅವಧಿ 3+1 ಈ ಕೋರ್ಸ್ಗಳು ಕೌಶಲ್ಯ ಅಭಿವೃದ್ಧಿಗೆ ಸಂಬಂಧಿಸಿದೆ. ಶೇ.30 ರಷ್ಟು ಥಿಯರಿ ಮತ್ತು ಶೇ.70 ರಷ್ಟು ಪ್ರಾಕ್ಟಿಕಲ್ ಹೊಂದಿರುವ ಕೋರ್ಸ್ಗಳಾಗಿವೆ. ಈ ಕೋರ್ಸ್ ಅಧ್ಯಯನ ಮಾಡುವಾಗ 3 ವರ್ಷದ ಡಿಪ್ಲೋಮಾ ತರಬೇತಿ ಪಡೆದ ನಂತರ ಕಡ್ಡಾಯ ಒಂದು ವರ್ಷದ ಇಂಟರ್ನ್ಶಿಫ್ ತರಬೇತಿ ನೀಡಲಾಗುತ್ತದೆ. ಈ ಇಂಟರ್ನ್ಶಿಫ್ ತರಬೇತಿ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು 20,000 ರೂ.ಗಳ ವರೆಗೆ ಶಿಷ್ಯ ವೇತನ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಜಿ.ಟಿ.ಟಿ.ಸಿ ಪ್ರಾಂಶುಪಾಲರು ಮೊ.ನಂ.9036144417, 9742502602, 8106563928, 8088333331ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಡಿಗೆ ವಾಹನ ಒದಗಿಸಲು ಆಸಕ್ತರಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 03 ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆ ಅಡಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧೀನದಲ್ಲಿರುವ ಜಿಲ್ಲಾ ಕ್ಷಯರೋಗ ವಿಭಾಗದ ಜಿಲ್ಲಾ ಕ್ಷಯರೋಗ ನಿ ಯಂತ್ರಣಾಧಿಕಾರಿಗಳಿಗೆ 2025–26ನೇ ಸಾಲಿಗಾಗಿ 4 ಚಕ್ರದ 1 ಬಾಡಿಗೆ ವಾಹನ ಒದಗಿಸಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜೂನ್ 17ರ ಸಂಜೆ 5 ಗಂಟೆಯೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಸದಸ್ಯಕಾರ್ಯದರ್ಶಿಗಳು ಹಾಗೂ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರಾಟವಾಗದೇ ಉಳಿದಿರುವ ಮದ್ಯದ ದಾಸ್ತಾನು ಅವಧಿ ಮೀರಿದ ಬಿಯರ್ ದಾಸ್ತಾನನ್ನು ನಾಶಪಡಿಸಿದ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 3 ಕೆ.ಎಸ್.ಬಿ.ಸಿ.ಎಲ್ ಮದ್ಯಮಳಿಗೆ ಯಾದಗಿರಿಯಲ್ಲಿ ಮಾರಾಟವಾಗದೇ ಉಳಿದಿರುವ ಮದ್ಯದ ದಾಸ್ತಾನು ಮತ್ತು ಅವಧಿ ಮೀರಿದ ಬಿಯರ್ ದಾಸ್ತಾನನ್ನು ನಾಶಪಡಿಸಲಾಯಿತು ಎಂದು ಯಾದಗಿರಿ ಮದ್ಯಮಳಿಗೆ ಮಳಿಗೆ ವ್ಯವಸ್ಥಾಪಕರು ಹೆಚ್.ಎಸ್.ಪಾಟೀಲ್ ಅವರು ತಿಳಿಸಿದ್ದಾರೆ.

ಅಬಕಾರಿ ಉಪ ಆಯುಕ್ತರು, ಯಾದಗಿರಿ ಜಿಲ್ಲೆ ಯಾದಗಿರಿ ಅವರ ಆದೇಶದಂತೆ ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ, ಮದ್ಯಮಳಿಗೆ ಯಾದಗಿರಿಯಲ್ಲಿ ಮಾರಾಟವಾಗದೇ ಉಳಿದಿರುವ ಮತ್ತು ಅವಧಿ ಮುಗಿದ ಅಂ–ದಾಜು 587145.34 ರೂ.ಗಳ ಮೊತ್ತದ ದಾಸ್ತಾನನ್ನು 2025ರ ಜೂನ್ 2ರ ಸೋಮವಾರ ರಂದು ನಾಶಪಡಿಸಲಾಯಿತು, ನಾಶಪಡಿಸಿದ ಮದ್ಯದ ದಾಸ್ತಾನಿನ ವಿವರ ಈ ಕೆಳಗಿನಂತೆ ಇರುತ್ತದೆ.

ದಾಸ್ತಾನಿನ ಹೆಸರು: ರಾಯಲ್ ಚಾಲೆಂಜ್ ಸ್ಟ್ರಾಂಗ್ ಪ್ರೀಮಿಯಮ್ ಬಿಯರ್ 650 ಎಮ್.ಎಲ್ ಪಟ್ಟಿಗೆಗಳು 98 ಇದ್ದು, ಬಿಡಿ ಬಾಟಲ್‌ಗಳು ಇಲ್ಲ, ಹೆನಿಕೇನ್ ಸಿಲ್ವರ್ ಶೇ.100 ರಷ್ಟು ಮಾಲ್ಟ್ ಲಾಗರ್ ಬಿಯರ್ ಕ್ಯಾನ್ 500 ಎಮ್.ಎಲ್, ಪಟ್ಟಿಗೆಗಳು 14 ಇದ್ದು, ಬಿಡಿ ಬಾಟಲ್‌ಗಳು ಇಲ್ಲ. ರಾಯಲ್ ಚಾಲೆಂಜ್ ಸ್ಟ್ರಾಂಗ್ ಪ್ರೀಮಿಯಮ್ ಬಿಯರ್ ಕ್ಯಾನ್ 500 ಎಮ್.ಎಲ್ ಪಟ್ಟಿಗೆಗಳು 37 ಇದ್ದು, ಬಿಡಿ ಬಾಟಲ್‌ಗಳು 21 ಇದೆ. ಹೆನಿಕೇನ್ ಸಿಲ್ವರ್ ಶೇ.100 ರಷ್ಟು ಮಾಲ್ಟ್ ಲಾಗರ್ ಬಿಯರ್ ಕ್ಯಾನ್ 500 ಎಮ್.ಎಲ್ ಪಟ್ಟಿಗೆಗಳು 14 ಇದ್ದು, ಬಿಡಿ ಬಾಟಲ್‌ಗಳು 22 ಇದೆ. ಆಂಟಿಕ್ಯೂಟಿ ಬ್ಲೂ ಅಲ್ಟ್ರಾ ಪ್ರೀಮಿಯಮ್ ವಿಸ್ಕಿ 750 ಎಮ್.ಎಲ್ ಪಟ್ಟಿಗೆಗಳು ಇಲ್ಲ, ಬಿಡಿ ಬಾಟಲ್‌ಗಳು 1 ಇದೆ. ಆಂಟಿಕ್ಯೂಟಿ ಬ್ಲೂ ಅಲ್ಟ್ರಾ ಪ್ರೀಮಿಯಮ್ ವಿಸ್ಕಿ 375 ಎಮ್.ಎಲ್ ಪಟ್ಟಿಗೆಗಳು 06 ಇದ್ದು, ಬಿಡಿ ಬಾಟಲ್‌ಗಳು ಇಲ್ಲ. ಆಂಟಿಕ್ಯೂಟಿ ಬ್ಲೂ ಅಲ್ಟ್ರಾ ಪ್ರೀಮಿಯಮ್ ವಿಸ್ಕಿ 750 ಎಮ್.ಎಲ್ ಪಟ್ಟಿಗೆಗಳು 3 ಇದ್ದು, ಬಿಡಿ ಬಾಟಲ್‌ಗಳು 3 ಇದೆ. ಸಿರ್ಮಾನಾಫ್ ಎಕ್ಸ್ಪ್ರೆಸೊ ಕಾಫಿ ಫ್ಲೇವರ್ ವೋಡ್ಕಾ 180 ಎಮ್.ಎಲ್ ಪಟ್ಟಿಗೆಗಳು 01 ಇದ್ದು, ಬಿಡಿ ಬಾಟಲ್‌ಗಳು 24 ಇದೆ. ಸಿರ್ಮಾನಾಫ್ ಎಕ್ಸ್ಪ್ರೆಸೊ ಆರೇಂಜ್ ಟ್ರೀಪಲ್ ಡಿಸ್ಟೀಲ್ಡ್ ವೋಡ್ಕಾ 750 ಎಮ್.ಎಲ್. ಪಟ್ಟಿಗೆಗಳು ಇಲ್ಲ, ಬಿಡಿ ಬಾಟಲ್‌ಗಳು 5 ಇದೆ. ವ್ಯಾಟ್ 69 ಬ್ಲೆಂಡೆಡ್ ಸ್ಕಾಚ್ ವಿಸ್ಕಿ 60 ಎಮ್.ಎಲ್ ಪಟ್ಟಿಗೆಗಳು 01 ಇದ್ದು, ಬಿಡಿ ಬಾಟಲ್‌ಗಳು 25 ಇದೆ. ಪಟ್ಟಿಗೆಗಳು ಒಟ್ಟು 174 ಇದ್ದು, ಬಿಡಿ ಬಾಟಲ್‌ಗಳು ಒಟ್ಟು 101 ನಾಶಪಡಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಖ್ಯಮಂತ್ರಿಗಳು ಇದೇ ಜೂನ್ 14ಕ್ಕೆ ಯಾದಗಿರಿಗೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂನ್3–ಮಾನ್ಯ ಮುಖ್ಯಮಂತ್ರಿಗಳು ಇದೇ ಜೂನ್ 14ಕ್ಕೆ ಯಾದಗಿರಿಗೆ ಭೇಟಿ ನೀಡುವ ಪ್ರಯುಕ್ತ ಇಂದು ಸಣ್ಣಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಶ್ರೀ ಶರಣಬಸಪ್ಪದರ್ಶನಾಪುರ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಶ್ರೀ ಅಜಯ್ ಧರ್ಮಸಿಂಗ್ ಅವರು ಕಾರ್ಯಕ್ರಮ ನಡೆಸಲು ಉದ್ದೇಶಿಸಲಾಗಿರುವ ಜಿಲ್ಲಾ. ಕ್ರೀಡಾಂಗಣದಲ್ಲಿ ಸ್ಥಳ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ್, ಸುರಪುರ ಶಾಸಕ ರಾಜಾ ವೇಣುಗೋಪಾಲ ನಾಯಕ, ಕೆಕೆಆರ್‌ಡಿಬಿ ಕಾರ್ಯದರ್ಶಿ ಎಮ್,ಸುಂದರೇಶ್ ಬಾಬು, ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಜಿ.ಪಂ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಜೈಲರ್ ಎಸ್. ಜಿ ರಾಠೋಡ್ ವಯೋನಿವೃತ್ತಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ.ಜೂ.1: ಸುದೀರ್ಘ ಸೇವೆಯಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಕರ್ತವ್ಯನಿಷ್ಠೆಯೊಂದಿಗೆ ಕಾರ್ಯನಿರ್ವಹಿಸಿ ಸರಳ ವ್ಯಕ್ತಿತ್ವದಲ್ಲಿ ಸಾರ್ಥಕತೆ ಕಂಡು–ಕೊಂಡು ವಯೋನಿವೃತ್ತಿ ಹೊಂದುತ್ತಿರುವ ಜೈಲರ್ ಎಸ್ ಜಿ ರಾಠೋಡ್ ಅವರ ಜೀವನ ಸುಖಮಯವಾಗಿರಲಿ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ಅವರು ಅಭಿಪ್ರಾಯಪಟ್ಟರು. ಯಾದಗಿರಿ ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ ಜಿಲ್ಲಾ ಕಾರಾಗೃಹ ವತಿಯಿಂದ ನಗರದಲ್ಲಿನ ಜಿಲ್ಲಾ ಕಾರಾಗೃಹದಲ್ಲಿ ನಡೆದ ಜೈಲರ್ ಎಸ್.ಜಿ ರಾಠೋಡ್ ಅವರ ವಯೋನಿವೃತ್ತಿ ಸಮಾರಂಭ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಇಲಾಖೆಯಲ್ಲಿ ಸೇವೆ ಸಲ್ಲಿಸಿದವರನ್ನು ಇಲಾಖೆಯು ಎಂದೂ ಮರೆಯುವುದಿಲ್ಲ. ತಮಗೆ ವಹಿಸಿದ ಕೆಲಸವನ್ನು ಶ್ರದ್ಧೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಿ ಸಿಬ್ಬಂದಿಗಳ ಮತ್ತು ಜೈಲಿನ ಕೈದಿಗಳ ಪ್ರೀತಿ–ವಿಶ್ವಾಸ ಗಳಿಸಿರುವ ಕಾರ್ಯ ವೈಖರಿಗೆ ಹಿಡಿದ ಕನ್ನಡಿಯಾಗಿದೆ ಎಂದರು. ಈ ಸಂದರ್ಭದಲ್ಲಿ ಅಧೀಕ್ಷ ಸಂಜೀವ ಎಸ್ ಪಾಟೀಲ್, ಸಹಾಯಕ ಜೈಲರ್ ಜಗದೀಶ್ ಎಸ್ ಪೂಜಾರಿ, ಜಗದೀಶ್ ಚವ್ಹಾಣ್, ಮುಖ್ಯ ವೀಕ್ಷಕರಾದ ಶರಣಪ್ಪ ಹುಂಡೇಕಲ್, ಬಸವರಾಜ, ಪ್ರೇಮನಾಥ, ಹಸನ್ ಬಿ, ರಾಜೇಂದ್ರ, ಸುನೀತಾ, ಸುನಿಲ್ ಕೋಣಿನ್, ಶಿಕ್ಷಕಿಂ–ಮಾದ ಉಮಾದೇವಿ, ಶೂಶ್ರುಷಕ ಅಧಿಕಾರಿ ವಿಲ್ಸನ್ ಸೇರಿದಂತೆ ಇನ್ನಿತರು ಉಪಸ್ಥಿತರಿದ್ದರು.

# ವಸತಿ ಶಾಲೆಗಳ ಪ್ರವೇಶಕ್ಕೆ ಜೂನ್ 04, 05 ರಂದು ಕೌನ್ಸೆಲಿಂಗ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2025-26ನೇ ಸಾಲಿಗೆ ಕೊಪ್ಪಳ ಜಿಲ್ಲೆಯ ಅಲ್ಪಸಂಖ್ಯಾತರಕಲ್ಯಾಣಇಲಾಖೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ/ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಜೂನ್ 04 ಮತ್ತು 05 ರಂದು ಕೌನ್ಸೆಲಿಂಗ್ ಮೂಲಕ ಸೀಟು ಹಂಚಿಕೆ ಮಾಡಲಾಗುವುದು.



1:1ಮೆರಿಟ್‌ನಲ್ಲಿಅರ್ಹತೆಪಡೆದು ಆಯ್ಕೆಯಾದ ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಟಣಕನಕಲ್‌ನಲ್ಲಿ ಕೌನ್ಸೆಲಿಂಗ್ ನಡೆಯಲಿದೆ. ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಜೂನ್ 04 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಬಾಲಕರಿಗೆ ಹಾಗೂ ಮಧ್ಯಾಹ್ನ 03 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಬಾಲಕಿಯರಿಗೆ ಕೌನ್ಸೆಲಿಂಗ್ ನಡೆಯಲಿದೆ. ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಜೂನ್ 05 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಬಾಲಕರಿಗೆ ಹಾಗೂ ಮಧ್ಯಾಹ್ನ 03 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಬಾಲಕಿಯರಿಗೆ ಕೌನ್ಸೆಲಿಂಗ್ ನಡೆಯಲಿದೆ. ಆಯ್ಕೆಯಾದ ಅಭ್ಯರ್ಥಿಗಳು ನಿಗದಿತ ದಿನಾಂಕದಂದು ತಪ್ಪದೇ ಕೌನ್ಸೆಲಿಂಗ್‌ಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ವಸತಿ ಶಾಲೆ, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಅಧಿಕಾರಿ ರವಿ ಪೂಜಾರ ಅವರು ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕೊಪ್ಪಳ 08539-225070, 8088892549, ಗಂಗಾವತಿ 9972524670, ಕುಷ್ಟಗಿ 8861610578, ಯಲಬುರ್ಗಾ 9620522537 ಮತ್ತು ಜಿಲ್ಲಾ ಅಲ್ಪಸಂಖ್ಯಾತರ ಕಛೇರಿಗಳಿಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಸಾಹಿತ್ಯ ಅಕಾಡೆಮಿ: ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.03–ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ 2024 ನೇ ವರ್ಷದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡಿರುವ ಸಾಹಿತ್ಯದ ವಿವಿಧ ಪ್ರಕಾರಗಳ ಕೃತಿಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ.ಎನ್ ಅವರು ತಿಳಿಸಿದ್ದಾರೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2024ರ ಜನವರಿ 01ರಿಂದ 2024ರ ಡಿಸೆಂಬರ್ 31ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2024 ಎಂದು ಮುದ್ರಿತವಾಗಿರಬೇಕು.

*ವಿವಿಧ ಪ್ರಕಾರಗಳ ಪುಸ್ತಕಗಳು:*

ಕಾವ್ಯ (ವಚನಗಳು ಮತ್ತು ಹನಿಗವನಗಳು ಸೇರಿ), ನವಕವಿಗಳ ಪ್ರಥಮ ಕವನಸಂಕಲನ (ದೃಢೀಕರಣ ಪತ್ರದೊಂದಿಗೆ), ಕಾವ್ಯ ಹಸ್ತಪ್ರತಿ (30 ವರ್ಷ ಒಳಗಿನ ಯುವಕವಿಗಳ ಅಪ್ರಕಟಿತ ಕವನ ಸಂಕಲನದ ಹಸ್ತಪ್ರತಿಯನ್ನು ಕಳಿಸಿಕೊಡಬೇಕು (ಜಿ.ಶ್ರೀನಿವಾಸರಾಜು ದತ್ತಿನಿಧಿ ಬಹುಮಾನಕ್ಕಾಗಿ), ಕಾದಂಬರಿ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಚದುರಂಗ ದತ್ತಿನಿಧಿ ಬಹುಮಾನಗಳಿಗಾಗಿ), ಸಣ್ಣಕತೆ, ನಾಟಕ, ಲಲಿತ ಪ್ರಬಂಧ (ಹರಟೆ ಮತ್ತು ವಿನೋದ ಸಾಹಿತ್ಯ ಸೇರಿ) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ವಿ.ಸೀತಾರಾಮಯ್ಯ ಸೋದರಿ ಇಂದಿರಾ ದತ್ತಿನಿಧಿ ಬಹುಮಾನಗಳಿಗಾಗಿ), ಪ್ರವಾಸ ಸಾಹಿತ್ಯ, ಜೀವನಚರಿತ್ರೆ/ಆತ್ಮಕಥೆ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಸಿಂಪಿ ಲಿಂಗಣ್ಣ ದತ್ತಿನಿಧಿ ಬಹುಮಾನಗಳಿಗಾಗಿ), ಸಾಹಿತ್ಯ ವಿಮರ್ಶೆ (ಸಾಹಿತ್ಯ ಚರಿತ್ರೆ, ಸಾಹಿತ್ಯತತ್ವ ಮತ್ತು ಸೌಂದರ್ಯ ಮೀಮಾಂಸೆ ಸೇರಿ) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಪಿ. ಶ್ರೀನಿವಾಸರಾವ್ ದತ್ತಿನಿಧಿ ಬಹುಮಾನಗಳಿಗಾಗಿ), ಗ್ರಂಥ ಸಂಪಾದನೆ (ಪ್ರಾಚೀನ ಕೃತಿಗಳ ಸಂಪಾದನೆ), ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ (ಭೌತ, ರಸಾಯನ, ಗಣಿತ, ಪ್ರಾಣಿ, ಸಸ್ಯ, ಇಂಜಿನಿಯರಿಂಗ್, ವೈದ್ಯ, ಭೂ, ಖಗೋಳ, ಗೃಹವಿಜ್ಞಾನ, ಪರಿಸರ), ಮಾನವಿಕ (ಜಾನಪದ, ಇತಿಹಾಸ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಮಾನವಶಾಸ್ತ್ರ, ಮನಃಶಾಸ್ತ್ರ, ಭಾಷಾಶಾಸ್ತ್ರ, ಶಿಕ್ಷಣ, ವಾಣಿಜ್ಯ, ಕಾನೂನು, ಗ್ರಂಥಭಂಡಾರ ವಿಜ್ಞಾನ, ಸಮೂಹಸಂವಹನ, ಧಾರ್ಮಿಕ, ದಾರ್ಶನಿಕ) ಸಂಶೋಧನೆ (ಕನ್ನಡ ಭಾಷೆ ಸಾಹಿತ್ಯ ಮತ್ತು ಸಂಸ್ಕೃತಿಗಳಿಗೆ ಸಂಬಂಧಿಸಿದ ಸಂಶೋಧನೆ), ವೈಚಾರಿಕ/ಅಂಕಣ ಬರಹ (ಅಕಾಡೆಮಿ ಮಸ್ತಕ ಬಹುಮಾನ ಹಾಗೂ ಬಿ.ವಿ. ವೀರಭದ್ರಪ್ಪ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ-1 (ಇಂಗ್ಲೀಷ್ ಸೇರಿದಂತೆ ಭಾರತೀಯ ಭಾಷೆಯಿಂದ ಕನ್ನಡಕ್ಕೆ ಅನುವಾದಗೊಂಡ (ಸೃಜನ/ಸೃಜನೇತರ ಕೃತಿಗಳು) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಎಲ್. ಗುಂಡಪ್ಪ ಮತ್ತು ಶಾರದಮ್ಮ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ-2 (ಕನ್ನಡದಿಂದ ಅನ್ಯಭಾಷೆಗಳಿಗೆ ಅನುವಾದಗೊಂಡ ಸೃಜನ/ಸೃಜನೇತರ ಕೃತಿ), ಲೇಖಕರ ಮೊದಲ ಸ್ವತಂತ್ರ ಕೃತಿ (2024ರಲ್ಲಿ ಮುದ್ರಣಗೊಂಡ ಮೊದಲ ಸ್ವತಂತ್ರ ಕೃತಿ. ಖಾತರಿಪಡಿಸಲು ದೃಢೀಕರಣ ಪತ್ರ ಲಗತ್ತಿಸಬೇಕು) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಮಧುರಚೆನ್ನ ದತ್ತಿನಿಧಿ ಬಹುಮಾನಗಳಿಗಾಗಿ), ಕನ್ನಡದಿಂದ ಇಂಗ್ಲಿಷಿಗೆ ಅನುವಾದ (ಅಮೆರಿಕನ್ನಡ ದತ್ತಿನಿಧಿ ಬಹುಮಾನಕ್ಕಾಗಿ), ದಾಸ ಸಾಹಿತ್ಯ (ದಾಸ ಸಾಹಿತ್ಯ ಕುರಿತ ಸೃಜನ/ಸೃಜನೇತರ ಕೃತಿಗಳು) (ಶ್ರೀಮತಿ ಜಲಜಾ ಶ್ರೀಪತಿ ಆಚಾರ್ಯ ಗಂಗೂರ್ ದತ್ತಿನಿಧಿ ಬಹುಮಾನಕ್ಕಾಗಿ), ಸಂಕೀರ್ಣ (ಮೇಲಿನ ಯಾವುದೇ ಪ್ರಕಾರಕ್ಕೆ ಹೊಂದಿಕೊಳ್ಳದ ವಿಶಿಷ್ಟ ಕೃತಿಗಳು), ಗಜಲ್ ಕಾವ್ಯ (ನಾಡೋಜ ಡಾ.ಶಾಂತರಸ ಗಜಲ್ ಕಾವ್ಯ ದತ್ತಿ ಬಹುಮಾನ)

*ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು:*

ಮರುಮುದ್ರಣವಾದ ಪುಸ್ತಕಗಳು, ಪಿಎಚ್.ಡಿ ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳನ್ನು ಮತ್ತದೇ ಪ್ರಕಾರದಲ್ಲಿ ಮುಂದಿನ ಮೂರು ವರ್ಷದವರೆಗೆ ಪರಿಗಣಿಸುವುದಿಲ್ಲ, ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ.

ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು.

ಲೇಖಕರು, ಪ್ರಕಾಶಕರು, ಸಾಹಿತ್ಯಾಸಕ್ತ ಸಾರ್ವಜನಿಕರು ನಾಲ್ಕು ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560002. ಈ ವಿಳಾಸಕ್ಕೆ ರಿಜಿಸ್ಟ್ರ ಅಂಚೆ, ಕೊರಿಯರ್ ಅಥವಾ ಖುದ್ದಾಗಿ ಜುಲೈ 15 ರೊಳಗೆ ತಲುಪುವಂತೆ ಕಳುಹಿಸಬೇಕು.


ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ www.sahitfyaacad-emy.karnataka.gov.in ಗೆ ಭೇಟಿ ನೀಡಿ ವೀಕ್ಷಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಳ್ಳಾರಿಯಲ್ಲಿ ವಿಶ್ವ ಹಾಲು ದಿನಾಚರಣೆ

# ಮಾನವನ ಆರೋಗ್ಯಕರ ಜೀವನದಲ್ಲಿ ಹಾಲು ಬಹುಮುಖ್ಯ: ಟಿ.ಮಲ್ಲಿಕಾರ್ಜುನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.03–ಆರೋಗ್ಯಕರ ಜೀವನ, ಆಹಾರ ಪದ್ಧತಿ ಮತ್ತು ಆಹಾರ ಉತ್ಪಾದನೆಯಲ್ಲಿ ಹಾಲಿನ ಉತ್ಪನ್ನಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಜೂ.01 ರಂದು ವಿಶ್ವ ಹಾಲು ದಿನ ಆಚರಣೆ ಮಾಡಲಾಗುತ್ತದೆ ಎಂದು ರಾಬಕೋವಿ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ಉಪ ವ್ಯವಸ್ಥಾಪಕ ಟಿ.ಮಲ್ಲಿಕಾರ್ಜುನ ಅವರು ಹೇಳಿದರು.




ನಗರದ ಜಿಲ್ಲಾ ಆಸ್ಪತ್ರೆಯ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ವಿಶ್ವ ಹಾಲು ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಾನವನ ಜೀವನದಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳು ಅಗತ್ಯವಾಗಿದೆ. ಹಾಲಿನಲ್ಲಿ ಕ್ಯಾಲ್ಸಿಯಂ, ಪ್ರೋಟಿನ್, ವಿಟಮಿನ್-ಬಿ2 ಮುಂತಾದ ಪೋಷಕಾಂಶಗಳು ಅಡಗಿವೆ ಎಂದು ತಿಳಿಸಿದರು.

ಹಾಲು ಮತ್ತು ಹಾಲಿನ ಉತ್ಪನ್ನಗಳ ಮಹತ್ವ, ಸಮತೋಲನ, ಆಹಾರದಲ್ಲಿರುವ ಪೋಷಕಾಂಶಗಳು ಹಾಗೂ ಆರೋಗ್ಯಕ್ಕೆ ಅವುಗಳ ಮಹತ್ವ ಕುರಿತು ತಿಳಿಸುವುದು ವಿಶ್ವ ಹಾಲು ದಿನಾಚರಣೆಯ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ರಾಬಕೋವಿ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ಮಾರುಕಟ್ಟೆ ವ್ಯವಸ್ಥಾಪಕ ಮೋಹನ್ ಎಲ್.ಶಿಂಧೆ ಅವರು ಮಾತನಾಡಿ, ವಿಶ್ವ ಹಾಲು ದಿನಾಚರಣೆಯನ್ನು ಪ್ರತಿ ವರ್ಷ ಜೂನ್ 1ನೇ ತಾರೀಖಿನಂದು ಆಚರಿಸಲು 2001 ರಲ್ಲಿ ವಿಶ್ವ ಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆಯು (ಎಫ್.ಎ.ಓ.) ಪ್ರಾರಂಭಿಸಿತು. ಡೇರಿ ಉದ್ಯಮಕ್ಕೆ ಸಂಬಂಧಿಸಿದ ಯಾವುದೇ ರೀತಿಯ ಸಾಧ್ಯವಿರುವ ಉಪಕ್ರಮಗಳ ಬಗ್ಗೆ ಅರಿವು ಮೂಡಿಸಲು ಮತ್ತು ಬೆಂಬಲ ಒದಗಿಸಲು ಈ ದಿನದ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಇದೇ ವೇಳೆ ಕರ್ನಾಟಕ ಹಾಲು ಮಹಾಮಂಡಳಿಯಿಂದ ಹೊಸದಾಗಿ ಮಾರುಕಟ್ಟೆಗೆ ಬಿಡುಗಡೆ ಮಾಡಿರುವ ಬೇಕರಿ ಉತ್ಪನ್ನಗಳಾದ ನಂದಿನಿ ಮಫಿನ್ಸ್, ಸ್ಲೈಸ್ ಕೇಕ್ಸ್ ಮತ್ತು ಬಾರ್ ಕೇಕ್ಗಳ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಬಸರೆಡ್ಡಿ, ಜಿಲ್ಲಾ ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಕೆ.ವಿಶ್ವನಾಥ, ಶುಶ್ರೂಷಕ ಅಧೀಕ್ಷಕರಾದ ವಿಮಲಾಕ್ಷಿ, ಸಹಾಯಕ ಆಡಳಿತ ಅಧಿಕಾರಿ ರಜಿಯಾ ಬೇಗಂ, ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವ್ಯವಸ್ಥಾಪಕ (ಡೇರಿ) ಸಿದ್ದರಾಮಪ್ಪ ಶಿವರಾಯ ಕಣ್ಣೂರ, ಮಾರುಕಟ್ಟೆ ವ್ಯವಸ್ಥಾಪಕ ಮೋಹನ್ ಎಲ್.ಶಿಂಧೆ, ಸಹಾಯಕ ವ್ಯವಸ್ಥಾಪಕ ರ್ರಿಸ್ವಾಮಿ ರೆಡ್ಡಿ, ಉಪ ವ್ಯವಸ್ಥಾಪಕ ಟಿ.ಮಲ್ಲಿಕಾರ್ಜುನ, ಪ್ರಭಾರ ಉಪ ವ್ಯವಸ್ಥಾಪಕ ರಂಗಸ್ವಾಮಿ, ಮಾರುಕಟ್ಟೆ ಸೂಪರ್‌ವೈಸರ್ ಲೋಹಿತ್ ಕುಮಾರ್, ಮಾರುಕಟ್ಟೆ ಸಹಾಯಕ ನೂರ್ ಮಹಮ್ಮದ್, ಸಿ.ಎನ್.ಮಂಜುನಾಥ, ಬಾಬು.ಬಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬಳಿಕ ಕಾರ್ಯಕ್ರಮದಲ್ಲಿ ನಂದಿನಿ ಗುಡ್ ಲೈಫ್ ಪೆಟ್ ಬಾಟಲ್‌ಗಳನ್ನು ವಿತರಿಸಲಾಯಿತು.

# ಶಾಲಾ ಆವರಣದಲ್ಲಿ ನೀರು ಸಂಗ್ರಹಿಸುವ ಎಲ್ಲಾ ಪರಿಕರಗಳನ್ನು ಶುಚಿಗೊಳಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.03–ಜಿಲ್ಲೆಯ ಎಲ್ಲಾ ಶಾಲಾ ಆವರಣಗಳಲ್ಲಿ ನೀರು ಸಂಗ್ರಹಿಸುವ ಎಲ್ಲಾ ಪರಿಕರಗಳನ್ನು ಶುಚಿಗೊಳಿಸುವ ಮೂಲಕ ಡೆಂಗ್ಯೂ ಹರಡುವ ಸೊಳ್ಳೆಮರಿ ಉತ್ಪತ್ತಿಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಸೂಚಿಸಿದರು.



ಶಾಲೆಗಳ ಆರಂಭದ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲೆಯಾದ್ಯಂತ ಶಾಲೆಗಳಿಗೆ ಆರೋಗ್ಯ ಇಲಾಖೆಯ ತಂಡ ಭೇಟಿ ನೀಡುತ್ತಿದ್ದು, ಈ ಹಿನ್ನಲೆಯಲ್ಲಿ ಕುರುಗೋಡು ತಾಲ್ಲೂಕಿನ ಬಾದನಹಟ್ಟಿ ಗ್ರಾಮದ ನಂದಿ ವಸತಿ ಶಾಲೆಗೆ ಸೋಮವಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಬೇಸಿಗೆ ರಜೆ ಮುಗಿದು ಶಾಲೆಗಳು ಆರಂಭವಾಗಿದ್ದು, ಈ ವರ್ಷ ಮಳೆಗಾಲ ಮೇ ತಿಂಗಳಲ್ಲಿಯೇ ಆರಂಭವಾಗಿರುವುದರಿಂದ ಶಾಲಾ ಆವರಣದಲ್ಲಿ ಕಂಡುಬರಬಹುದಾದ ನೀರು ಸಂಗ್ರಹಕಗಳಾದ ಪ್ಲಾಸ್ಟಿಕ್ ಕಪ್, ತೆಂಗಿನ ಚಿಪ್ಪು, ಮಡಿಕೆಗಳು, ಮುಂತಾದವುಗಳನ್ನು ವಿಲೇವಾರಿ ಮಾಡಬೇಕು ಎಂದರು.

ಬಳಕೆಗಾಗಿ ನೀರು ಸಂಗ್ರಹಿಸುವ ಡ್ರಮ್, ನೀರಿನ ತೊಟ್ಟಿ, ಸಂಪ್ ಮುಂತಾದವುಗಳನ್ನು ಸ್ವಚ್ಛಗೊಳಿಸಿ ನೀರು ತುಂಬಿ ಸರಿಯಾದ ರೀತಿಯಲ್ಲಿ ಮುಚ್ಚಳ ಮುಚ್ಚಿ ಡೆಂಗ್ಯೂ ಹರಡುವ ಈಡಿಸ್ ಇಜಿಪ್ಟೈ ಸೊಳ್ಳೆ ಮೊಟ್ಟೆ ಇಟ್ಟು ಸಂತಾನವೃದ್ಧಿಗೆ ಅವಕಾಶವಿಲ್ಲದಂತೆ ಮಾಡಬೇಕು. ಡೆಂಗ್ಯೂ ರೋಗ ತಡೆಗೆ ಎಲ್ಲರೂ ಸಹಕರಿಸಬೇಕು ಎಂದು ವಿನಂತಿಸಿದರು.

ನಿಂತ ನೀರಿನಿಂದ ಸೊಳ್ಳೆ ಉತ್ಪತ್ತಿಯಾಗುವ ಜೊತೆಗೆ ಮಕ್ಕಳಿಗೆ ಡೆಂಗ್ಯೂ ಸೇರಿದಂತೆ ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಚಿಕುನ್‌ಗುನ್ಯಾ, ಮಲೇರಿಯಾ, ಆನೇಕಾಲು ರೋಗ, ಮೆದುಳು ಜ್ವರ ಮುಂತಾದವುಗಳು ಕಂಡುಬರುವ ಸಾಧ್ಯತೆ ಇರುತ್ತದೆ. ಈ ಹಿನ್ನಲೆಯಲ್ಲಿ ಶಾಲೆಗಳಿಗೆ ಆಗಮಿಸುವ ವೈದ್ಯಕೀಯ ತಂಡ ನೀಡುವ ಸಲಹೆಗಳನ್ನು ಅನುಸರಿಸಿ ರೋಗ ತಡೆಗೆ ಸಹಕರಿಸಬೇಕು ಎಂದು ಶಾಲಾ ಮುಖ್ಯಗುರುಗಳಿಗೆ ಮತ್ತು ಶಾಲಾ ಆಡಳಿತ ಮಂಡಳಿ ಸದಸ್ಯರಿಗೆ ತಿಳಿಸಿದರು.

ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಮಾತನಾಡಿ, ಖಾಸಗಿ ವಸತಿ ಶಾಲೆಗಳಲ್ಲಿ ಬಸ್ಸುಗಳ ಟೈರ್‌ಗಳನ್ನು ಸೂಕ್ತ ವಿಲೇವಾರಿ ಮಾಡಬೇಕು. ಎಲ್ಲಾ ಶಾಲೆಗಳಲ್ಲಿ ಸಿಂಟೆಕ್ಸ್‌ಗಳನ್ನು ಶುಚಿಗೊಳಿಸಿ ಸರಿಯಾದ ಮುಚ್ಚಳ ಇರುವಂತೆ ಹಾಗೂ ಜೊತೆಗೆ ಶಾಲಾ ಆವರಣದಲ್ಲಿ ಯಾವುದೇ ನೀರು ನಿಲ್ಲದಂತೆ ಮುತುವರ್ಜಿ ವಹಿಸುವ ಮೂಲಕ ಮಕ್ಕಳಿಗೆ ಸೊಳ್ಳೆ ಕಚ್ಚುವಿಕೆಯಿಂದ ಬರುವ ರೋಗಗಳು ಬರದಂತೆ ಜಾಗೃತಿ ವಹಿಸಬೇಕು ಎಂದು ಹೇಳಿದರು.

ನಿರಂತರವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಸುಟ್ಟ ಆಯಿಲ್ ಹಾಕಬೇಕು ಮತ್ತು ಮಕ್ಕಳು ಉದ್ದ ತೋಳಿನ ಶರ್ಟ್ ಹಾಗೂ ಪಾದದವರೆಗಿನ ಟಿಜಜಜಿಟಿಜಜ ರಕ್ಷಿಸುವ ಪ್ಯಾಂಟ್ ಧರಿಸಲು ಸೂಚಿಸಬೇಕು. ಆರೋಗ್ಯ ಇಲಾಖೆಯಿಂದ ಸಿದ್ಧಪಡಿಸಿರುವ ವಿಡೀಯೋಗಳನ್ನು ಸ್ಮಾರ್ಟ್ ಕ್ಲಾಸ್ ಮೂಲಕ ಪ್ರದರ್ಶಿಸಿ ಹೆಚ್ಚಿನ ಜಾಗೃತಿ ನೀಡಬೇಕು ಎಂದು ಹೇಳಿದರು.

ಬಳಿಕ ಕುರುಗೋಡು ತಾಲ್ಲೂಕಿನ ಕಲ್ಲುಕಂಭ, ಎಮ್ಮಿಗನೂರು, ಸಿದ್ದಮ್ಮನಹಳ್ಳಿ ಗ್ರಾಮಗಳ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಡಾ.ಮಂಜುನಾಥ ಜವಳಿ, ಡಾ.ಅರುಣ್ ಕುಮಾರ್, ಡಾ.ಫಾರೂಖ್ ಮಹಮ್ಮದ್, ಡಾ.ದಿವ್ಯಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಎನ್‌ವಿಬಿಡಿಸಿಪಿ ಸಲಹೆಗಾರ ಪ್ರತಾಪ್, ಸಿಆರ್‌ಪಿ ಸ್ವರ್ಣಪ್ರಭ, ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ, ಬಸವನಗೌಡ, ಬಸವರಾಜ, ಕೃಷ್ಣಮೂರ್ತಿ, ಪ್ರಶಾಂತ್, ಸಿಹೆಚ್‌ಓ ತಿಮ್ಮೋತಿ, ಶೇಕ್ಷಾವಲಿ ಸೇರಿದಂತೆ ಶಾಲಾ ಮುಖ್ಯ ಗುರುಗಳು ಹಾಗೂ ಮಕ್ಕಳು ಹಾಜರಿದ್ದರು.

# ಲೋಕಾಯುಕ್ತ ಪೊಲೀಸ್: ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ/ಜನ ಸಂಪರ್ಕ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.03–ಕರ್ನಾಟಕ ಲೋಕಾಯುಕ್ತ ಬಳ್ಳಾರಿ ವಿಭಾಗದ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳಿಂದ ಜಿಲ್ಲೆಯ ವಿವಿಧ ತಾಲ್ಲೂಕು ಕೇಂದ್ರಗಳಲ್ಲಿ ಸಾರ್ವಜನಿಕರಿಂದ ಕುಂದುಕೊರತೆಗಳ ಅಹವಾಲುಗಳ ಸ್ವೀಕಾರ/ಜನ ಸಂಪರ್ಕ ಸಭೆ ಏರ್ಪಡಿಸಲಾಗಿದೆ ಎಂದು ಬಳ್ಳಾರಿ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಸಿದ್ಧರಾಜು.ಸಿ ಅವರು ತಿಳಿಸಿದ್ದಾರೆ.

ಪೊಲೀಸ್ ಅಧೀಕ್ಷಕರಾದ ಸಿದ್ಧರಾಜು.ಸಿ ಮಾರ್ಗದರ್ಶನದಲ್ಲಿ ಪೊಲೀಸ್ ನಿರೀಕ್ಷಕರಾದ ಸುರೇಶ್.ಎಂ.ಭಾವಿಮನಿ ಮತ್ತು ನಾಗರೆಡ್ಡಿ ಇವರ ನೇತೃತ್ವದಲ್ಲಿ ಸಿರುಗುಪ್ಪ, ಕುರುಗೋಡು, ಸಂಡೂರು, ಬಳ್ಳಾರಿ ಮತ್ತು ಕಂಪ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಅಹವಾಲು ಸ್ವೀಕರಿಸುವ ಕಾರ್ಯಕ್ರಮ ನಡೆಯಲಿದೆ.

*ಅಹವಾಲು ಸ್ವೀಕರಿಸುವ ದಿನ ಮತ್ತು ಸ್ಥಳ:*

ಜೂನ್ 11 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಿರುಗುಪ್ಪದ ಸಿಡಿಪಿಒ ಕಚೇರಿ ಸಭಾಂಗಣ.

ಜೂನ್ 17 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಕುರುಗೋಡು ತಹಶೀಲ್ದಾರರ ಕಚೇರಿ ಸಭಾಂಗಣ.

ಜೂನ್ 19 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಸಂಡೂರು ತಹಶೀಲ್ದಾರರ ಕಚೇರಿ ಸಭಾಂಗಣ.

ಜೂನ್ 24 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಬಳ್ಳಾರಿಯ ಹೊಸ ಡಿಸಿ ಕಚೇರಿಯ ತಹಶೀಲ್ದಾರರ ಕಚೇರಿ ಸಭಾಂಗಣ.

ಜೂನ್ 26 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಕಂಪ್ಲಿಯ ತಹಶೀಲ್ದಾರರ ಕಚೇರಿ ಸಭಾಂಗಣ.

ಕಾರ್ಯಕ್ರಮದಲ್ಲಿ ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಗೆ ಅರ್ಜಿ ಸಲ್ಲಿಸಲು ನಮೂನೆ/ಫಾರಂ ನಂ.01 ಮತ್ತು 02 ಗಳನ್ನು ಸಹ ನೀಡಲಾಗುವುದು. ಕುಂದು ಕೊರತೆಗಳಿರುವ ಸಾರ್ವಜನಿಕರು ದೂರುಗಳಿದ್ದಲ್ಲಿ ನಿಗದಿಪಡಿಸಿದ ದಿನದಂದು ಅರ್ಜಿ ನಮೂನೆಯಲ್ಲಿ ಅಹವಾಲು ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಗದಿಂದ ಸದೃಡ ಕಾಯ ಹಾಗೂ ಓದಿನಲ್ಲಿ ಏಕಾಗ್ರತೆಗೆ ಸಹಕಾರಿ : ಮಾರುತಿ ಚಿತ್ರಗಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಮನುಷ್ಯ ಜೀವನದಲ್ಲಿ ಉತ್ತಮ ಕಾಯ ಹೊಂದಲು ಹಾಗೂ ಓದಿನಲ್ಲಿ ಏಕಾಗ್ರತೆ ಸಾಧಿಸಲು ಯೋಗ ಒಂದು ಪರಿಣಾಮಕಾರಿ ದಿವ್ಯ ಔಷಧವಾಗಿದೆ ಎಂದು ಯೋಗ ಶಿಕ್ಷಕ ಮಾರುತಿ ಚಿತ್ರಗಾರ ಹೇಳಿದರು.

ಅವರು ಕಿನ್ನಾಳ ಗ್ರಾಮದ ಪಾಂಡುರಂಗ ದೇವಸ್ಥಾನದ ಆವರಣದಲ್ಲಿ ನಡೆಸುವ ಯೋಗ ಶಾಲೆಯಲ್ಲಿ ಯೋಗ ಶಿಬಿರಾರ್ಥಿಗಳನ್ನುದ್ದೇಶಿಸಿ ಮಾತನಾಡಿ ಶಾಲೆಗಳು ಎರಡು ತಿಂಗಳು ರಜೆ ಸಮಯದಲ್ಲಿ ಮಕ್ಕಳು ಯೋಗ ತರಬೇತಿ ಪಡೆದು ಮನೆಯಲ್ಲಿ ಪ್ರತಿದಿನ ಬೆಳಗ್ಗೆ ಬೇಗ ಏಳುವ ಮೂಲಕ ಯೋಗವನ್ನು ಮಾಡುವ ಅಭ್ಯಾಸ ರೂಡಿಸಿಕೊಳ್ಳಬೇಕು ಎಂದರು.

ಇದರಿಂದ ನಮ್ಮ ಎಲ್ಲಾ ಇಂದ್ರಿಯಗಳು ಹತೋಟಿಯಲ್ಲಿಡಲು ಸಹಕಾರಿಯಾಗುವುದಲ್ಲದೇ, ಯಾವುದೇ ರೋಗ ರುಜಿನ, ಕಾಯಿಲೆಗಳು ಬರದಂತೆ ದೇಹವನ್ನು ಯೋಗದಿಂದ ರಕ್ಷಿಸಿಕೊಳ್ಳಬಹುದು ಎಂದರು.

ಬಿಡುವಿನ ವೇಳೆ, ಬೇಸಿಗೆಯ ರಜೆ, ಅಥವಾ ಶಾಲೆಗಳು ರಜೆ ಇರುವ ಸಮಯದಲ್ಲಿ ಮಕ್ಕಳು ಮೊಬೈಲ್ ಮೋಜು- ಮಸ್ತಿಗೆ ಬಲಿಯಾಗದೇ, ಜೀವನ ಕೌಶಲ್ಯದಂತಹ ಯೋಗ ಮತ್ತು ಧ್ಯಾನದಂತಹ ಶಾರೀರಿಕ ಮತ್ತು ಮಾನಸಿಕವಾಗಿ ಬೆಳವಣಿಗೆಯಾಗಲೂ ತಯಾರಾಗಬೇಕು.

ಇಂದಿನ ಮಕ್ಕಳು ನಾಳೆಯ ಪ್ರಜೆಗಳು ಎಂಬ ಧ್ಯೇಯ ವಾಕ್ಯದೊಂದಿಗೆ ಮಕ್ಕಳು ದುಶ್ಚಟ ಹಾಗೂ ಮೊಬೈಲ್ ಗೀಳಿನಿಂದ ಹೊರಬರಲು, ಮಕ್ಕಳ ಆರೋಗ್ಯ ಹೆಚ್ಚಿಸಲು, ಯೋಗ ಸಹಾಯಮಾಡುತ್ತದೆ. ಅದಕ್ಕಾಗಿ ನಾವು ಯೋಗ ಶಿಬಿರವನ್ನು ನಡೆಸುತಿದ್ದು, ಬೆಸಿಗೆ ಎರಡು ತಿಂಗಳು ಮಕ್ಕಳಿಗೆ ಯೋಗದಲ್ಲಿ ಆಸಕ್ತಿ ಮೂಡಿಸಿದ್ದೇವೆ.

ಯೋಗದಲ್ಲಿ ಬರುವಂತ ವಿವಿಧ ಆಸನಗಳು, ಪ್ರಾಣಯಾಮಗಳು, ಧ್ಯಾನ, ಮಾಡಿಸುತ್ತಿದ್ದೇವೆ. ಇದರಿಂದ ಶಾರೀರಿಕ ಮಾನಸಿಕವಾಗಿ ಅವರು ಬಲಿಷ್ಠರಾಗುತ್ತಾರೆ ಎಂದು ಹೇಳಿದರು.

# ಜವಾಹರ ನವೋದಯ ವಿದ್ಯಾಲಯ ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.03–ಕೂಡ್ಲಿಗಿ ತಾಲ್ಲೂಕಿನ ಚಿಕ್ಕಜೋಗಿಹಳ್ಳಿಯಲ್ಲಿರುವ ಜವಾಹರ ನವೋದಯ ವಿದ್ಯಾಲಯದ 6ನೇ ತರಗತಿಯ ಪ್ರವೇಶ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನವನ್ನು ಜುಲೈ 29 ರ ವರೆಗೆ ವಿಸ್ತರಿಸಲಾಗಿದೆ.

ಪ್ರವೇಶ ಪರೀಕ್ಷೆಯು ಡಿಸೆಂಬರ್ 13 ರಂದು ನಡೆಯಲಿದ್ದು, ಆಸಕ್ತರು ಆನ್ ಲೈನ್ ವೆಬ್‌ಸೈಟ್‌ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ ಅನಾಮಧೇಯ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.03–ನಗರದ ಕೌಲ್ ಬಜಾರ್‌ನ ವಿನಾಯಕನಗರದ ಡಿಡಿಪಿ ಕಚೇರಿಯ ಹಿಂಭಾಗ ಸುಮಾರು 32 ವರ್ಷದ ಅನಾಮಧೇಯ ವ್ಯಕ್ತಿಯು ಮೇ 31 ರಂದು ಅಸ್ವಸ್ಥನಾಗಿ ಕಂಡುಬಂದಿದ್ದು, ಟ್ರಾಮಾಕೇರ್ ಆಸ್ಪತ್ರೆಯಲ್ಲಿ ದಾಖಲಿಸಲಾಗಿ ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.5 ಅಡಿ, ದುಂಡು ಮುಖ, ತೆಳುವಾದ ಮೈಕಟ್ಟು ಹೊಂದಿದ್ದು, ತಲೆಯಲ್ಲಿ 2-3 ಇಂಚು ಬಿಳಿ ಮಿಶ್ರಿತ ಕಪ್ಪು ಕೂದಲು, ಕುರುಚಲು ಗಡ್ಡ ಬಿಟ್ಟಿರುತ್ತಾನೆ. ತಿಳಿ ನೀಲಿ ಬಣ್ಣದ ಹಾಫ್ ಟೀ-ಶರ್ಟ್ ಮತ್ತು ಹಸಿರು ಪಟ್ಟಿಯ ಬೂದಿ ಬಣ್ಣದ ಅಂಡರ್ ವೇರ್ ಹಾಗೂ ಗ್ರೇ ಬಣ್ಣದ ಬರ್ಮೋಡ ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100, 258102 ಅಥವಾ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, ಪಿ.ಐ ಮೊ.9480803049 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ 03–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1ರ ವ್ಯಾಪ್ತಿಗೆ ಬರುವ 110/11ಕೆ.ವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ತ್ರೈಮಾಸಿಕ ನಿರ್ವಹಣೆ ಕಾರ್ಯ ಹಮ್ಮಿಕೊಳ್ಳುತ್ತಿರುವುದರಿಂದ ಜೂನ್ 04 ರಂದು ಬೆಳಿಗ್ಗೆ 07 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ಬೆಂಗಳೂರು ರಸ್ತೆ, ಆಂಧ್ರಾಳ್ ರಸ್ತೆ, ಕೊಲ್ಮಿ ಚೌಕ್, ಕಾರ್ಕಲ ತೋಟ, ಬಾಪೂಜಿ ನಗರ, ಮಿಲ್ಲರ್ ಪೇಟೆ, ಮೋತಿ ವೃತ್ತ, ತೇರು ಬೀದಿ, ಇಂಡಸ್ಟ್ರೀಯಲ್ ಏರಿಯಾ ಹಂತ-1, ಮಹೇಶ್ ಪೈಪ್ಸ್, ಲಾರಿ ಟರ್ಮಿನಲ್, ಜೈನ್ ಮಾರ್ಕೆಟ್, ಸಾಯಿ ಕಾಲೋನಿ, ಎಪಿಎಂಸಿ, ರಾಣಿತೋಟ, ಮರಿಸ್ವಾಮಿ ಮಠ, ದೊಡ್ಡ ಮಾರ್ಕೆಟ್, ತೋಪಿಗಲ್ಲಿ, ಬೊಮ್ಮನಾಳ್ ರೋಡ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ದೌರ್ಜನ್ಯ ಪ್ರಕರಣಗಳಲ್ಲಿ ನಿರ್ಲಕ್ಷ್ಯ ಸಲ್ಲದು : ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.3-ಜಿಲ್ಲೆಯಲ್ಲಿ ದಾಖಲಾದ ದೌರ್ಜನ್ಯ ಪ್ರಕರಣಗಳ ಕುರಿತು ನಿರ್ಲಕ್ಷ್ಯ ಸಲ್ಲದು ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಮಟ್ಟದ ಜಾಗೃತಿ ನಿಯಂತ್ರಣ ಹಾಗೂ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುವ ಮೂಲಕ ಇಂತಹ ಘಟನೆಗಳ ಮೇಲೆ ನಿಗಾವಹಿಸುವ ಕೆಲಸವಾಗಬೇಕು. ಜನ ಭಯದಿಂದ ಬದುಕುವಂತಾಗಬಾರದು. ಸಾಮಾನ್ಯ ಜನ ನೆಮ್ಮದಿಯಿಂದ ಬದುಕುವಂತಹ ವಾತಾವರಣ ಸೃಷ್ಟಿಯಾಗಬೇಕಿದೆ. ಅದಕ್ಕಾಗಿ ಆಡಳಿತ ಚುರುಕಾಗಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಾತಿ ಜಾತಿಗಳ ನಡುವೆ ಬಿರುಕು ತುಂಬುವವರ ಮೇಲೆ ನಿಗಾವಹಿಸಬೇಕು. ಭಯ ಹುಟ್ಟಿಸುವಂತ ಕೆಲಸ ಆಗಬಾರದು. ಇಂತಹ ಘಟನೆಗಳು ಆಗದಂತೆ ಚುರುಕಾಗಿ ಕಾರ್ಯನಿರ್ವಹಿಸಬೇಕು. ಬೇಜಬ್ದಾರಿ, ನಿರ್ಲಕ್ಷ ತೋರುವವರ ಮೇಲೆ ನಿರ್ದಾಕ್ಷಣ್ಯವಾಗಿ ಕ್ರಮಕೈಗೊಳ್ಳಲಾಗುವುದು ಎಂದ ಸಚಿವ ತಿಮ್ಮಾಪೂರ, ಸೊಕನಾದಗಿ ಗ್ರಾಮದಲ್ಲಿ ಕಳೆದ 15 ದಿನಗಳ ಹಿಂದೆ ಸಾಮೂಹಿಕ ಹಲ್ಲೆ ಹಾಗೂ ದೌರ್ಜನ್ಯ ಘಟನೆ ನಡೆದಿದೆ. ಭಯದ ವಾತಾವರಣ ನಡೆದಿದೆ. ಆದರೂ ಅಧಿಕಾರಿಗಳು ಶಾಂತಿ ಸಭೆ ಏಕೆ ಮಾಡಲಿಲ್ಲ. ಸಂಬಂಧಿಸಿದ ಅಧಿಕಾರಿಗಳು ಸಹ ಭೇಟಿ ನೀಡದೇ ಇರುವುದು ಕರ್ತವ್ಯದಲ್ಲಿ ನಿರ್ಲಕ್ಷ ಎದ್ದು ತೋರುತ್ತದೆ. ಸರಿಯಾಗಿ ಕೆಲಸ ಮಾಡದಿದ್ದರೆ ಬೇರೆ ಜಿಲ್ಲೆಗೆ ಹೋಗುವಂತೆ ಅಧಿಕಾರಿಗಳಿಗೆ ಕಡಕ ಸೂಚನೆ ನೀಡಿದರು.

ಕಳೆದ 2024-25ನೇ ಸಾಲಿಗೆ ಒಟ್ಟು 53 ಪ್ರಕರಣಗಳು ದಾಖಲಾಗಿದ್ದು, 15 ಪ್ರಕರಣಗಳು ಮಾತ್ರ ಬಾಕಿ ಉಳಿದಿರುತ್ತದೆ. ಅದೇ ರೀತಿ ಎಪ್ರೀಲ್‌ದಿಂದ ಮೇ ಮಾಹೆಯವರೆಗೆ 25 ಪ್ರಕರಣಗಳು ದಾಖಲಾಗಿರುವುದಾಗಿ ಸಭೆಗೆ ತಿಳಿಸಿದಾಗ ತಾಲೂಕಾವಾರು ಮಾಹಿತಿ ಕೇಳಿದಾಗ ಸರಿಯಾದ ಮಾಹಿತಿ ನೀಡದೇ ಇರುವುದರಿಂದ ಅಸಮಾಧಾನಗೊಂಡ ಸಚಿವರು ಪ್ರತಿಯೊಂದು ಪ್ರಕರಣಗಳ ಬಗ್ಗೆ ಸಂಪೂರ್ಣ ಮಾಹಿತಿಯೊಂದಿಗೆ ಸಭೆಗೆ ಹಾಜರಾಗಬೇಕು. ದೌರ್ಜನ್ಯ ಪ್ರಕರಣಗಳ ಬಗ್ಗೆ ಆಗಾಗ್ಗೆ ಸಭೆ ನಡೆಸಲು ತಿಳಿಸಿದರು.

ಜಿಲ್ಲೆಯಲ್ಲಿ ಗುಂಡನಪಲ್ಲೆ, ಚೌಡಾಪೂರ, ಬೇವೂರ, ಕೆರೂರ, ಮುಷ್ಠಿಗೇರಿ, ಹೆಗ್ಗೂರು ಸೇರಿದಂತೆ ವಿವಿದೆಡೆ ದೌರ್ಜನ್ಯ ನಡೆದಿವೆ. ಆದರೆ ಅಧಿಕಾರಿಗಳು ತುರ್ತಾಗಿ ಕ್ರಮಕೈಗೊಂಡಿಲ್ಲ. ಬೀಳಗಿ ತಾಲೂಕಿನ ಬಾಬು ಜಗಜೀವನರಾಮ ಭವನ ಮಂಜೂರಾಗಿದ್ದರು ಕೂಡಾ ಇಲಾಖೆಯವರು ಸದರಿ ಅನುದಾನವನ್ನು ಬೇರೆ ಕಡೆಗೆ ವರ್ಗಾಯಿಸಿರುವದರಿಂದ ಅಲ್ಲಿಯ ಕೆಲಸ ಕುಂಟಿತಗೊಂಡಿದೆ. ಅನುದಾನ ಬೇರೆಡೆ ವರ್ಗಾವಯಿಸಿದರ ಉದ್ದೇಶ ತಿಳಿದುಕೊಂಡು ಮಾಹಿತಿ ನೀಡಬೇಕು. ಅಲ್ಲದೇ ಸದರಿ ಕಾಮಗಾರಿ ಪೂರ್ಣಗೊಳಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿ.ಪಂ ಸಿಇಓ ಕಳೆದ ಸಾಲಿನಲ್ಲಿ ಗ್ರಾಮ ಪಂಚಾಯತ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ, ಪಂಗಡದ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಶೇ.25 ಅನುದಾನವನ್ನು ನಿಗದಿತ ಅವಧಿಯಲ್ಲಿ ಸಂಪೂರ್ಣ ಖರ್ಚು ಮಾಡಲಾಗಿದೆ. ವಿಶೇಷ ಘಟಕ ಯೋಜನೆಯಡಿ ಶೇ.76 ರಷ್ಟು ಹಾಗೂ ಗಿರಿಜನ ಯೋಜನೆಯಡಿ ಶೇ.100 ರಷ್ಟು ಪ್ರಗತಿ ಸಾಧಿಸಿರುವುದಾಗಿ ಸಭೆಗೆ ತಿಳಿಸಿದರು. ಸದರಿ ಅನುದಾನವನ್ನು ಹೊಲಿಗೆ ಯಂತ್ರ, ಶಿಕ್ಷಣಕ್ಕಾಗಿ ಪುಸ್ತಕ ಖರೀದಿ, ಅಂತ್ಯ ಸಂಸ್ಕಾರಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಸೇರಿದಂತೆ ನಾಮನಿರ್ದೇಶಿತ ಸದಸ್ಯರು ಉಪಸ್ಥಿತರಿದ್ದರು.

# ಮೆಡಿಕಲ್ ಕಾಲೇಜಿಗೆ ಭೂಮಿ ಹಸ್ತಾಂತರಕ್ಕೆ ನಿರ್ಧಾರ-ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.3-ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಬಾಗಲಕೋಟೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸರ್ಕಾರದ ಸಮ್ಮತಿ ದೊರೆತಿ-ದ್ದು, ಇದಕ್ಕಾಗಿ ಬಿಟಿಡಿಎ ದಿಂದ ಭೂಮಿ ನೀಡಲು ನಿರ್ಧರಿಸಲಾಗಿದೆ ಎಂದು ಶಾಸಕ ಎಚ್.ವಾಯ್. ಮೇಟಿ ಹೇಳಿದರು.

ಮಂಗಳವಾರ ನಡೆದ ಬಿಟಿಡಿಎ ಬೋರ್ಡ ಸಭೆಯ ನಂತರ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಶಾಸಕರು, ಚುನಾವಣೆಯಲ್ಲಿ ನೀಡಿದ ಭರವಸೆಯಂತೆ ಮೆಡಿಕಲ್ ಕಾಲೇಜು ಸ್ಥಾಪನೆಗೆ ಈಗಾಗಲೇ ಸಮ್ಮತಿ ದೊರೆತು, ಇದಕ್ಕಾಗಿ ವಿಶೇಷ ಅಧಿಕಾರಿಯನ್ನು ಸಹ ಸರ್ಕಾರ ನೇಮಕ ಮಾಡಿದೆ ಎಂದರು.

ತಾತ್ಕಾಲಿಕವಾಗಿ ಖಾಲಿ ಇರುವ ಶಾಲಾ ಕಟ್ಟಡ, ಕಚೇರಿಗಳನ್ನು ಕಾಲೇಜಿಗೆ ನೀಡಲು ಸೂಚಿಸಲಾಗಿದೆ. ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ನೀಡಲಾಗಿದ್ದ ನವನಗರದ ಸೆಕ್ಟರ್ 1 ಮತ್ತು 13 ನ್ನು ರದ್ದುಪಡಿಸಿ ಮೆಡಿಕಲ್ ಕಾಲೇಜಿಗೆ ನೀಡಲಾಗುವುದು. ಈ ಸಂಬಂಧ ಬೋರ್ಡ್ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಮೇಟಿ ತಿಳಿಸಿದರು.

ಸುಸಜ್ಜಿತ ಮಾರುಕಟ್ಟೆ ನಿರ್ಮಿಸಲು 200 ಎಕರೆ ಜಮೀನು ಮೀಸಲಿಡಲು ಯೋಜನೆ ರೂಪಿಸಲಾಗಿದೆ. ಮುಂಬರುವ ದಿನಗಳಲ್ಲಿ ಅಂತಿಮ ಸ್ವರೂಪ ನೀಡಲಾಗುವುದು. ಬಾಣಾಪುರ-ಗದ್ದನಕೇರಿ ಹೆದ್ದಾರಿ ನಿರ್ಮಿಸಲು ಮೇಲುಸೇತುವೆ ಮಾಡಲಾಗುತ್ತಿದೆ. ಇದರಿಂದ ಹಳೇ ಬಾಗಲಕೋಟೆ ನಗರದ ದೊಡ್ಡ ಸಾಬಣ್ಣ ಓಣಿ ನಿವಾಸಿಗಳು ಮನೆ ಕಳೆದುಕೊಳ್ಳುತ್ತಿದ್ದಾರೆ. ಅವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಅವಕಾಶ ಮಾಡಿಕೊಡಲಾಗುವುದು. ಬೇರೆ ಮಾರ್ಗದಲ್ಲಿ ಬಿಟಿಡಿಎದಿಂದ ಜಮೀನು ಒದಗಿಸಿ ಅವರಿಗೆ ನಿವೇಶನ ನೀಡಲಾಗವುದು ಎಂದು ತಿಳಿಸಿದರು.

ಮಾಲ್ ಮಾದರಿ ಬೃಹತ್ ಕಟ್ಟಡ ನಿರ್ಮಿಸಲು ನಗರಸಭೆ ಬಿಟಿಡಿಎಗೆ ಕೋರಿದೆ. ಇದಕ್ಕಾಗಿ ನಗರಸಭೆ ಬಳಿ 38 ಕೋಟಿ ರೂ.,ಇದ್ದು, ನಗರಸಭೆ 7 ಎಕರೆ ಜಮೀನು ಕೇಳಿದ್ದು, ಪರಿಶೀಲನೆ ಮಾಡಿ ನೀಡಲಾಗುವುದು ಎಂದು ಶಾಸಕ ಎಚ್.ವಾಯ್.ಮೇಟಿ ಭರವಸೆ ನೀಡಿದರು.

20 ಕ್ಕೂ ಹೆಚ್ಚು ಜನ ಸಂತ್ರಸ್ತರಿಗೆ ಈ ಸಂದರ್ಭದಲ್ಲಿ ನಿವೇಶನ ಹಕ್ಕು ಪತ್ರ ನೀಡಲಾಯಿತು. ಬಿಟಿಡಿಎ ಮುಖ್ಯ ಇಂಜಿನಿಯರ ಡಿ.ಬಸವರಾಜ, ಡಿಸಿ ಜಾನಕಿ ಕೆ.ಎಂ., ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ನಾಗರಾಜ ಹದ್ಲಿ ಇತರರು ಇದ್ದರು.

# ಜಿಲ್ಲಾ ಯೋಜನಾಧಿಕಾರಿಗಳ ಹುದ್ದೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.3-ದೇವದಾಸಿ ಪುನರ್ವಸತಿ ಯೋಜನೆಯಡಿ ಜಿಲ್ಲಾ ಯೋಜನಾಧಿಕಾರಿಗಳ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು ನಿವೃತ್ತ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳು, ಎಂಎಸ್‌ಡಬ್ಲೂ, ಎಂಎ ಇನ್ ಸೋಸಿಯಾಲಜಿ, ಎಂಎ-ಎಂಎಸ್ಸಿ ಇನ್ ಪಿಸ್ಕಾಲಜಿ ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ನಿವೃತ್ತ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಇದ್ದಲ್ಲಿ 65 ವರ್ಷ ವಯಸ್ಸಿನೊಳಗೆ ಇರಬೇಕು.

ಅರ್ಹತೆಹೊಂದಿದ ಅಭ್ಯರ್ಥಿಗಳು ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಹಾಗೂ ಇತ್ತೀಚಿನ ಭಾವಚಿತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಿ ಜೂ. 20ರವರಿಗೆ ಕಛೇರಿಯ ಅವಧಿಯೊಳಗೆ ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ 2ನೇ ಮಹಡಿ, ಕೊಠಡಿ ಸಂಖ್ಯೆ 224 ಇವರಿಗೆ ಅರ್ಜಿ ಸಲ್ಲಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಕ್ರೀದ್ ಶಾಂತಿ ಸಭೆ-ಪ್ರಾಣಿವಧೆ ತಡೆಗೆ ಕಟ್ಟುನಿಟ್ಟಿನ ಕ್ರಮ

# ಶಾಂತಿ, ಸೌಹಾರ್ದತೆಯಿಂದ ಹಬ್ಬ ಆಚರಿಸಿ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂನ್.3-ಜೂನ್ 7 ರಂದು ಜರುಗಲಿರುವ ಬಕ್ರೀದ್ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸುವಂತೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ.ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಬಕ್ರೀದ್ ಹಬ್ಬದ ಅಂಗವಾಗಿ ಜರುಗಿದ ಶಾಂತತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೇಶದಲ್ಲಿ ಆಚರಿಸಲಾಗುತ್ತಿರುವ ಎಲ್ಲ ಧರ್ಮಿಯರ ಹಬ್ಬಗಳು ಜಾಗತಿಕ ಮನ್ನಣೆ ಪಡೆದಿವೆ. ಆ ದಿಶೆಯಲ್ಲಿ ಬಕ್ರೀದ್ ಹಬ್ಬವನ್ನು ಸಂಭ್ರಮದಿಂದ ಆಚರಿಸಬೇಕು. ಶಾಂತಿ, ಸುವ್ಯವಸ್ಥೆ ಕಾಪಾಡಲು ಕಾನೂನು ಪಾಲಿಸುವ ಕೆಲಸವಾಗಬೇಕು ಎಂದರು.

ಹಬ್ಬಗಳು ಧನಾತ್ಮಕ ಚಿಂತನೆಗಳಿಂದ ಹೆಸರುವಾಸಿಯಾಗಬೇಕೆ ಹೊರತು ಋಣಾತ್ಮಕ ಘಟನೆಗಳಿಗೆ ಅವಕಾಶ ಕೊಡಬಾರದು. ಹಬ್ಬಗಳ ಆಚರಣೆಗಳಿಗೆ ಬೇಕಾಗುವ ಸಹಕಾರಕ್ಕೆ ಜಿಲ್ಲಾಡಳಿತ ಸದಾ ಸಿದ್ದವಿದ್ದು, ಶಾಂತತೆಯಿಂದ ಹಬ್ಬವನ್ನು ಆಚರಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಕಾನೂನುಗಳನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಮಾಡಲಾಗಿದ್ದು, ಅವುಗಳನ್ನು ನಿರ್ವಹಿಸುವ ಕಾರ್ಯ ನಮ್ಮದ್ದಾಗಿದೆ. ಸಾರ್ವಜನಿಕರಿಗೆ ತೊಂದರೆ ಕೊಡುವ ಉದ್ದೇಶ ಇಲಾಖೆಯದಲ್ಲ. ಜಿಲ್ಲೆಯಾದ್ಯಂತ ಆಚರಿಸಲ್ಪಡುವ ಬಕ್ರೀದ್ ಹಬ್ಬದ ನಿಮಿತ್ಯ 8 ಚಿತಾ ವಾಹನಗಳು ಕಾರ್ಯನಿರ್ವಹಿಸಲಿವೆ. ಅಕ್ರಮ ಜಾನುವಾರ ಸಾಗಾಣಿಕೆ ತಡೆಗಾಗಿ 25 ಚೆಕ್‌ಪೋಸ್ಟಗಳನ್ನು ತೆರೆಯಲಾಗಿದೆ. ಈಗಾಗಲೇ ಜೂನ್ 1 ರಿಂದ ಎಲ್ಲ ಕಸಾಯಿಖಾನೆಗಳನ್ನು ಬಂದ್ ಮಾಡಲಾಗಿದೆ. ಭಾವನೆಗಳಿಗೆ ಧಕ್ಕೆ ಬರದ ಹಾಗೆ ಹಬ್ಬ ಆಚರಿಸಬೇಕು ಎಂದು ತಿಳಿಸಿದರು.

ಪಶು ಇಲಾಖೆಯ ಉಪನಿರ್ದೇಶಕ ಎಸ್.ಎಚ್.ಕರಡಿಗುಡ್ಡ ಮಾತನಾಡಿ, ಅನಧಿಕೃತವಾಗಿ ಆಕಳು, ಕರು, ಎತ್ತು, ಒಂಟೆ ಹಾಗೂ 13 ವರ್ಷದೊಳಗಿನ ಎಮ್ಮೆಗಳನ್ನು ಸಾಗಾಣಿಕೆ ಮಾಡುವುದು ಮತ್ತು ವಧೆ ಮಾಡುವದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಬಕ್ರೀದ್ ಹಬ್ಬದ ಸಂದರ್ಭದಲ್ಲಿ ದನ, ಎಮ್ಮೆಗಳ ವಧೆಯಾಗುವ ಮತ್ತು ಅಕ್ರಮ ಸಾಗಾಣಿಕೆ ಆಗುವ ಸಾಧ್ಯತೆ ಇರುತ್ತದೆ. ಕೃಷಿ ಮತ್ತು ಹೈನುಗಾರಿಕೆ ಉದ್ದೇಶಗಳಿಗೆ ಮಾತ್ರ ಜಾನುವಾರು ಸಾಗಾಣಿಕೆ ಮಾಡಲು ಕಾಯ್ದೆಯಲ್ಲಿ ಅವಕಾಶವಿದ್ದು, ಪಶು ಸಂಗೋಪನಾ ಇಲಾಖೆಯಿಂದ ಅಧಿಕೃತ ಅನುಮತಿ ಪತ್ರ ಪಡೆಯುವುದು ಅವಶ್ಯಕತೆ ಇದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಸುರುಖೋಡ, ತಹಶೀಲ್ದಾರ ಅಮರೇಶ ಪಮ್ಮಾರ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್. ಸೇರಿದಂತೆ ಮುಖಂಡರಾದ ಅಥಣಿ, ಎ.ಎ.ದಾಂಡಿಯಾ, ಅಶೋಕ ಲಿಂಬಾವಳಿ, ಶ್ರೀನಿವಾಸ ಬಳ್ಳಾರಿ ಉಪಸ್ಥಿತರಿದ್ದರು.

# ನಾಳೆ ವಿಶ್ವ ಪರಿಸರ ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.3-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅರಣ್ಯ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಆಶ್ರಯದಲ್ಲಿ ಜೂನ್ 5 ರಂದು ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9.30 ಗಂಟೆಗೆ ನವನಗರದ ಆರ್.ಎಂ.ಎಸ್.ಎ ಆದರ್ಶ ವಿದ್ಯಾಲಯದಲ್ಲಿ ಜರುಗುವ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ ಉದ್ಘಾಟಿಸುವರು. ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿ.ಪಂ ಸಿಇಓ ಶಶೀಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಬಹುಮಾನ ವಿತರಣೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಎಚ್.ಜಿ.ಮಿರ್ಜಿ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಿ.ಜಿ.ಮಿರ್ಜಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಭಾಗವಹಿಸಲಿದ್ದಾರೆ. ವಿಶೇಷ ಉಪನ್ಯಾಸಕರಾಗಿ ಪಿ.ಡಿ.ವಾಲಿಕಾರ ಆಗಮಿಸಲಿದ್ದಾರೆ.

# ಉಮಾಪತಿಶಾಸ್ತ್ರಿಗಳು ಪ್ರತಿಭೆ, ಪಾಂಡಿತ್ಯಗಳ ಆಗರ : ಪ್ರಭುಸ್ವಾಮಿಗಳು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.3-ಜಿ.ಎಂ.ಉಮಾಪತಿಶಾಸ್ತ್ರಿಗಳು ಹಸ್ತಪ್ರತಿ, ಪ್ರಾಚೀನ ಗ್ರಂಥ ಸಂಪಾದನೆ ಕ್ಷೇತ್ರದಲ್ಲಿ ಮಾಡಿದ ಸೇವೆ ಅನನ್ಯವಾಗಿದ್ದು ಅವರು ವಿದ್ವತ್ತು, ಪ್ರತಿಭೆ, ಪಾಂಡಿತ್ಯಗಳ ಆಗರವೇ ಆಗಿದ್ದರು ಎಂದು ಚರಂತಿಮಠ ಪೂಜ್ಯಶ್ರೀ ಪ್ರಭುಸ್ವಾಮಿಗಳು ಹೇಳಿದರು.

ನಗರದ ಶಿವಾನುಭವ ಸಮಿತಿ ಹಾಗೂ ಸಾಹಿತ್ಯ ಸಂಸ್ಕೃತಿ ಸಂವಹನ ವೇದಿಕೆ ಸಹಯೋಗದಲ್ಲಿ ಚರಂತಿಮಠದ ಶಿವಾನುಭವ ಮಂಗಲ ಭವನದಲ್ಲಿ ನಡೆದ ಜಿ.ಎಂ.ಉಮಾಪತಿಶಾಸ್ತ್ರಿಗಳ ಸಮಗ್ರ ಸಾಹಿತ್ಯ ವಿಚಾರ ಸಂಕಿರಣ ಮತ್ತು ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಗ್ರಂಥ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಪ್ರೊ.ಜಿ.ಎಂ.ಉಮಾಪತಿಶಾಸ್ತ್ರಿಗಳು ಕನ್ನಡ ನಾಡು ಕಂಡ ಅಪರೂಪದ ವಿದ್ವಾಂಸರು. ಬಾಗಲಕೋಟೆಗೂ ಉಮಾಪತಿಶಾಸ್ತ್ರಿಗಳಿಗೂ ಬಿಡಿಸಲಾರದನಂಟು. 1930ರಲ್ಲಿಯೇ ಉಮಾಪತಿಶಾಸ್ತ್ರಿಗಳು ಬಾಗಲಕೋಟೆ ಜಿಲ್ಲೆಯ ಶಿವಯೋಗಮಂದಿರದಲ್ಲಿ ವಟುಸಾಧಕರಾಗಿದ್ದರು. 1955ರಲ್ಲಿ ಬಾಗಲಕೋಟೆಯಲ್ಲಿ ವೃತ್ತಿಯನ್ನಾರಂಭಿಸಿ, ಶಿವಯೋಗಮಂದಿರದಿಂದ ಸುಕುಮಾರ ಎಂಬ ಮೌಲಿಕ ಪತ್ರಿಕೆಯನ್ನು ಸಂಪಾದಿಸಿದರು ಎಂದು ಪೂಜ್ಯರು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಧಾರವಾಡದ ಹಿರಿಯ ವಿದ್ವಾಂಸ ಡಾ.ವೀರಣ್ಣ ರಾಜೂರ ಮಾತನಾಡಿ, ಉಮಾಪತಿಶಾಸ್ತ್ರಿಗಳ ದತ್ತಿ ನಿಧಿ ಸ್ಥಾಪಿಸಬೇಕು. ಅವರು ನಿಜಗುಣ ಶಿವಯೋಗಿಗಳ ಕೈವಲ್ಯ ಪದ್ದತಿ ಗ್ರಂಥ ಸೇರಿದಂತೆ ಅವರ ಹಸ್ತಪ್ರತಿಗಳ ಕುರಿತಾಗಿ ಜನರಲ್ಲಿ ಜಾಗೃತಿ ಮೂಡುವದಕ್ಕಿಂತ ಮೊದಲೆ ಅವುಗಳ ಬಗ್ಗೆ ಜಾಗೃತಿ ಮೂಡಿಸಿದರು ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಾ.ಕೆ.ರವಿಂದ್ರನಾಥ, ಸಂಶೋಧನಾ ಕ್ಷೇತ್ರದಲ್ಲಿ ಮಾದರಿ ಸಂಶೋಧನೆಗೆ ಅಡಿಪಾಯ ಹಾಕಿದವರು ಉಮಾಪತಿಶಾಸ್ತ್ರಿಗಳು ಎಂದರು. ಸಾಹಿತ್ಯ ಸಂಸ್ಕೃತಿ ಸಂವಹನ ವೇದಿಕೆ ಸಂಯೋಜಕ ಡಾ.ವಿಜಯಕುಮಾರ ಕಟಗಿಹಳ್ಳಿಮಠ ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಅಧ್ಯಕ್ಷತೆಯನ್ನು ಇಂಡಿ-ಯ ಹಿರಿಯ ವಿದ್ವಾಂಸ ಡಾ.ಎಸ್.ಕೆ.ಕೊಪ್ಪ ವಹಿಸಿದ್ದರು. ಶಿವಮೊಗ್ಗ ಅನಂತಪುರದ ಕಲ್ಮಠ ಮುರಘರಾಜೇಂದ್ರಮಹಾಸಂಸ್ಥಾನ ಮಠದ ಪೂಜ್ಯಶ್ರೀ ಡಾ.ಮಲ್ಲಿಕಾರ್ಜುನ ಮುರುಘರಾಜೇಂದ್ರಮಹಾಸ್ವಾಮಿಗಳು ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು. ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಉಪಸ್ಥಿತರಿದ್ದರು,

ಬಸವೇಶ್ವರ ಕಲಾ ಮಹಾವಿದ್ಯಾಲಯದ ಸಂಗೀತ ವಿಭಾಗದ ವಿದ್ಯಾರ್ಥಿಗಳಾದ ಕೃತಿಕಾ ಹಾಗೂ ಕುಶಾಲ ಪಾಟೀಲ ಪ್ರಾರ್ಥನೆ ಸಲ್ಲಿಸಿದರು. ಡಾ.ಬಸವರಾಜ ಖೋತ ಸ್ವಾಗತಿಸಿ, ಪರಿಚಯಿಸಿದರು. ಪ್ರಾಚಾರ್ಯ ಡಾ.ಜಗನ್ನಾಥ ಚವ್ಹಾಣ ವಂದಿಸಿದರು. ಡಾ.ಎಸ್.ಡಿ.ಕೆಂಗಲಗುತ್ತಿ ಹಾಗೂ ನಂದಿನಿ ದೊಡಮನಿ ಕಾರ್ಯಕ್ರಮ ನಿರೂಪಿಸಿದರು.

ನಂತರ ನಡೆದ ಸಂಶೋಧನೆ ಕುರಿತು ಗೋಷ್ಠಿಯ ಅಧ್ಯಕ್ಷತೆಯನ್ನು ಹೊಸಪೇಟೆಯ ಡಾ.ಕೆ.ರವಿಂದ್ರನಾಥ ವಹಿಸಿದ್ದರು. ಡಾ.ಸಿದ್ದರಾಮಯ್ಯ ಮಠಪತಿ ಪ್ರಾಧ್ಯಾಪಕ ಸಾಹಿತಿ ಬಗ್ಗೆ, ಡಾ.ಕಾವ್ಯಾ.ಎಂ. ಜೀವನ ಕುರಿತು, ಪ್ರಕಾಶ ಗಿರಿಮಲ್ಲನ್ನವರ ಗ್ರಂಥ ಸಂಪಾಧನೆ ಬಗ್ಗೆ, ಡಾ.ಕಲ್ಲಯ್ಯ ಹಿರೇಮಠ ಅವರು ಗ್ರಂಥ ಸಂಪಾದನೆ ಕೃತಿಗಳ ಬಗ್ಗೆ ಉಪನ್ಯಾಸ ನೀಡಿದರು. ಡಾ.ಆಯ್.ಕೆ.ಮಠದ, ಡಾ.ಜಿ.ಆಯ್.ನಂದಿಕೋಲಮಠ ನಿರೂಪಿಸಿದರು.

ಜೂನ್ 4 ರಿಂದ ಕಲಬುರಗಿ ಕೇಂದ್ರ ಬಸ್ ನಿಲ್ದಾಣದಲ್ಲಿ

# ಸರ್ಕಾರದ ಎರಡು ವರ್ಷಗಳ ಸಾಧನೆಯ ವಸ್ತು ಪ್ರದರ್ಶನ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂನ್.03.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಸರ್ಕಾರದ ಎರಡು ವರ್ಷದ ಸಾಧನೆ ಹಾಗೂ ಸರ್ಕಾರದ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವನ್ನು ಇದೇ ಜೂನ್ 4 ರಿಂದ 10 ರವರೆಗೆ ಏಳು ದಿನಗಳ ಕಾಲ ಪ್ರತಿದಿನ ಬೆಳಿಗ್ಗೆ 8 ರಿಂದ ರಾತ್ರಿ 8 ಗಂಟೆಯವರೆಗೆ ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದ್ದು,

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ವೀಕ್ಷಿಸಬೇಕೆಂದು ಕಲಬುರಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ ಅವರು ಮನವಿ ಮಾಡಿದ್ದಾರೆ.

# ಕಲಬುರಗಿ ಉತ್ತರ ವಲಯದ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಬಳ್ಳಾರಿಯಿಂದ ಕಲಬುರಗಿಗೆ ಸ್ಥಳಾಂತರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.3-ಬಳ್ಳಾರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕಲಬುರಗಿ ಉತ್ತರ ವಲಯದ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯನ್ನು ಆಡಳಿತಾತ್ಮಕ ಕಾರಣದಿಂದ 2025ರ ಜೂನ್ 1 ರಿಂದ ಅನ್ವಯವಾಗುವಂತೆ ಕಲಬುರಗಿಗೆ ಸ್ಥಳಾಂತರಿಸಲಾಗಿದೆ.

ಈ ಕಚೇರಿಯು ಕಲಬುರಗಿ ನಾಗನಹಳ್ಳಿ ರಸ್ತೆಯ ಕೋರಂಟಿ ಹನುಮಾನ ದೇವಸ್ಥಾನ ಹತ್ತಿರದ ವಕೀಲರ ಬಡಾವಣೆಯ ಜಿ.ಬಿ.ಕಾಂಪ್ಲೇಕ್ಸ್‌ನ 1ನೇ ಮಹಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಕಲಬುರಗಿ ಉತ್ತರ ವಲಯದ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.


**ಕನಾಟಕ ಸರ್ಕಾರ**
**(ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)**
ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಶಿಶು ಅಭಿವೃದ್ಧಿ ಯೋಜನೆ ಲಿಂಗಸುಗೂರ.
**ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಬೆಂಗಳೂರು ಬೈಪಾಸ್ ರಸ್ತೆ, ಎಸ್.ಬಿ.ಐ.ಬ್ಯಾಂಕ್ ಹತ್ತಿರ ಲಿಂಗಸುಗೂರು**
E.mail.cdpolgsr@gmail.com Phone No-08537-257257
ಸಂಖ್ಯೆ:ಶಿಅಯೋಲಿಂ/ಕ.ವಾಹನ/ಬಾಡಿಗೆ/ಟೆಂಡರ/2025-26 ದಿನಾಂಕ:03-06-2025

**:: ಅಲ್ಪಾವದಿ ಮ್ಯಾನ್ಯುಯಲ್ ಟೆಂಡರ್ ಪ್ರಕಟಣೆ ::**

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಲಿಂಗಸುಗೂರ ಕಛೇರಿಯ ಉಪಯೋಗಕ್ಕಾಗಿ ಬಾಡಿಗೆ ಆಧಾರದ ಮೇಲೆ ವಾಹನವನ್ನು ಪಡೆಯುವ ಸಂಬಂಧ ಸ್ವಂತ ವಾಹನ ಹೊಂದಿದ ಮಾಲೀಕರು/ಟ್ರಾವೇಲ್ಸ್ ಏಜನ್ಸಿಗಳಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮ 2000-ರ ನಿಯಮದಂತೆ ಟೆಂಡರನ್ನು ಆಹ್ವಾನಿಸಲಾಗಿದೆ.

| | |
|---|---|
| 1) ಟೆಂಡರ್ ಪ್ರಕಟಣೆ ದಿನಾಂಕ: | 03-06-2025. |
| 2) ಟೆಂಡರ್ ವಾರ್ಷಿಕ ಅಂದಾಜು ಮೊತ್ತ : | ರೂ.4.80 ಲಕ್ಷ |
| 3) ಇ.ಎಮ್.ಡಿ ಮೊತ್ತ : | ರೂ.12,000=00 |
| 4) ಟೆಂಡರ್ ಅರ್ಜಿ ನಮೂನೆ ಪಡೆಯಲು ಪ್ರಾರಂಭದ ದಿನಾಂಕ: | 03-06-2025. |
| 5) ಟೆಂಡರ್ ಅರ್ಜಿ ನಮೂನೆ ಪಡೆಯಲು ಕೊನೆಯ ದಿನಾಂಕ ಮತ್ತು ಸಮಯ: | 11-06-2025 ರ ಮಧ್ಯಾಹ್ನ 1:30 ಗಂಟೆ ವರೆಗೆ |
| 6) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ : | 12-06-2025 ರ ಮಧ್ಯಾಹ್ನ 1:30 ಗಂಟೆ ವರೆಗೆ |
| 7) ತಾಂತ್ರಿಕ ಬಿಡ್, ಮತ್ತು ಹಣಕಾಸು ಬಿಡ್ ತೆರೆಯುವ ದಿನಾಂಕ, ಸಮಯ ಮತ್ತು ಸ್ಥಳ : | 16-06-2025 ರಂದು ಬೆಳ್ಳಗೆ.11-30 ಗಂಟೆಗೆ ಶಿಶ ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರ |

ಟೆಂಡರ್ ಸಲ್ಲಿಸಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯದ ನಂತರ ಬರುವ ಟೆಂಡರಗಳನ್ನು ತಿರಸ್ಕರಿಲಾಗುವುದು, ಟೆಂಡರ್ ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಲಿಂಗಸುಗೂರ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ಸಹಿ/-
**ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು**
**ಲಿಂಗಸುಗೂರ**




ಗುರುಮಠಕಲ, ಜು. 03. ಪಟ್ಟಣದ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕ ಶ್ರೀ ದೇವೇಂದ್ರಪ್ಪ, ಡಿ. ಧೂಳಖೇಡ ರವರ ಸೇವಾ ವಯೋ ನಿವೃತ್ತಿ ಅಂಗವಾಗಿ ಡಿ. ಎಸ್.ಎಸ್. ಗುರುಮಿಠಕಲ್ ತಾಲೂಕಾಧ್ಯಕ್ಷರಾದ ರಂಗಸ್ವಾಮಿ ದಾಸರಿ ಕೊಂಕಲ್ ಗೌರವಿಸಿ ಸನ್ಮಾನಿಸಿದರು.

